ಬೀದರ * ಕಲಬುರಗಿ * ರಾಯಚೂರು * ಕೊಪ್ಪಳ * ಬಳ್ಳಾರಿ * ಬಾಗಲಕೋಟೆ * ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ
Postal Registration No. BDR/054/2024-2026 • EMAIL ID:mallammanudi@gmail.com

# ಮಲ್ಲಮ್ಮ ನುಡಿ

Mallammanudi Regional NewsPaper
ಸಂಪಾದಕರು: ರಮೇಶರೆಡ್ಡಿ
ಪ್ರಾದೇಶಿಕ ಕನ್ನಡ ದಿನಪತ್ರಿಕೆ ಮೊ.9448604450

VOLUME-ಸಂಪುಟ:12 | ISSUE- ಸಂಚಿಕೆ: 334 | PAGE- ಪುಟ 8 | ಶುಕ್ರವಾರ 03.01.2025 ಬೀದರ | RNI NO:KARKAN/2011/48371 | RS.ಬೆಲೆ 2/-

## ಪ್ರಯಾಣಿಕರಿಗೆ ಹೊಸ ವರ್ಷದ ಆಘಾತ: ಬಸ್ ಟಿಕೆಟ್ ದರ ಶೇ.15 ರಷ್ಟು ಹೆಚ್ಚಳಕ್ಕೆ ಸಂಪುಟ ಒಪ್ಪಿಗೆ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಜ.2: ರಾಜ್ಯ ಸರ್ಕಾರ ಹೊಸ ವರ್ಷಕ್ಕೆ ಬಸ್ ಪ್ರಯಾಣಿಕರಿಗೆ ಶಾಕ್ ನೀಡಿದ್ದು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ(ಏಖಖಖಿಅ)ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ(ಕೆಎಸ್‌ಆರ್‌ಟಿಸಿ) ಸೇರಿದಂತೆ ನಾಲ್ಕೂ ನಿಗಮಗಳ ಬಸ್ ಟಿಕೆಟ್ ದರವನ್ನು ಶೇ.15ರಷ್ಟು ಹೆಚ್ಚಳ ಮಾಡಲು ಗುರುವಾರ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

ಇಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಸಾರಿಗೆ ಸಂಸ್ಥೆಗಳ ಬಸ್ ಪ್ರಯಾಣ ದರವನ್ನು ಶೇಕಡಾ 15 ರಷ್ಟು ಹೆಚ್ಚಿಸಲು ಅನುಮೋದನೆ ನೀಡಲಾಗಿದೆ.

ಸಚಿವ ಸಂಪುಟ ಸಭೆ ಬಳಿಕ ಮಾತನಾಡಿದ ಸಚಿವ ಎಚ್‌ಕೆ ಪಾಟೀಲ್ ಅವರು, ಬಸ್ ಟಿ-ಕೆಟ್ ದರ ಹೆಚ್ಚಳಕ್ಕೆ ಸಚಿವ ಸಂಪುಟ ನಿರ್ಧರಿಸಿದ್ದು, ಜನವರಿ 5ರಿಂದ ಪರಿಷ್ಕೃತ ಟಿಕೆಟ್? ದರ ಅನ್ವಯವಾಗಲಿದೆ ಎಂದರು.

ನಾಲ್ಕು ಸಾರಿಗೆ ನಿಗಮಗಳ ಟಿಕೆಟ್? ದರ ಪರಿಷ್ಕರಿಸಿದ್ದೇವೆ. ಟಿಕೆಟ್ ದರ ಶೇ.15ರಷ್ಟು ಹೆಚ್ಚಿಸಲು ಅನುಮೋದಿಸಲಾಗಿದೆ. ದರ ಹೆಚ್ಚಳದಿಂದ ನಿತ್ಯ 7.84 ಕೋಟಿ ರೂ. ಆದಾಯ ಹೆಚ್ಚಳವಾಗುವ ಸಾಧ್ಯತೆ ಇದೆ ಎಂದು ಸಚಿವರು ತಿಳಿಸಿದರು. ಬಿಎಂಟಿಸಿ, ಕೆಎಸಆರ್‌ಟಿಸಿ, ಕೆಡಬ್ಲ್ಯುಕೆಆರ್ಟಿಸಿ ಮತ್ತು ಕೆಕೆಆರ್ಟಿಸಿ ಸೇರಿದಂತೆ ನಾಲ್ಕು ಸಾರಿಗೆ ನಿಗಮಗಳು ಈ ಹಿಂದೆ ಶೇ. 40 ರಷ್ಟು ದರ ಏರಿಕೆಗೆ ಪ್ರಸ್ತಾವನೆ ಸಲ್ಲಿಸಿದ್ದವು. ಡೀಸೆಲ್ ಬೆಲೆಯ ಏರಿಕೆಯನ್ನು ಗಮನಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದರು.

### ಬಸ್ ಪ್ರಯಾಣ ದರ ಶೇ.15ರಷ್ಟು ಹೆಚ್ಚಳಕ್ಕೆ ಮನವಿ; ಪ್ರಸ್ತಾವನೆ ಸಂಬಂಧ ಸರ್ಕಾರದ ಜೊತೆ ಚರ್ಚೆ: ರಾಮಲಿಂಗಾ ರೆಡ್ಡಿ



'ಬಿಎಂಟಿಸಿ ಬಸ್ ದರಗಳನ್ನು 2015ರಲ್ಲಿ ಮತ್ತು ಕೆಎಸ್‌ಆರ್‌ಟಿಸಿ, ಕೆಕೆಆರ್‌ಟಿಸಿ ಮತ್ತು ಎನ್‌ಡಬ್ಲ್ಯುಕೆಆರ್‌ಟಿಸಿಯ ದರಗಳನ್ನು 2020ರಲ್ಲಿ ಪರಿಷ್ಕರಿಸಲಾಯಿತು. ಈಗ ಡೀಸೆಲ್ ಮತ್ತು ಬಿಡಿಭಾಗಗಳ ಬೆಲೆಗಳು ಏರಿಕೆಯಾಗಿವೆ. ಜತೆಗೆ ಸಿಬ್ಬಂದಿ ವೇತನವೂ ಹೆಚ್ಚಿದೆ. ಈ ಎಲ್ಲ ಕಾರಣಗಳಿಂದ ಪ್ರಯಾಣ ದರ ಏರಿಕೆ ಅನಿವಾರ್ಯವಾಗಿದೆ ಎಂದು ಸಚಿವರು ಹೇಳಿದ್ದಾರೆ.

ಬಿಎಂಟಿಸಿ ಬಸ್ ದರವನ್ನು ಜನವರಿ 10, 2015 ರಂದು ಹೆಚ್ಚಳ ಮಾಡಲಾಗಿತ್ತು. ಹಾಗ ಡೀಸೆಲ್ ಬೆಲೆ ಲೀಟರ್‌ಗೆ 60.90 ರೂ. ಇತ್ತು. 10 ವರ್ಷಗಳ ಹಿಂದೆ ನಾಲ್ಕು ಸಾರಿಗೆ ನಿಗಮಗಳಿಗೆ ನಿತ್ಯ 9.16 ಕೋಟಿ ರೂ. ಡೀಸೆಲ್ ಬಳಕೆಯಾಗುತ್ತಿತ್ತು. ಈಗ ಅದು 13.21 ಕೋಟಿ ರೂ. ಗೆ ಏರಿಕೆಯಾಗಿದೆ. ಹೀಗಾಗಿ ಟಿಕೆಟ್ ದರ ಪರಿಷ್ಕರಣೆ ಅಗತ್ಯ ಎಂದು ಪಾಟೀಲ್ ಸಮರ್ಥಿಸಿಕೊಂಡರು.

ರಾಜ್ಯ ಸರ್ಕಾರವು 2,000 ಕೋಟಿ ರೂಪಾಯಿಯ ಎಲ್ಲಾ ಭವಿಷ್ಯ ನಿಧಿ(ಪಿಎಫ್) ಬಾಕಿಗಳನ್ನು ತೆರವುಗೊಳಿಸಿದೆ ಎಂದು ಸಚಿವರು ತಿಳಿಸಿದರು.

## ಎಫ್.ಡಿ.ಎ. ಲೋಕಾ ಬಲೆಗೆ




ಕಲಬುರಗಿ:ಜ.2:ಅಂಗನವಾಡಿ ಸಹಾಯಕಿ ಹುದ್ದೆಗೆ ನೇಮಕ ಮಾಡುವುದಾಗಿ 15 ಸಾವಿರ ರೂ. ಲಂಚ ಪಡೆಯುತ್ತಿದ್ದ ಸಿಡಿಪಿಒ ಕಚೇರಿಯ ಮಹಿಳಾ ಎಫ್.ಡಿ.ಎ ಸಿಬ್ಬಂದಿಯೋರ್ವರು ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಗುರುವಾರ ನಡೆದಿದೆ.

ಶಿಲ್ಪಾ ಎಂಬಾತರೆ ಲೋಕಾಯುಕ್ತ ಬಲೆಗೆ ಬಿದ್ದ ಎಫ್.ಡಿ.ಎ ಸಿಬ್ಬಂದಿಯಗಿದ್ದಾರೆ. ಅಂಗನವಾಡಿ ಸಹಾಯಕಿ ಹುದ್ದೆ ಕೊಡಿಸುವುದಾಗಿ ಮಹಿಳೆಯೊಬ್ಬರ ಬಳಿ ಶಿಲ್ಪಾ ಅವರು 50,000 ರೂ. ಲಂಚಕ್ಕೆ ಬೇಡಿಕೆಯಿಟ್ಟಿದ್ದರು. ಈಗಾಗಲೇ 35,000 ರೂ. ಪಡೆದಿದ್ದ ಶಿಲ್ಪಾ ಅವರು ಬಾಕಿ 15,000 ಪಡೆಯುತ್ತಿದ್ದ ವೇಳೆ ಲೋಕಾಯುಕ್ತರ ಕೈಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ತಿಳಿದುಬಂದಿದೆ.

ಅಧಿಕಾರಿಯನ್ನು ವಶಕ್ಕೆ ಪಡೆದ ಲೋಕಾಯುಕ್ತ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಬಸ್ ಟಿಕೆಟ್ ದರ ಏರಿಕೆ: ಸಿದ್ದರಾಮಯ್ಯ ಸರ್ಕಾರದ ಬಕಾಸುರ ಹೊಟ್ಟೆ ತುಂಬಿಸಲು ಜನ ಇನ್ನೆಷ್ಟು ಬೆಲೆ ತೆತ್ತಬೇಕು?



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಜ.2: ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಬಸ್ ಪ್ರಯಾಣ ದರವನ್ನು ಶೇ.15ರಷ್ಟು ಏರಿಕೆ ಮಾಡಲು ಅನುಮೋದನೆ ನೀಡಲಾಗಿದೆ. ಈ ಮೂಲಕ ಹೊಸ ವರ್ಷಕ್ಕೆ ರಾಜ್ಯದ ಜನರಿಗೆ ಸರ್ಕಾರ ಬಿಗ್ ಶಾಕ್ ನೀಡಿದೆ. ಸರ್ಕಾರದ ತೀರ್ಮಾನದ ವಿರುದ್ಧ ಜನರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಬಸ್ ಟಿಕೆಟ್ ದರ ಏರಿಕೆಯನ್ನು ವಿಪಕ್ಷ ನಾಯಕ ಆರ್.ಅಶೋಕ್ ಖಂಡಿಸಿದ್ದು, 'ಸಿಎಂ ಸಿದ್ದರಾಮಯ್ಯನವರೇ, ದಿನಬೆಳಗಾದರೆ ಒಂದಲ್ಲ ಒಂದು ಬೆಲೆ ಏರಿಕೆ ಮಾಡಿ ಕನ್ನಡಿಗರ ರಕ್ತ ಹೀರುತ್ತಿದ್ದೀರ. ನಿಮ್ಮ ಸರ್ಕಾರದ ಬಕಾಸುರ ಹೊಟ್ಟೆ ತುಂಬಿಸಲು ಕನ್ನಡಿಗರು ಇನ್ನೆಷ್ಟು ತೆರಿಗೆ, ಶುಲ್ಕ ತೆತ್ತಬೇಕು?' ಎಂದು ಪ್ರಶ್ನಿಸಿದ್ದಾರೆ. 'ಅಧಿಕಾರಕ್ಕೆ ಬಂದ ದಿನದಿಂದ ಬೆಲೆ ಏರಿಕೆ, ತೆರಿಗೆ ಹೆಚ್ಚಳ

(2ನೇ ಪುಟ ನೋಡಿ)

## ಮಲ್ಲಮ್ಮ ನುಡಿ ಕ್ಯಾಲೆಂಡರ್ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ
ಬೀದರ. ಜ. 02 : ನಗರದ ರಾಂಪುರೆ ಬಡಾವಣೆಯಲ್ಲಿರುವ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯ ರಾಜಯೋಗ ಕೇಂದ್ರ ಶಿವಶಕ್ತಿ ಭವನದಲ್ಲಿ ಗುರುವಾರ ಮಲ್ಲಮ್ಮ ನುಡಿ ದಿನಪತ್ರಿಕೆ ಈ ವರ್ಷದ ಪಂಚಾಂಗ ಸಹಿತ ಕ್ಯಾಲೆಂಡರ್‌ನ್ನು ಕೇಂದ್ರದ ಸಂಚಾಲಕರಾದ ಬಿ.ಕೆ ಸುನಂದಾ ಬಹೆನಜಿ ಅವರು ಬಿಡುಗಡೆ ಮಾಡಿದರು. ಸಂಗಾರೆಡ್ಡಿ ಬ್ರಹ್ಮಾಕುಮಾರಿ ಕೇಂದ್ರದ ಸಂಚಾಲಕರಾದ ಬಿ.ಕೆ ಸುಮಂಗಲಾ ಬಹಿನಜಿ, ಕರ್ನಾಟಕ ಕಾರ್ಯನಿರತ ಪತ್ರಕರ್ತ ಕಾರ್ಯಕಣಿ೯ ಸದಸ್ಯರು ಹಾಗೂ ಮಲ್ಲಮ್ಮ ನುಡಿ ವರದಿಗಾರರು ಸಂತೋಷ್ ಚೆಟ್ಟಿ ಹಾಗೂ ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪತ್ರಕರ್ತರ ಸಮಾಜಮುಖಿ ಸೇವೆ ಅಮೂಲ್ಯ: ಕುಲಸಚಿವ ಡಾ. ಎಸ್. ಜಿ. ಡೊಳ್ಳೆಗೌಡರ್



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಜ.2:ಪತ್ರಕರ್ತರು ಹೆಚ್ಚು ಸಂಬಳ ಪಡೆಯದಿರಬಹುದು ಆದರೆ ಅವರ ಕೆಲಸ ಮತ್ತು ಸೇವೆ ಅಮೂಲ್ಯವಾದದ್ದು. ಪತ್ರಕರ್ತರೆಂದರೆ ಸಮಾಜದ ಜಾಗೃತಿ ಜನರು. ಇದು ನಮಗೆಲ್ಲ ಸಂತೋಷ ಮತ್ತು ಹೆಮ್ಮೆಯ ವಿಷಯವೆಂದು ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಡಾ. ಎಸ್. ಜಿ. ಡೊಳ್ಳೆಗೌಡರ್ ಅಭಿಪ್ರಾಯ ಪಟ್ಟರು.

ಶರಣಬಸವ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂಹವನ ವಿಭಾಗದಿಂದ ಗುರುವಾರ ವಿಭಾಗದ ಅನುಭವ ಮಂಟಪದಲ್ಲಿ

(2ನೇ ಪುಟ ನೋಡಿ)

## ಮಾಧ್ಯಮ ಅಕಾಡೆಮಿ ಪ್ರಶಸ್ತಿಗೆ ಶಶಿ ಶಂಬೆಳ್ಳಿ ಆಯ್ಕೆ: ಕೆಯುಡಬ್ಲ್ಯುಜೆ ಅಭಿನಂದನೆ



ಬೀದರ. ಜ. 02 : ಜಿಲ್ಲೆಯ ಹಿರಿಯ ಪತ್ರಕರ್ತರು ಹಾಗೂ ಪ್ರಜಾವಾಣಿ ದಿನಪತ್ರಿಕೆಯ ಜಿಲ್ಲಾ ವರದಿಗಾರರಾದ ಶಶಿಕಾಂತ ಶಂಬೆಳ್ಳಿ ಅವರಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ 2024ನೇ ಸಾಲಿನ ವಾರ್ಷಿಕ ಪ್ರಶಸ್ತಿಗೆ ಆಯ್ಕೆ ಮಾಡಿದ್ದಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ

(2ನೇ ಪುಟ ನೋಡಿ)

## ಗಾಂಧಿಗಂಜ್ ಬ್ಯಾಂಕಿಗೆ ವಿಜಯಕುಮಾರ ಅಧ್ಯಕ್ಷ





ಮಲ್ಲಮ್ಮ ನುಡಿ ವಾರ್ತೆ
ಬೀದರ.ಜ.02:ನಗರದಿ ಗಾಂಧಿಗಂಜ್ ಕೋಆಪರೇಟಿವ್ ಬ್ಯಾಂಕಿನ ನೂತನ ಅಧ್ಯಕ್ಷರಾಗಿ ವಿಜಯಕುಮಾರ್ ಪಾಟೀಲ್ ಹಾಗೂ ಉಪಾಧ್ಯಕ್ಷರಾಗಿ ಸುನಿಲಕುಮಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಐದು ವರ್ಷಗಳ ಅವಧಿಗೆ ಅಧ್ಯಕ್ಷ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣೆ ಅಧಿಕಾರಿ ನಾಗರಾಜ ಅವರು ಬುಧವಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಸಾಮಾಜಿಕ ಪರಿವರ್ತನೆಯಲ್ಲಿ ಮಠಗಳ ಪಾತ್ರ ಪ್ರಮುಖ: ಸಾಗರ್ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ
ಬೀದರ. ಜ. 02 : ಸಿದ್ಧರಾಮೇಶ್ವರ ನಮ್ಮೂರ 12ನೇ ಜಾತ್ರಾ ಮಹೋತ್ಸವ ಹಾಗೂ ಹಾವಗಿಲಿಂಗೇಶ್ವರ ಶಿವಾಚಾರ್ಯರ ದ್ವಾದಶ ಪಟ್ಟಾಧಿಕಾರ ಮಹೋತ್ಸವ ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಗ್ರಾಮದ ರಾಚೋಟೇಶ್ವರ ಸಂಸ್ಥಾನ ಮಠದಲ್ಲಿ ಬುಧವಾರ ಆರಂಭಗೊಂಡಿತು.

ಸಂಸದ ಸಾಗರ್ ಖಂಡ್ರೆ ಜಾತ್ರೆಗೆ ಚಾಲನೆ ನೀಡಿ, ನೂತನ ಹಾನಗಲ್ ಕುಮಾರ ಶಿವಯೋಗಿಗಳ ಮೂರ್ತಿ ಅನಾವರಣಗೊಳಿಸಿದರು.

ಸಾಮಾಜಿಕ ಪರಿವರ್ತನೆಯಲ್ಲಿ ಮಠ-ಮಾನ್ಯಗಳ ಪಾತ್ರ ಪ್ರಮುಖವಾಗಿದೆ ಎಂದು ಅವರು ಹೇಳಿದರು.

ಮಠಗಳಲ್ಲಿ ನಡೆಯುವ ಜಾತ್ರೆ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮಗಳು ಜನರಿಗೆ ಸನ್ಮಾರ್ಗದಲ್ಲಿ ನಡೆಯಲು ಪ್ರೇರಣೆ ನೀಡುತ್ತವೆ ಎಂದು ತಿಳಿಸಿದರು.

ಯುವಕರು ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಬೇಕು. ದುಶ್ಚಟಗಳಿಂದ ದೂರ

(2ನೇ ಪುಟ ನೋಡಿ)

## ಬಸ್ಸಿಗೆ ಗುದ್ದಿದ ಟ್ಯಾಂಕರ ವಾಹನ-ತಪ್ಪಿದ ದುರಂತ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಜ.2:ಟ್ಯಾಂಕರ್ ವಾಹನವೊಂದು ಸಾರಿಗೆ ಸಂಸ್ಥೆಯ ಬಸ್ಸಿಗೆ ಗುದ್ದಿದ್ದರಿಂದ ಬಸ್ಸು ರಸ್ತೆ ಬದಿಗೆ ವಾಲಿ ಆಗಬಹುದಾಗಿದ್ದ ದೊಡ್ಡ ದುರಂತ ತಪ್ಪಿದ ಘಟನೆ ತಾಲೂಕಿನ ಮನ್ನಿಕಟ್ಟಿ ಕ್ರಾಸ್ ಬಳಿ ನಡೆದಿದೆ.

ಬುಧವಾರ ಬೆಳಿಗ್ಗೆ 10 ಗಂಟೆ ವೇಳೆಗೆ ಬಾಗಲಕೋಟೆ-ಆಲಮಟ್ಟಿ ರಸ್ತೆಯಲ್ಲಿ ಮನ್ನಿಕಟ್ಟಿ ಕ್ರಾಸ್ ಹತ್ತಿರಕ್ಕೆ ಈ ಘಟನೆ ನಡೆದಿದ್ದು ಸುದೈವಶಾತ ಬಸ್ ಫಲ್ಟಿಯಾಗದೇ ಇರುವುದರಿಂದ ಬಸ್ಸಿನಲ್ಲಿದ್ದ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಬೆಣ್ಣೂರಿನಿಂದ ಬಾಗಲಕೋಟೆಗೆ ತೆರಳುತ್ತಿದ್ದ ಸಾರಿಗೆ ಸಂಸ್ಥೆಯ ಬಸ್ಸನ್ನು ಹಿಂದಿಕ್ಕಿ ಹೋಗುವಾಗ ಎದುರಿಗೆ ಬಂದ ವಾಹನಕ್ಕೆ ಢಿಕ್ಕಿ ಹೊಡೆಯುವುದನ್ನು ತಪ್ಪಿಸಲು ಟ್ಯಾಂಕರ ವಾಹನ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಮಠಗಳ ಪಾತ್ರ ಪ್ರಮುಖ: ಸಾಗರ್ ಖಂಡ್ರೆ

ಇರಬೇಕು ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಬಸವಮುಕ್ತಿ ಮಂದಿರದ ಶಿವಯೋಗೀಶ್ವರ ಸ್ವಾಮೀಜಿ ಮಾತನಾಡಿ, ಪ್ರಸ್ತುತ ಧನ, ಸಂಪತ್ತು ಇದ್ದರೂ ಶಾಂತಿ, ನೆಮ್ಮದಿ ಇಲ್ಲವಾಗಿದೆ. ಇವು ಯಾವುದೇ ಅಂಗಡಿಯಲ್ಲಿ ಸಿಗುವ ವಸ್ತುಗಳಲ್ಲ. ಆಧ್ಯಾತ್ಮಿಕ ಕಾರ್ಯಕ್ರಮಗಳ ಮೊರೆ ಹೋದರೆ ಮಾತ್ರ ದೊರಕುತ್ತವೆ ಎಂದು ತಿಳಿಸಿದರು.

ಹಾವಗಿಲಿಂಗೇಶ್ವರ ಶಿವಾಚಾರ್ಯರ ಪರಿಶ್ರಮದಿಂದಾಗಿ ಹಲಬರ್ಗಾ ಮಠ ಈಗ ಹೆಮ್ಮರವಾಗಿ ಬೆಳೆದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನೇತೃತ್ವ ವಹಿಸಿದ್ದ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯ ಮಾತನಾಡಿ, ಸುಸಜ್ಜಿತ ಕಟ್ಟಡ, ಧ್ಯಾನ ಮಂದಿರ, ಸೋಮೇಶ್ವರ ನಿಲಯ, ಕಲ್ಯಾಣ ಮಂಟಪ, ಉದ್ಯಾನ ಮೊದಲಾದ ಅಭಿವೃದ್ಧಿ ಕಾರ್ಯಗಳಿಂದ ಮಠ ಎಲ್ಲರ ಗಮನ ಸೆಳೆಯುತ್ತಿದೆ. ಗ್ರಾಮಸ್ಥರು ಹಾಗೂ ಭಕ್ತರ ಸಹಕಾರದಿಂದ ಮಠದ ಅಭಿವೃದ್ಧಿ ಸಾಧ್ಯವಾಗಿದೆ ಎಂದು ತಿಳಿಸಿದರು.

ಮಠದಲ್ಲಿ ನಡೆಯುವ ಆಧ್ಯಾತ್ಮಿಕ ಚಟುವಟಿಕೆಗಳಿಂದ ಬಹಳಷ್ಟು ಜನ ದುಶ್ಚಟಗಳನ್ನು ತ್ಯಜಿಸಿದ್ದಾರೆ. ನೆಮ್ಮದಿಯ ಬದುಕು ಸಾಗಿಸುತ್ತಿದ್ದಾರೆ. ಸಮಾಜೋಧಾರ್ಮಿಕ ಕಾರ್ಯ ಹಾಗೂ ಭಕ್ತರ ಏಳಿಗೆಯೇ ತಮ್ಮ ಧ್ಯೇಯವಾಗಿದೆ ಎಂದು ಹೇಳಿದರು.

ಮಾತೆ ಬಸವಾಂಜಲಿ ಮಾತನಾಡಿದರು. ಪಿಎಸಐ ನಂದಿನಿ ಸಂತೋಷ್ ದಂಪತಿ ನಾಣ್ಯಗಳಿಂದ ಹಾವಗಿಲಿಂಗೇಶ್ವರ ಶಿವಾಚಾರ್ಯರ ತುಲಾಭಾರ ಮಾಡಿದರು.

ಇದಕ್ಕೂ ಮುನ್ನ ರಾಚೋಟೇಶ್ವರ ಗದ್ದುಗೆಗೆ ಮಹಾ ಅಭಿಷೇಕ, ಗಂಗಾ ಪೂಜೆ, ಪ್ರಸಾದ ವಿತರಣೆ ನೆರವೇರಿದವು. ದೇವಿದಾಸ ಶ್ರೀಮಾಳೆ ಹಾಗೂ ಧನ್ನೂರ(ಎಚ್) ಗ್ರಾಮಸ್ಥರು ಭಕ್ತಿ ದಾಸೋಹಗೈದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪದ್ಮಿನಿಬಾಯಿ ಶಿವಪಾ???ಸಿಂಗ್ ಠಾಕೂರ್, ಗುಂಡೇರಾವ್ ಪಾಟೀಲ, ಶಾಂತಕುಮಾರ, ಶ್ರೀಕಾಂತ ಸ್ವಾಮಿ, ಗುರುಲಿಂಗಯ್ಯ ಸ್ವಾಮಿ, ಶರಣಯ್ಯ ಸ್ವಾಮಿ ಮತ್ತಿತರರು ಇದ್ದರು. ಜಾತ್ರೆ ಜನವರಿ 11 ರ ವರೆಗೆ ನಡೆಯಲಿದೆ.

# ಪತ್ರಕರ್ತರ ಸಮಾಜಮುಖಿ ಸೇವೆ ಅಮೂಲ್ಯ:

ಆಯೋಜಿಸಲ್ಪಟ್ಟ ಮೂವರು ಹಿರಿಯ ಪತ್ರಕರ್ತರು ಹಾಗೂ ಪ್ರಶಸ್ತಿಗೆ ಭಾಜನರಾದ ಎಸ್. ಆರ್. ಮಣೂರ್, ರಾಮಕೃಷ್ಣ ಬಡಶೇಷಿ ಹಾಗೂ ಶಿವಲಿಂಗಪ್ಪ ದೊಡ್ಡಮನಿಯವರಿಗೆ ಸನ್ಮಾನ ಸಮಾರಂಭ ಮತ್ತು ಹೊಸ ವಿದ್ಯಾರ್ಥಿಗಳ ಸ್ವಾಗತ ಹಾಗೂ ಹಳೆಯ ವಿದ್ಯಾರ್ಥಿಗಳ ಸಭೆಯ ಸಮಾರಂಭವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಉದಯೋನ್ಮುಖ ಪತ್ರಕರ್ತರು ಈ ಮೂವರು ಹಿರಿಯ ಪತ್ರಕರ್ತರಿಂದ ಕಲಿಯಬೇಕಾದದ್ದು ಸಾಗರದಂತಿದೆ ಇದರ ಲಾಭವನ್ನು ಪಡೆದುಕೊಳ್ಳಿ. ಯಾವಾಗಲೂ ನೀವು ಬರೆಯುವ ಸುದ್ದಿಯು ಮಾನವೀಯತೆಯ ಪರಿಕಲ್ಪನೆಯಾಗಿರಬೇಕು. ಬರವಣಿಗೆಯ ಪ್ರೀತಿಯಲ್ಲಿ ಮುಳುಗಿ ಜನರ ಸಮಸ್ಯೆಗಳ ಕುರಿತಾದ ಸುದ್ದಿ ಬರೆಯಲು ಕಲಿಯಿರಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತನ್ನು ಹೇಳಿದರು.

ಪತ್ರಿಕೋದ್ಯಮದಲ್ಲಿ ಈ ಮೂವರು ಪತ್ರಕರ್ತರು ನಕ್ಷತ್ರಗಳಾಗಿದ್ದಾರೆ. ಮುಂಬರುವ ಪತ್ರಕರ್ತರು ತಮ್ಮ ಅನುಭವದೊಂದಿಗೆ ಹೆಚ್ಚು ಹೆಚ್ಚಾಗಿ ಕಲಿಯುತ್ತಾರೆ. ಸಾರ್ವಜನಿಕರೊಂದಿಗೆ ಸಂವಹನ ಮಾಡುವುದು ಜೀವನದ ಅದ್ಭುತ ಸಾಹಸವಾಗಿದೆ. ಪತ್ರಿಕೋದ್ಯಮವನ್ನು ಸರಳವಾಗಿ ಅನುಸರಿಸಬೇಡಿ ಅದಕ್ಕೆ ನಿಮ್ಮನ್ನು ನೀವು ಸಮರ್ಪಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡಿ ಎಂದು ತಿಳಿಹೇಳಿದರು.

ಈ ಸಂದರ್ಭದಲ್ಲಿ ಟಿ. ಎಸ್. ಆರ್. ಪ್ರಶಸ್ತಿಗೆ ಭಾಜನರಾದ ಎಸ್. ಆರ್. ಮಣೂರ್, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ರಾಮಕೃಷ್ಣ ಬಡಶೇಷಿ ಹಾಗೂ ಮೋರೆ ಹನುಮಂತರಾಯ ಪ್ರಶಸ್ತಿಗೆ ಭಾಜನರಾದ ಶಿವಲಿಂಗಪ್ಪ ದೊಡ್ಡಮನಿ ಅವರಿಗೆ ಸತ್ಕರಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್. ಆರ್. ಮಣೂರ್, ಮೊದಲು ಪತ್ರಿಕೆಗಳು ಹಾಗೂ ಪತ್ರಕರ್ತರು ಬಹಳ ಕಡಿಮೆ ಇದ್ದರು. ಆಗಿನ್ನೂ ತಂತ್ರಜ್ಞಾನ ಮುಂದುವರೆದಿರಲಿಲ್ಲ. ಆಗ ಪತ್ರಿಕೆ ಹಾಗೂ ಬರವಣಿಗೆಯಲ್ಲಿ ಗುಣಮಟ್ಟದಾಗಿರುತ್ತಿತ್ತು. ಆದರೆ ಇಂದು ಪತ್ರಿಕೆಗಳು ಹಾಗೂ ಪತ್ರಕರ್ತರು ತುಂಬಾ ಹೆಚ್ಚಾಗಿದ್ದಾರೆ. ಆದರೂ ಗುಣಮಟ್ಟದ ಬರವಣಿಗೆ ಹಾಗೂ ಸುದ್ದಿ ನಮಗೆ ಕಾಣಸಿಗುತ್ತಿಲ್ಲ.

ಪತ್ರಿಕಾರಂಗ ಈಗ ಪತ್ರಿಕೋದ್ಯಮವಾಗಿದೆ. ಈ ಉದ್ಯಮದಲ್ಲಿ ಪತ್ರಕರ್ತರು ಮುಕ್ತವಾಗಿ ಹಾಗೂ ಯಶಸ್ವಿಯಾಗಿ ಕೆಲಸಮಾಡಲಾಗುತ್ತಿಲ್ಲ. ಪತ್ರಕರ್ತರು ಯಾವಾಗಲೂ ಜನರ ಧ್ವನಿಯಾಗಿ ಅವರ ಸಮಸ್ಯೆಗಳತ್ತ ಗಮನ ಹರಿಸಿ ಸರಕಾರಕ್ಕೆ ಮುಟ್ಟಿಸುವ ಸಮಾಜದ ಕೊಂಡಿಯಾಗಿ ಕೆಲಸ ಮಾಡಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸನ್ಮಾನ ಸ್ವೀಕರಿಸಿದ ಇನ್ನೊಬ್ಬ ಹಿರಿಯ ಪತ್ರಕರ್ತರಾದ ರಾಮಕೃಷ್ಣ ಬಡಶೇಷಿ ಮಾತನಾಡಿ, ನನ್ನ ಜೀವನದಲ್ಲಿ ಪತ್ರಕರ್ತನಾಗಿ ಹಿರಿಯನಾಗಿದ್ದರು ಕಲಿಯುವುದಿನ್ನೂ ಸಾಕಷ್ಟಿದೆ. ಎಸ್. ಆರ್. ಮಣೂರ್ ಹಾಗೂ ಟಿ. ವಿ. ಶಿವಾನಂದನ್ ಅವರಿಂದ ಬಹಳ ಕಲಿತಿದ್ದೇನೆ. ಅವರು ನನಗೆ ಯಾವಾಗಲೂ ಹುರಿದುಂಬಿಸಿದ್ದಾರೆ. ರಾಜ್ಯೋತ್ಸವ ಪ್ರಶಸ್ತಿ ಭಾಜನವಾಗುವ ಮಟ್ಟಕ್ಕೆ ಬೆಳೆದಿರುವುದು ಇವರಿಬ್ಬರ ಶ್ರಮ ಹಾಗೂ ಕೊಡುಗೆಯಿಂದ ಎಂದರು.

ಸನ್ಮಾನ ಸ್ವೀಕರಿಸಿದ ಇನ್ನೊಬ್ಬ ಹಿರಿಯ ಪತ್ರಕರ್ತರಾದ ಶಿವಲಿಂಗಪ್ಪ ದೊಡ್ಡಮನಿ ತಮ್ಮ ಭಾಷಣದಲ್ಲಿ, ನಾನು ನನ್ನ ಪತ್ರಿಕೆಯ ಸಂಪಾದಕನಾಗಿ ಇಷ್ಟೆತ್ತರಕ್ಕೆ ಬೆಳೆದಿದ್ದು ತಳಮಟ್ಟದಿಂದ. ಒಂದು ಪತ್ರಿಕೆ ನಡೆಸುವುದು ಸಾಮಾನ್ಯ ಕೆಲಸವಲ್ಲ ಅದರಲ್ಲಿ ತುಂಬಾ ಪತ್ರಕರ್ತರ ಶ್ರಮ ಅಡಗಿರುತ್ತದೆ. ಪತ್ರಕರ್ತರಾಗಬೇಕೆಂದರೆ ಎಲ್ಲಾ ವಿಷಯಗಳನ್ನು ತಿಳಿದುಕೊಳ್ಳಬೇಕು ಹಾಗೂ ಬರವಣಿಗೆಯ ಮುಖಾಂತರ ಸರಕಾರವು ಎಚ್ಚೆತ್ತುಕೊಳ್ಳುವಂತೆ ಮಾಡಬೇಕು. ಶ್ರಮ ಪಟ್ಟರೆ ಯಾವುದು ಅಸಾಧ್ಯವಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹೊಸ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಹಳೆಯ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಪತ್ರಿಕೋದ್ಯಮ ವಿಭಾಗದ ಡೀನ್ ಟಿ. ವಿ. ಶಿವಾನಂದನ್ ಅಥಿತಿಗಳ ಪರಿಚಯ ಮಾಡಿ ಸ್ವಾಗತಿಸಿದರು. ವಿದ್ಯಾರ್ಥಿಗಳಾದ ಕು. ಯಶಸ್ವಿನಿ ನಿರೂಪಿಸಿದರೆ, ಈಶ್ವರ್ ಪೂಜಾರಿ ವಂದಿಸಿದರು.

# ವಾಹನ-ತಪ್ಪಿದ ದುರಂತ

ಬಸ್ಸಿನ ಬಲಬದಿಗೆ ಗುದ್ದಿದೆ. ಇದರಿಂದ ಬಸ್ಸು ರಸ್ತೆ ಬದಿಗೆ ಸರಿದು ಹೊಲದಲ್ಲಿ ವಾಲಿ ನಿಂತಿದೆ. ಆಗ ಬಸ್ಸಿನಲ್ಲಿದ್ದ 40 ಕ್ಕೂ ಹೆಚ್ಚು ಪ್ರಯಾಣಿಕರು ಚೀರಾಡಿ ಹೊರಬಂದಿದ್ದಾರೆ. ಕೆಲವರು ಕಿಟಕಿ ಮೂಲಕ ಜಿಗಿದು ಪಾರಾಗಿದ್ದಾರೆ. ಬಾಗಲಕೋಟೆಯಲ್ಲಿ ನಡೆಯಲಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ತೆರಳುತ್ತಿದ್ದ ಅಂಗನವಾಡಿ ಶಿಕ್ಷಕಿಯರು ಬಹಳ ಜನ ಬಸ್ಸಿನಲ್ಲಿದ್ದರು.

ಬಸ್ಸಿನ ಕೆಲ ಪ್ರಯಾಣಿಕರಿಗೆ ಚಿಕ್ಕಪುಟ್ಟ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ಕಳುಹಿಸಲಾಯಿತು. ಟ್ಯಾಂಕರ್ ವಾಹನ ಚಾಲಕ ಪರಾರಿಯಾಗಿದ್ದಾನೆ. ಬಾಗಲಕೋಟೆ ಗ್ರಾಮೀಣ ಠಾಣೆ ಪಿಎಸ್ಐ ಶರಣಬಸಪ್ಪ ಸಂಗಳದ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ಮಾಡಿದರು.

# ಸುಮಂತ ಕಟ್ಟಿಮನಿಯವರಿಗೆ ಗೌರವ ಡಾಕ್ಟರೇಟ್

ಬೀದರಃಜ.2:ಬೀದರನ ಶರಣ ನಗರ ಬಡಾವಣೆಯಲ್ಲಿರುವ ಶ್ರೀ ಸುಮಂತ ಕಟ್ಟಿಮನಿರವರ ಮನೆಗೆ ಭೇಟಿ ನೀಡಿ ಸಾಹಿತ್ಯ ರತ್ನ ಅಣ್ಣಾಭಾವು ಸಾಠೆ ಸಾಂಸ್ಕೃತಿಕ ಮತ್ತು ಸಾಹಿತಿಕ ಲೋಕಮಂಚ್ ಟ್ರಸ್ಟ್ ವತಿಯಿಂದ ದಿನಾಂಕ 01-01-2025 ರಂದು ಸಾಯಂಕಾಲ 8 ಗಂಟೆಗೆ ಶ್ರೀ ಸುಮಂತ ಕಟ್ಟಿಮನಿರವರಿಗೆ ಸನ್ಮಾನಿಸಿಲಾಯಿತು.

ಕಟ್ಟಿಮನಿರವರ ಸಾಮಾಜಿಕ ಕಾರ್ಯಚಟುವಟಿಕೆಗಳನ್ನುಗಮನಿಸಿ ಮ್ಮೆಕ್ಸಿಕೋದ ಯುನಿರ್ವಸಿಟಿ ಆಫ್ ತೋಲಸಾ ಗೌರವ ಡಾ-ಕಟ್ಟರೇಟ್ ನೀಡಿ ಪುರಸ್ಕರಿಸಿದ್ದು ಸಂತಸದ ಸಂಗತಿಯಾಗಿದೆ. ಇದು ನಮ್ಮ ಬೀದರ ಜಿಲ್ಲೆಗೆ ಸಂದ ಗೌರವವಾಗಿದೆ ಎಂದು ಸಾಹಿತ್ಯ ರತ್ನ ಅಣ್ಣಾಭಾವು ಸಾಠೆ ಸಾಂಸ್ಕೃತಿಕ ಮತ್ತು ಸಾಹಿತಿಕ ಲೋಕಮಂಚ್ ಟ್ರಸ್ಟ್ ವತಿಯಿಂದ ಶಾಲು ಹೊದಿಸಿ ಸನ್ಮಾನಿಸಲಾಗುತ್ತಿದೆ ಎಂದು ಟ್ರಸ್ಟ್ ಅಧ್ಯಕರಾದ ಎಂ. ಎಸ್. ಮನೋಹರ ಅವರು ನುಡಿದರು.

# ಶಶಿ ಶಂಬೆಳ್ಳಿ ಆಯ್ಕೆ:

ಘಟಕ ಸ್ವಾಗತಿಸಿ,ಹರ್ಷ ವ್ಯಕ್ತಪಡಿಸಿದೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಸಂಘವು, ಶಶಿಕಾಂತ ಶಂಬೆಳ್ಳಿ ಅವರಿಗೆ ಈ ಹಿಂದೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಘಟಕದಿಂದ ದಾವಣಗೆರೆಯಲ್ಲಿ ನಡೆದ 38ನೇ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನದಲ್ಲಿ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಿರುವುದನ್ನು ಇಲ್ಲಿ ನೆನಪಿಸಬಹುದು.

ಮೊದಲು ಬೀದರ್ ನಲ್ಲಿ ಪ್ರಜಾವಾಣಿ ಪತ್ರಿಕೆಯ ವರದಿಗಾರರಾಗಿ ಜೊತೆಗೆ ಸಂಜೆವಾಣಿ ಪತ್ರಿಕೆಯ ವರದಿಗಾರರಾಗಿ ಸೇವೆ ಆರಂಭಿಸಿದ ಅವರು, ಆನಂತರ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರಜಾವಾಣಿ ಪತ್ರಿಕೆಯ ವರದಿಗಾರರಾಗಿ ಸೇವೆ ಸಲ್ಲಿಸಿ ಕಳೆದ ಎರಡು ವರ್ಷಗಳಿಂದ ಮತ್ತೆ ಬೀದರ್ ಜಿಲ್ಲೆಯ ಜಿಲ್ಲಾ ವರದಿಗಾರರಾಗಿ ಅನುಪಮ ಸೇವೆ ಸಲ್ಲಿಸುತ್ತಿರುವರು. ನಿಷ್ಪಕ್ಷಪಾತ ಹಾಗೂ ಪಾರದರ್ಶಕ ಸುದ್ದಿಗೆ ಹೆಸರಾಗಿರುವ ಶೆಂಬೆಳ್ಳಿ ಅವರ ಈ ಆಯ್ಕೆ ಜಿಲ್ಲಾ ಘಟಕಕ್ಕೆ ಅತ್ಯಂತ ಹರ್ಷ ತಂದಿದ್ದು ಇದು ಇಡೀ ಜಿಲ್ಲೆಗೆ ಒಂದು ಸಂತಸದ ಕ್ಷಣವಾಗಿದೆ.

ಶೆಂಬಳ್ಳಿ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿದ್ದಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರು ಹಾಗೂ ಕರ್ನಾಟಕ ಮಾಧ್ಯಮ ಅಕಾಡೆಮಿಯ ಸದಸ್ಯರಾದ ಶಿವಾನಂದ ತಗಡೂರು, ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಆಯಿಷಾ ಖಾನಂ ಹಾಗೂ ಅಕಾಡೆಮಿಯ ಇತರೆ ಸದಸ್ಯರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೀದರ್ ಜಿಲ್ಲಾ ಘಟಕ ಅಭಿನಂದಿಸುತ್ತದೆ.

ಶೆಂಬೆಳ್ಳಿ ಈ ಮಹತ್ವದ ಪ್ರಶಸ್ತಿಗೆ ಆಯ್ಕೆ ಆಗಿದ್ದಕ್ಕೆ ಜಿಲ್ಲಾ ಘಟಕದ ಅಧ್ಯಕ್ಷರಾದ ಡಿ.ಕೆ ಗಣಪತಿ, ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯ ಬಸವರಾಜ ಕಾಮ ಶೆಟ್ಟಿ, ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯರಾದ ಅಪ್ಪಾರಾವ ಸೌದಿ, ದೀಪಕ ಮನ್ನಳ್ಳಿ, ಸಂಘದ ಉಪಾಧ್ಯಕ್ಷರು, ಕಾರ್ಯದರ್ಶಿಗಳು ಸೇರಿದಂತೆ ಎಲ್ಲ ತಾಲೂಕುಗಳ ಅಧ್ಯಕ್ಷರು ಪ್ರಧಾನ ಕಾರ್ಯದರ್ಶಿ ಹಾಗೂ ಪದಾಧಿಕಾರಿಗಳು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# ಜನ ಇನ್ನೆಷ್ಟು ಬೆಲೆ ತೆತ್ತಬೇಕು?

ಅಂತ ಒಂದಲ್ಲ ಒಂದು ರೀತಿ ಜನ ಸಾಮಾನ್ಯರ ಸುಲಿಗೆ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರ ಈಗ ಬಸ್ ದರ ಶೇ.15 ಏರಿಕೆ ಮಾಡಿದೆ ಎಂದಿದ್ದಾರೆ.

ಅಸಮರ್ಥ ಸಿಎಂ ಸಿದ್ದರಾಮಯ್ಯ ಅವರ ದುರಾಡಳಿತದಲ್ಲಿ, ಪೆಟ್ರೋಲ್ – ಡೀಸೆಲ್ ದರ ಏರಿಕೆ, ಆಸ್ತಿ ತೆರಿಗೆ, ಮುದ್ರಾಂಕ ದರ, ನೀರಿನ ದರ, ಜನನ ಮರಣ ಪ್ರಮಾಣಪತ್ರ ಶುಲ್ಕ ಏರಿಕೆ, ಹಾಲಿನ ದರ ಏರಿಕೆ, ಬಸ್ ದರ ಏರಿಕೆ ಅನಿವಾರ್ಯ. ಶೀಘ್ರದಲ್ಲೇ ಕನ್ನಡಿಗರು ಕಾಂಗ್ರೆಸ್ ಸರ್ಕಾರದ ವಿರುದ್ಧ ದಂಗೆ ಏಳುವುದೂ ಅನಿವಾರ್ಯ ಎಂದು ವಿಪಕ್ಷ ನಾಯಕ ಆರ್. ಅಶೋಕ್ 'ಎಕ್ಸ್' ಖಾತೆಯಲ್ಲಿ ಪೋಸ್ಟ್ ಮಾಡಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಟಿಕೆಟ್ ದರ ಏರಿಕೆ ಅನಿವಾರ್ಯ!**

ಜನವರಿ 5 ರಿಂದ ಹೊಸ ದರ ಅನ್ವಯ ಆಗಲಿದೆ. 2015ರಲ್ಲಿ ಪ್ರತಿನಿತ್ಯ ನಾಲ್ಕು ನಿಗಮಗಳಿಗೆ 9.14 ಕೋಟಿ ರೂ. ಇದ್ದ ಡೀಸೆಲ್ ವೆಚ್ಚ, ಇದೀಗ 13.21 ಕೋಟಿ ರೂ. ಹೆಚ್ಚಳ ಆಗಿದೆ. ಸಿಬ್ಬಂದಿ ವೆಚ್ಚ 12.81 ಕೋಟಿ ರೂ. ಇಂದ 18.36 ಕೋಟಿ ರೂ. ಏರಿಕೆ ಆಗಿದೆ. ಈ ಹಿನ್ನೆಲೆಯಲ್ಲಿ ದರ ಏರಿಕೆ ಮಾಡಲಾಗಿದೆ. ಆದರೆ, ಶಕ್ತಿ ಯೋಜನೆ ಮುಂದುವರಿಯಲಿದೆ ಎಂದು ಸಚಿವ ಸಂಪುಟ ಸಭೆಯ ಬಳಿಕ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲ್ , ಬಸ್ ದರ ಶೇ.15 ಹೆಚ್ಚಳಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿದ ಬಗ್ಗೆ ಮಾಹಿತಿ ನೀಡಿದರು.

ಮಹಿಳೆಯರಿಗೆ ಉಚಿತ ಬಸ್ ಪ್ರಯಾಣಕ್ಕೆ ಅವಕಾಶ ಕೊಡುವ ಶಕ್ತಿ ಯೋಜನೆಯಿಂದ ಸಾರಿಗೆ ನಿಗಮಗಳು ಭಾರೀ ನಷ್ಟದಲ್ಲಿವೆ. ಈ ನಡುವೆ ಶಕ್ತಿ ಯೋಜನೆಯನ್ನು ಪರಿಷ್ಕರಣೆ ಮಾಡಬೇಕು ಎಂಬ ಚರ್ಚೆಗಳು ನಡೆಯುತ್ತಿದ್ದವು. ಶಕ್ತಿ ಯೋಜನೆಯ ಹೊರೆಯೂ ಸೇರಿದಂತೆ ಸಾರಿಗೆ ಇಲಾಖೆ ಸರ್ಕಾರ ಸುಮಾರು 6,000 ಕೋಟಿ ರೂ. ನೀಡಲು ಬಾಕಿ ಇದೆ. ಈ ನಡುವೆ ವೇತನ ಪರಿಷ್ಕರಣೆಗೆ ಸಾರಿಗೆ ಇಲಾಖೆಯ ನೌಕರರು ಬೇಡಿಕೆ ಇಡುತ್ತಿದ್ದಾರೆ. ಈ ಎಲ್ಲಾ ಹಿನ್ನೆಲೆಯಲ್ಲಿ ಬಸ್ ದರ ಏರಿಕೆಯ ಬಗ್ಗೆ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

# ಮಾಧ್ಯಮ ಕ್ಷೇತ್ರದಲ್ಲಿ ಸಲ್ಲಿಸಿದ ಗಣನೀಯ ಸೇವೆ ಪರಿಗಣಿಸಿ ಮಂಜುನಾಥ ಜಮಾದಾರ್‌ರಿಗೆ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.2:ನಗರದ ಪ್ರತಿಷ್ಠಿತ ಮಣೂರ್ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ 4ನೇ ವರ್ಷದ ವಾರ್ಷಿಕೋತ್ಸವದ ನಿಮಿತ್ಯ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಸಾರ್ವಜನಿಕರಿಗೆ ಜೀವಿತಾವಧಿಯವರೆಗೂ ಉಚಿತ ಮಧುಮೇಹ ಮುಕ್ತ ಕಲಬುರಗಿ ಅಭಿಯಾನಕ್ಕೆ ಪೂಜ್ಯರು ಗಣ್ಯರು ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಸಲ್ಲಿಸಿದ ಗಣನೀಯ ಸೇವೆಯನ್ನು ಪರಿಗಣಿಸಿ ಪತ್ರಿಕಾ ಛಾಯಾಗ್ರಾಹಕ ಮಂಜುನಾಥ ಜಮಾದಾರ್ ಅವರಿಗೆ ಆಸ್ಪತ್ರೆಯ ನಿರ್ದೇಶಕರಾದ ಡಾ. ಫಾರುಕ್ ಅಹ್ಮದ್ ಮಣೂರ್ ಅವರು ಪ್ರಶಸ್ತಿ ನೀಡಿ ಸನ್ಮಾನಿಸಿದರು.

ಪೂಜ್ಯ ಸಜ್ಜಾದೇ ನಶೀನಾ ಖಾಜಾ ಯದುಲ್ಲಾ ಖಾಜಾ ಹುಸೇನಿ, ಅಯುಬ್ ಮಿಯಾ, ಪೂಜ್ಯ ಪಾಳಾದ ಗುರುಮೂರ್ತಿ ಶಿವಾಚಾರ್ಯರು, ಸೈಯದ್ ಅಲಿ ಜಕೀ ಅಲ್ ಹುಸೇನಿ, ಶಾಸಕ ಅಲ್ಲಂಪ್ರಭು ಪಾಟೀಲ್, ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ, ಇಲಿಯಾಸ್ ಸೇಠ ಭಾಗವಾನ್, ಡಾ. ಶರಣಬಸಪ್ಪ ಗಣಜಲಖೇಡ್, ಡಾ. ಅಂಬಾರಾಯ ರುದ್ರವಾಡಿ, ಡಾ. ಸಿದ್ದು ಪಾಟೀಲ, ಮೆಹಮುದ್ ಹುಸೇನ್, ವಿಶ್ವನಾಥ ನಾಡಗೌಡ, ಜುಲ್ಲೇಕಾರ ಅದನಾನ್, ನಜೀರ್ ಖುರೇಶಿ, ಅವ್ವಣ್ಣ ಮ್ಯಾಕೇರಿ, ರಮೇಶ ನಾಟೇಕಾರ, ಪಿಐ ಖಾಜಾ ಹುಸೇನ್, ಮುಬೀನ್, ಶೋಭಾ, ಅಮೀನ್ ಸೇರಿದಂತೆ ಇನ್ನಿತರರಿದ್ದರು.

# ವಿದ್ಯೆಗೆ ವಿನಯವೇ ಭೂಷಣ: ಸಿದ್ದಲಿಂಗ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.2:ವಿದ್ಯಾರ್ಥಿಗಳು ವಿದ್ಯೆಯ ಜೊತೆಗೆ ನಯ ವಿನಯ, ಸಂಸ್ಕಾರಗಳನ್ನು ಕಲಿತುಕೊಂಡರೆ ಅದುವೇ ಭೂಷಣವಾಗುತ್ತದೆ ಎಂದು ಶಿರೂರ ಶಿವಯೋಗಾಶ್ರಮದ ಅಭಿನವಶಿದ್ಧಲಿಂಗಸ್ವಾಮೀಜಿಗಳು ಹೇಳಿದ್ದಾರೆ.

ಮಧ್ಯಪ್ರದೇಶದ ಭೂಪಾಲ್ ನಲ್ಲಿ ಜ.3 ರಿಂದ ನಡೆಯುವ ರಾಷ್ಟಮಟ್ಟದ 31ನೇ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಪಾಲ್ಗೊಳ್ಳುತ್ತಿರುವ ಶಿರೂರ ಪಟ್ಟಣದ ಸಿದ್ದೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿನಿ ಸಹನಾ ಕೊಣ್ಣೂರ ಹಾಗೂ ಮಾರ್ಗದರ್ಶಿ ಶಿಕ್ಷಕ ಸಂಜಯ ನಡುವಿನಮನಿ ಅವರಿಗೆ ಲಿಂ.ಶ್ರೀಮತಿ ಶಾಂತಾ ಮಾಚಾ ಹಾಗೂ ಲಿಂ.ಸಂಗಪ್ಪ ಮಾಚಾ ಪರಿವಾರದವರು ಹಮ್ಮಿಕೊಂಡ ಅಭಿನಂದನಾ ಸಮಾರಂಭದಲ್ಲಿ ಆಶೀರ್ವಚನ ನೀಡಿ ಪೂಜ್ಯರು ಮಾತನಾಡಿದರು.

ವಿದ್ಯಾರ್ಥಿಗಳೂ ವಿಜ್ಞಾನದ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಭವಿಷ್ಯದಲ್ಲಿ ಉತ್ತಮ ವಿಜ್ಞಾನಿಗಳಾಗಲು ಈಗಿನಿಂದಲೇ ಸಂಶೋಧನಾ ಪ್ರವೃತ್ತಿಯನ್ನು ಬೆಳೆಸಿಕೊಂಡು ಗುರುಗಳ ಮಾರ್ಗದರ್ಶನದಲ್ಲಿ ಮುನ್ನಡೆಯಬೇಕು ಎಂದು ಸ್ವಾಮೀಜಿ ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ವಿಜ್ಞಾನ ಶಿಕ್ಷಕ ಎಸ್.ಜಿ.ಎಮ್ಮಿ ಮಾತನಾಡಿ, ಪ್ರತಿಭೆ ಸದಾ ಕಂಗೊಳಿಸಬೇಕಾದರೆ ವೈಜ್ಞಾನಿಕ ದೃಷ್ಟಿಕೋನದಲ್ಲಿ ಹಲವಾರು ವಿಚಾರಗಳನ್ನು ಅರಿತುಕೊಂಡು ಅವುಗಳಿಗೆ ಸೂಕ್ತವಾದ ಪರಿಹಾರವನ್ನು ಕಂಡುಹಿಡಿಯಬೇಕು. ಅದುವೇ ವಿಜ್ಞಾನದ ನಿಜವಾದ ತಿರುಳು ಎಂದರು.

ಇದೇ ಸಂದರ್ಭದಲ್ಲಿ ಸಹನಾ ಕೊಣ್ಣೂರ ಮತ್ತು ಮಾರ್ಗದರ್ಶನ ಮಾಡಿದ ವಿಜ್ಞಾನ ಶಿಕ್ಷಕ ಸಂಜಯ ನಡುವಿನಮನಿ ಅವರನ್ನು ಶ್ರೀಗಳು ಹಾಗೂ ಹಿರಿಯರು ಸತ್ಕರಿಸಿದರು.

ತಾಪಂ ಮಾಜಿ ಅಧ್ಯಕ್ಷ ಸಿದ್ದಪ್ಪ ಕೋಟಿಕಲ್, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಶೇಖರಗೌಡ ಮಾಚಾ, ಅರ್ಜುನ ಅಂಗಡಿ, ರಂಗಪ್ಪ ಮಳ್ಳಿ ರಾಮನಗೌಡ ಮಾಚಾ, ಸಿದ್ದೇಶ್ವರ ಪ್ರೌಢಶಾಲೆ ಮುಖ್ಯ ಗುರುಮಾತೆ ಶ್ರೀಮತಿ ಎಲ್ ಟಿ ಪೂಜಾರ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಶಿಕ್ಷಕ ಬಸನಗೌಡ ಮಾಚಾ ಸ್ವಾಗತಿಸಿದರು. ವಿಶ್ರಾಂತ ದೈಹಿಕ ಶಿಕ್ಷಕ ಎಸ್.ಬಿ.ಮಾಚಾ ವಂದಿಸಿದರು. ಗುರುರಾಜ ಶಿರೂರು ನಿರೂಪಿಸಿದರು

# ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಹೆಚ್ಚಿನ ಲಾಭಾಂಶ ಗಳಿಸುವಲ್ಲಿ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆ ಮುಂಚೂಣಿ: ಸಚಿವ ಎಸ್.ಎಸ್. ಮಲ್ಲಿಕಾರ್ಜುನ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಜ.02:ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಹೆಚ್ಚಿನ ಲಾಭಾಂಶ ಗಳಿಸುವಲ್ಲಿ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾಪೆರ್‍ಪೊ?ರೇಷನ್ ಲಿಮಿಟೆಡ್ ಸಂಸ್ಥೆ ಮುಂಚೂಣಿಯಲ್ಲಿದ್ದು, ಮುಂದಿನ ದಿನಗಳಲ್ಲಿ ಕಾರ್ಯ ಚಟುವಟಿಕೆಗಳನ್ನು ವಿಸ್ತರಿಸಿ ಇನ್ನು ಹೆಚ್ಚಿನ ಲಾಭಾಂಶಗಳನ್ನು ಗಳಿಸುವ ದೃಷ್ಟಿಯಿಂದ ಹೊಸ ಗಣಿಗುತ್ತಿಗೆಗಳ ಅನುಮೋದನೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸ್ಥಗಿತಗೊಂಡಿರುವ ಕೆಲವು ಗಣಿಗಳ ಪುನರ್ ಪ್ರಾರಂಭಕ್ಕೆ ಕ್ರಮವಹಿಸಲಾಗಿದೆ ಎಂದು ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಇಲಾಖೆ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ ಅವರು ತಿಳಿಸಿದರು.

ವಿಧಾನಸೌಧದ 3ನೇ ಮಹಡಿಯ ಕೊಠಡಿ ಸಂಖ್ಯೆ 305ರಲ್ಲಿ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆಯ 2025ನೇ ವರ್ಷದ ನೂತನ ಕ್ಯಾಲೆಂಡರ್ ಹಾಗೂ ಟೇಬಲ್ ಕ್ಯಾಲೆಂಡರ್ ಅನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಮಾನವ ಸಂಪನ್ಮೂಲ ಕೊರತೆಯನ್ನು ನೀಗಿಸಲು ಮತ್ತು ಪುನರ್ ಪ್ರಾರಂಭವಾಗುತ್ತಿರುವ ಗಣಿಗಳ ಅವಶ್ಯಕತೆಯಂತೆ ಹೊಸದಾಗಿ ಉದ್ಯೋಗಿಗಳ ನೇಮಕಕ್ಕೆ ಕ್ರಮವಹಿಸಿರುತ್ತದೆ ಎಂದರು.

ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾಪೆರ್‍ಪೊ?ರೇಷನ್ ಲಿಮಿಟೆಡ್ (ಏಖಒಅಐ) (ಹಿಂದಿನ ಒಒ) ಒಂದು ಸರ್ಕಾರಿ ಸ್ವಾಮ್ಯದ ಸಂಸ್ಥೆಯಾಗಿದ್ದು, ರಾಜ್ಯದಲ್ಲಿ ದೊರೆಯುವ ವಿವಿಧ ಅದಿರು ಮತ್ತು ಅಲಂಕಾರಿಕ ಗ್ರಾನೈಟ್ ಉತ್ಪಾದನೆ ಮತ್ತು ಮಾರಾಟದಲ್ಲಿ ತೊಡಗಿರುತ್ತದೆ. ಸಂಸ್ಥೆಯು 2003-2004ನೇ ಸಾಲಿನಿಂದ ಸತತವಾಗಿ ಲಾಭಾಂಶದಲ್ಲಿ ತೊಡಗಿದ್ದು 2021-22ನೇ ಸಾಲಿನಲ್ಲಿ ಅತ್ಯಧಿಕ ವಹಿವಾಟು ರೂ. 1610.00 ಕೋಟಿಗಳಾಗಿದ್ದು ತೆರಿಗೆನಂತರ ನಿವ್ವಳ ಲಾಭ ರೂ. 787.00 ಕೋಟಿಗಳಾಗಿರುತ್ತದೆ. ಕಳೆದ ಸಾಲಿನಲ್ಲಿ ರೂ. 1473.00 ಕೋಟಿಗಳ ವಹಿವಾಟು ಮಾಡಿರುತ್ತದೆ ಎಂದು ತಿಳಿಸಿದರು.

## ಸ್ಮಾರ್ಟ್ ಕ್ಲಾಸ್ ಹಾಗೂ ಸಂತ ಸೇವಾಲಾಲ್ ಭವನ ಉದ್ಘಾಟನೆ ವೇಣುಗೋಪಾಲ್ ನಾಯಕ



ಮಲ್ಲಮ್ಮ ನುಡಿ ವಾರ್ತೆ

ಮಾರನಾಳ ತಾಂಡ : ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸ್ಮಾರ್ಟ್ ಕ್ಲಾಸ್ ಜನವರಿ 2ರಂದು ಉದ್ಘಾಟನೆಗೊಂಡಿತ್ತು . ಕೊಡುಗೆದಾರರು ಸುನಿಲ್ ಜಾದವ್ 51,000 ರೂಪಾಯಿ ಹಾಗೂ ಹಲವಾರು ಮಾರನಾಳ ತಾಂಡದ ಧಾನಿಗಳು ಕೊಡುಗೆ ರೂಪದಲ್ಲಿ ನೀಡಿದ್ದಾರೆ. ಹಾಗೂ ಸರ್ಕಾರದ ಅನುದಾನದಲ್ಲಿ ಅಲ್ಪ ಸ್ವಲ್ಪ ಹಣವನ್ನು ಬಳಕೆ ಮಾಡಲಾಗಿದೆ. ಈ ಸ್ಮಾರ್ಟ್ ಕ್ಲಾಸ್ ನಿಂದ ನಮ್ಮ ಊರಿನ ಮಕ್ಕಳಿಗೆ ಒಂದು ಉಜ್ವಲ ಭವಿಷ್ಯ ನೀಡಲಿ ಎಂದು ಧಾನಿಗಳು ಆಶಿಸುತ್ತಾರೆ..

2024 – 25 ನೇ ಸಾಲಿನಲ್ಲಿ ನಮ್ಮ ಮಕ್ಕಳ ಭವಿಷ್ಯ ಉನ್ನತ ವಿದ್ಯೆ ಹಾಗೆ ಉನ್ನತ ಸ್ಥಾನದಲ್ಲಿ ಪ್ರಜ್ವಲಿಸಲಿ ಎಂದು ಸುರಪುರ ಶಾಸಕರು ರಾಜಾ ವೇಣುಗೋಪಾಲ ನಾಯಕ ಸ್ಮಾರ್ಟ್ ಕ್ಲಾಸ್ ಉದ್ಘಾಟಿಸಿ ಸಂತಸವ್ಯಕ್ತಪಡಿಸಿದರು. ಹಾಗೆ ಸಂತ ಸೇವಾಲಾಲ್ ಭವನವನ್ನು ಉದ್ಘಾಟನೆಯನ್ನು ಸಹ ಮಾಡಿದರು.

ಇದೇ ಸಂದರ್ಭದಲ್ಲಿ ಸರ್ಕಾರದ 5 ಗ್ಯಾರಂಟಿಗಳ ಬಗ್ಗೆ ನಮ್ಮ ಸರ್ಕಾರ ಯಾವ ರೀತಿ ಮಾತು ಕೊಟ್ಟಿತ್ತು ,

ಅದೇ ರೀತಿಯಲ್ಲಿ ನಾವು ಸರ್ಕಾರವನ್ನು ನಡೆಸುತ್ತಿದ್ದೇವೆ. ಅದರ ಜೊತೆಯಲ್ಲಿ ಸುರುಪುರು ತಾಲೂಕು ಮತ್ತು ಹುಣಸಗಿ ತಾಲೂಕಿನಲ್ಲಿ ಈ 5 ಗ್ಯಾರಂಟಿಗಳ ಸದುಪಯೋಗ ಪಡೆದುಕೊಳ್ಳಿ ಎಂದು ಮತದಾರರಿಗೆ ತಿಳಿಸಿದರು..

ಇದೇ ಸಂದರ್ಭದಲ್ಲಿ ಸುರುಪೂರ ಶಾಸಕರಾದ ರಾಜಾ ವೇಣುಗೋಪಾಲ್ ನಾಯಕ, ನಿಂಗರಾಜ್ ಬಾಚಿಮಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಸುರಪುರ, ಚಂದ್ರಶೇಖರ್ ದಂಡಿನ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹುಣಸಗಿ, ಹುಣಸಗಿಯ, ಮಲ್ಲಣ್ಣ ಸೌಕಾರ್ ಹಿರಿಯ ಕಾಂಗ್ರೆಸ್ ಮುಖಂಡರು ಚೆನ್ನಯ್ಯಸ್ವಾಮಿ ತಿಮ್ಮಣ್ಣ ಮಿಂಚೇರಿ ಎಲ್ಲಪ್ಪಗೌಡ ಸರಕಾರಿ ಪ್ರಾಥಮಿಕ ಶಾಲೆ ಮಾರನಾಳ ತಾಂಡ, ಮುಖ್ಯ ಗುರುಗಳು, ಸಿಪಿಐ ಸಚಿನ್ ಚಲವಾದಿ, ಹುಣಸಗಿ ಪಿಎಸ್ಐ ಚಂದ್ರಶೇಖರ್ ಎಸ್, ಕೊಡೆಕಲ್ ಪಿಎಸ್ಐ ಅಯ್ಯಪ್ಪ ನಾರಾಯಣಪುರ ಪಿಎಸ್ಐ ರಾಜಶೇಖರ ರಾಠೋಡ , ಹಾಗೂ ಪೊಲೀಸ್ ಸಿಬ್ಬಂದಿ ವರ್ಗ ಮತ್ತು ಮಾರನಾಳ ತಾಂಡದ ಗುರು ಹಿರಿಯರು ಇನ್ನಿತರರು ಉಪಸ್ಥಿತರಿದ್ದರು.

### ಕೌಟುಂಬಿಕ ದೌರ್ಜನ್ಯ ಪ್ರಕರಣಗಳು, ಮತ್ತು ಕೌಟುಂಬಿಕ ಕಲಹ ಪ್ರಕರಣಕ್ಕೆ

## ಹೆಚ್ಚಿನ ಅರಿವು ಮೂಡಿಸಲು ಅಧಿಕಾರಿಗಳಿಗೆ ಸೂಚನೆ:ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: 02–ಕೌಟುಂಬಿಕ ದೌರ್ಜನ್ಯ ಪ್ರಕರಣಗಳು, ಮತ್ತು ಕೌಟುಂಬಿಕ ಕಲಹ ಪ್ರಕರಣಗಳು ನ್ಯಾಯಾಲಯದ ಸಂಬಂಧಿಸಿದ ಪ್ರಕರಣಗಳು 181 ಮಹಿಳಾ ಸಹಾಯವಾಣಿಗೆ ಪೋನ್ ಮಾಡಲು ಹೆಚ್ಚಿನ ಅರಿವು ಮೂಡಿಸಲು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಾರ್ವಜನಿಕರು, 108, ಮತ್ತು 112 ಗೆ ತಿಳುವಳಿಕೆ ಮೂಡಿದೆ ಅದೇ ರೀತಿಯಾಗಿ 181 ಮಹಿಳಾ ಸಹಾಯವಾಣಿಗೆ ಇದೆ ಎಂದು ಸಾರ್ವಜನಿಕರಿಗೆ ಗೊತ್ತಿಲ್ಲ ಎಂದರು.

ಪೋಕ್ಸ್ ನೋಂದಣಿ ಮದುವೆಯಾದ ಮೇಲೆ ಕೇಸ್ ದಾಖಲು ಮಾಡುತ್ತೀರಿ ಎಂದರು. ಡಿಜಿಟಲ್, ಆನ್‌ಲೈನ್ ಸೈಬರ್ ಕ್ರೈಂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ , ಲೀಡ್ ಬ್ಯಾಂಕ್ ಸೇರಿದಂತೆ ಸ್ವಯಂ ಸೇವಕರು ಜಾಗೃತಿ ಮೂಡಿಸಬೇಕು ಎಂದರು.

ಬಹಳಷ್ಟು ಸೈಬರ್ ಕ್ರೈಂ ಸ್ಟೇಷನ್ ಇದೆ ಇದೆ ಎಂಬುದರ ಬಗ್ಗೆ ಗೊತ್ತಿಲ್ಲ. ಎಂದರು.

ಬೇಟಿ ಪಚಾವೋ ಬೇಟಿ ಪಡಾವೋ ಯೋಜನೆಗೆ ಹೆಚ್ಚಿನ ಪ್ರಚಾರ ನೀಡಬೇಕು ಇದರಿಂದ ಬಹಳಷ್ಟು ಜನರಿಗೆ ಅನುಕೂಲವಾಗುತ್ತದೆ ಉತ್ತರ ಪ್ರದೇಶ, ಬಿಹಾರದಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲಾಗುತ್ತದೆ. ಅದೇ ರೀತಿ ಇಲ್ಲಿಯು ಹೆಚ್ಚಿನ ಗಮನ ಹರಿಸಲು ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಿದರು.

ಸಖಿ ಒನ್ ಸ್ಟಾಪ್ ಕೇಂದ್ರಲ್ಲಿ ಏಪ್ರಿಲ್ 2024 ರಿಂದ ನವೆಂಬರ್ 2024 ರವರೆಗೆ ದಾಖಲಾದ ಪೋಕ್ಸ ಕಾಯ್ದೆಯಡಿ ಇಲ್ಲಿಯವರೆಗೆ ಒಟ್ಟು 48 ಪ್ರಕರಣಗಳ ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಅದರೊಳಗೆ 18 ಪ್ರಕರಣಗಳು ಎಫ್.ಐ.ಆರ್. ಆಗಿದ್ದು, ಉಳಿದಂತೆ 36 ಪ್ರಕರಣಗಳು ಚಾಲ್ತಿಯಲ್ಲಿವೆ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಜಿಲ್ಲಾಧಿಕಾರಿ ಮಾತನಾಡಿ, ಪೋಕ್ಸ ಕಾಯ್ದೆಯಡಿ ಪ್ರಕರಣಗಳು ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು ಲೈಂಗಿಕ ದೌರ್ಜನ್ಯ ಪ್ರಕರಣಗಳ ಸಂಖ್ಯೆ 25 ಇದ್ದು, ಚಾಲ್ತಿಯಲ್ಲಿವೆ ಎಂದರು.

ಶಕ್ತಿ ಸದನ ( ಸ್ವಾಧಾರ ಗೃಹ ) ಯೋಜನೆಯಡಿ, ಮಹಾದೇವಿ ತಾಯಿ ಮಹಿಳಾ ವಿದ್ಯಾವರ್ಧಕ ಸಂಸ್ಥೆ ಸ್ವಾಧಾರ ಗೃಹ, ಸಂತೋಷ ಕಾಲೋನಿ ಕಲಬುರಗಿ, ಕರ್ನಾಟಕ ಸರ್ವೋದಯ ಸಂಸ್ಥೆ ಪಾರ್ವತಿ ಸ್ವಾಧಾರ ಗೃಹ ರಾಮಮಂದಿರ ಹತ್ತಿರ ಕಲಬುರಗಿ ಸಂಸ್ಥೆಯಲ್ಲಿರುವ ಹೆಣ್ಣು ಮಕ್ಕಳ ಸಂಖ್ಯೆ ಒಟ್ಟು 28 ಇದ್ದು, ಸಂಸ್ಥೆಯಲ್ಲಿರುವ ಮಕ್ಕಳ ಸಂಖ್ಯೆ. 05 ಇರುತ್ತದೆ ಎಂದರು.

ರಾಜ್ಯದಲ್ಲಿ ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಶಿಶುಪಾಲನಾ ಕೇಂದ್ರಗಳ 08 ಶಿಶು ಪಾಲನಾ ಕೇಂದ್ರಗಳಲ್ಲಿ ಹತ್ತಿರದ ಅಂಗನವಾಡಿ ಕೇಂದ್ರದಲ್ಲಿ ವಿಲೀನಗೊಳಿಸಿ, ಅಂಗನವಾಡಿ, ಕ್ರಂ ಕ್ರಷ್ ಕೇಂದ್ರಗಳಾಗಿ ಮುಂದುವರಿಸಲಾಗಿದೆ ಎಂದು ಸಭೆಯ ಗಮನಕ್ಕೆ ತಂದರು.

ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸಬೇಕು ಸರ್ಕಾರದಿಂದ ಸಿಗುವಂತ ಸೌಲಭ್ಯಗಳನ್ನು ನೀಡಬೇಕೆಂದು ಸಲಹೆ ಸೂಚನೆಗಳನ್ನು ನೀಡಿದರು. ಬ್ಯಾಂಕ್ ಖಾತೆ ಆಧಾರ್ ಲಿಂಕ್ ಮಾಡಬೇಕು ಎಂದರು.

ಸ್ತ್ರೀ ಶಕ್ತಿ ಯೋಜನೆಯ ಭವನಗಳಿಗೆ ಸರ್ಕಾರ ಎಷ್ಟು ಅನುದಾನ ಮಾಹಿತಿ ಮತ್ತು ಭವನಗಳ ನಿರ್ವಹಣೆಯ ಕೆಲಸ ಕಾರ್ಯಗಳ ಮಾಹಿತಿ ಪಡೆದುಕೊಂಡರು.

ಜಿಲ್ಲಾಧಿಕಾರಿ ಬಿ ಪೌಜಿಯಾ ಅವರು ಸ್ಫೂರ್ತಿ ಯೋಜನೆಯಡಿ ಸಿಗಬೇಕಾದ ಸೌಲಭ್ಯಗಳ ಮಾಹಿತಿ ಪಡೆದುಕೊಂಡು ಮಕ್ಕಳೊಂದಿಗೆ ಸಂತೋಷವನ್ನು ಹಚ್ಚಿಕೊಂಡರು.

ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹ ಭಂವರಸಿಂಗ್ ಮೀನಾ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳಾದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ಉಪನಿರ್ದೇಶ ರಾಜಕುಮಾರ ರಾಠೋಡ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ಶಿವಶರಣಪ್ಪ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಜಗದೇವಪ್ಪ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ ಮದನಾ, ಕ್ಷಯ ರೋಗ ನಿರ್ಮೂಲನಾ ಅಧಿಕಾರಿ ಡಾ. ಚಂದ್ರಕಾಂತ ನರಿಬೋಳಿ, ಮಹಿಳಾ ಮಕ್ಕಳ ರಕ್ಷಣಾಧಿಕಾರಿ ಮಂಜುಳ ವಿ ಪಾಟೀಲ, ಜಿಲ್ಲಾಮಟ್ಟದ್ ಅಧಿಕಾರಿಗಳು ಎಲ್ಲಾ ತಾಲೂಕಿನ ಅಧಿಕಾರಿಗಳು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು

ಸ್ವಯಂ ಸೇವಕರು, ಸಂಘಗಳು ಸಭೆಯಲ್ಲಿ ಹಾಜರಿದ್ದರು.

## ಅರ್ಜಿದಾರರ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.02–ಕಲಬುರಗಿ ಮಹಾನಗರಪಾಲಿಕೆ 2024–25ನೇ ಸಾಲಿಗಾಗಿ ಶೇ. 7.25 ಯೋಜನೆಯ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ಜನರಿಗೆ 2024–25ನೇ ಸಾಲಿನ ಎಸ್.ಎಫ್.ಸಿ. (ಮುಕ್ತ ನಿಧಿ) ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕ್ ಮುಖಾಂತರ ಎಲೆಕ್ಟ್ರಿಕಲ್ ಆಟೋ ರಿಕ್ಷಾ ಖರೀದಿಗೆ ಸಹಾಯಧನಕ್ಕೆ ಸಂಬಂಧಿಸಿದಂತೆ ಅರ್ಹ ಹಾಗೂ ಅನರ್ಹ ಅರ್ಜಿದಾರರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಲಬುರಗಿ ಮಹಾನಗರಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಅದೇರೀತಿ ಮಹಾನಗರಪಾಲಿಕೆಯ http://www.kalaburagicity.mrc.gov ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಈ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಆಯ್ಕೆಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಜನವರಿ 27 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರಪಾಲಿಕೆಯ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

## ಜನವರಿ 3 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಜ.02–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ವತಿಯಿಂದ 33/11ಕೆ.ವಿ ಕಾಳಗಿ ಉಪ–ಕೇಂದ್ರದಲ್ಲಿ ಮೆಂಟೇನನ್ಸ್ ಕಾರ್ಯ ಕೈಗೊಳ್ಳಬೇಕಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ವಿತರಣಾ ಕೇಂದ್ರಗಳಲ್ಲಿ ವ್ಯಾಪ್ತಿಯ ಗ್ರಾಮಗಳಲ್ಲಿ ಇದೇ ಜನವರಿ 3 ರಂದು ಬೆಳಿಗ್ಗೆ 11 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುತ್ತಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ಕಾಳಗಿ ಉಪವಿಭಾಗ: ಕಾಳಗಿ ವಿದ್ಯುತ್ ವಿತರಣಾ ಕೇಂದ್ರದ ಕಾಳಗಿ ತಾಲೂಕಿನ, ಕಾಳಗಿ ಪಟ್ಟಣ ಸೇರಿದಂತೆ, ಗೋಟೂರ್, ಕೊಡದೂರ, ರಾಜಾಪೂರ ಹಾಗೂ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳು.

## ಜನವರಿ 31 ರೊಳಗಾಗಿ ಲೈಸೆನ್ಸ್ ನವೀಕರಿಸಿಕೊಳ್ಳಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಜ.02–ಸೇಡಂ ಉಪವಿಭಾಗದಲ್ಲಿ ಬರುವ ಸೇಡಂ, ಚಿಂಚೋಳಿ ಹಾಗೂ ಚಿತ್ತಾಪುರ ತಾಲ್ಲೂಕುಗಳಲ್ಲಿನ ಹಣಕಾಸು ಸಂಸ್ಥೆ/ ಲೇವಾದೇವಿದಾರರ ಲೈಸನ್ಸ್ ಅವಧಿಯು 2025ರ ಮಾರ್ಚ್ 31 ರಂದು ಮುಕ್ತಾಯಗೊಳ್ಳಲಿದ್ದು, ಹಣಕಾಸು ಸಂಸ್ಥೆಗಳು, ಲೇವಾದೇವಿದಾರರು ಸೇಡಂ ಮೇನ್ ರೋಡ ಶಾಖೆ–ಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯಲ್ಲಿ 5,000 ರೂ. ಲೈಸನ್ಸ್ ನವೀಕರಣ ಫೀ ಪಾವತಿಸಿ, 2025ರ ಜನವರಿ 31ರೊಳಗಾಗಿ ಲೈಸೆನ್ಸ್ ನವೀಕರಣ ಪ್ರಸ್ತಾವನೆಯನ್ನು ಎಲ್ಲಾ ಷರತ್ತುಗಳೊಂದಿಗೆ ಕಡ್ಡಾಯವಾಗಿ ಸೇಡಂ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯಲ್ಲಿ ಸಲ್ಲಿಸಬೇಕು.

2025ರ ಜನವರಿ 31ರ ನಂತರ ಪಾವತಿಸಿದ್ದಲ್ಲಿ ಲೈಸೆನ್ಸ್ ಫೀಸ್‌ನ್ನು ಕರ್ನಾಟಕ ಲೇವಾದೇವಿ ಕಾಯ್ದೆ 1961 ಪ್ರಕರಣ 6(4) ಅನ್ವಯ ಲೈಸನ್ಸ್ ಫೀಸ್‌ನ್ನು ಎರಡು ಪಟ್ಟು (ಡಬಲ್) ಅಂದರೆ 10,000 ರೂ. ದಂಡದೊಂದಿಗೆ ಸರ್ಕಾರಕ್ಕೆ ಪಾವತಿಸಬೇಕು. ಇದಕ್ಕೆ ತಪ್ಪಿದ್ದಲ್ಲಿ ಲೇವಾದೇವಿ ಕಾಯ್ದೆ ಪ್ರಕರಣ 39ರಡಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

## ಜನರ ಮಧ್ಯ ಜಗಳ ಹಚ್ಚೋದೆ ಬಿಜೆಪಿ ಕೆಲಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.2– ಜನರ ಮಧ್ಯ ಜಗಳ ಹಚ್ಚೋದೆ ಬಿಜೆಪಿ ಕೆಲಸವಾಗಿದೆ, ಜನರ ಬದುಕನ್ನು ಕಟ್ಟಿಕೊಡ ಬಗ್ಗೆ ಮಾತನಾಡೋದೆ ಇಲ್ಲ. ಬಿಜೆಪಿ ನಮಗೆ ಭ್ರಷ್ಟಾಚಾರದ ಬಗ್ಗೆ ಪಾಠ ಹೇಳೋಕೆ ಹೊರಟಿದೆ. ಅವರಿಗೆ ನಾಚಿಕೆಯಾಗಬೇಕು, ಹೇಸಿಗೆ ಕೆಲಸಗಳನ್ನು ಮಾಡಿ ನಮಗೆ ಪಾಠ ಹೇಳ್ತಿದ್ದಾರೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಬಿಜೆಪಿ ವಿರುದ್ಧ ಹರಿಹಾಯ್ದರು.

ನಗರದಲ್ಲಿ ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು,



ಬಿಜೆಪಿಯವರು ಕೆಲಸ ಕೇವಲ ಜನರ ಮಧ್ಯೆ ವೈಷಮ್ಯ ಬಿತ್ತೋದೆ ಆಗಿದೆ. ಅವರು ಎಂದಿಗೂ ಸಾರ್ವಜನಿಕ ಹಿತಾಸಕ್ತಿಯ ಬಗ್ಗೆ ಮಾತನಾಡೋದೆ ಇಲ್ಲ ಎಂದು ಆಕ್ರೋಶ ಹೊರಹಾಕಿದರು.

ಈ ಹೊಸ ವರ್ಷದಿಂದ ಹೊಸ ಗುರಿಯನ್ನು ಇಟ್ಟುಕೊಂಡು ಕೆಲಸ ಮಾಡುತ್ತೇವೆ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಬಹಳಷ್ಟು ಕೆಲಸ ಇದೆ. ಕಲಬುರ್ಗಿಯಲ್ಲಿ ಜಯದೇವ ಆಯ್ತು, ನನ್ನ ಮುಂದಿನ ಗುರಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಮಾಡೋದು. ಅಲ್ಲದೇ ಕ್ಯಾನ್ಸರ್ ಆಸ್ಪತ್ರೆ, ಇಂದಿರಾಗಾಂಧಿ ರಾಷ್ಟ್ರೀಯ ಮಕ್ಕಳ ಆಸ್ಪತ್ರೆಗೆ ಶೀಘ್ರದಲ್ಲಿ ಅಡಿಗಲ್ಲು ಹಾಕುತ್ತೇವೆ ಎಂದು ಅವರು ಹೇಳಿದರು. ಗುತ್ತಿಗೆದಾರನ ಆತ್ಮಹತ್ಯೆಗೂ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೂ ಸಂಬಂಧವಿಲ್ಲ. ಅವರದ್ದೇ ಸರ್ಕಾರ ಇದ್ದಾಗ ಒಂದೇ ಒಂದು ಕೇಸ್ ಸಿಬಿಐಗೆ ಕೊಟ್ಟಿರಲಿಲ್ಲ. ಗುತ್ತಿಗೆದಾರ ಆತ್ಮಹತ್ಯೆ ಕೇಸ್ ನಲ್ಲಿ ಯಾವುದೇ ಹುರುಳಿಲ್ಲ. ಸಿಐಡಿ ತನಿಖೆಯ ವರದಿ ಬರಲಿ. ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೊಡುವ ಪ್ರಶ್ನೆಯೇ ಇಲ್ಲ. ಬಿಜೆಪಿ ವಿಪಕ್ಷವಾಗಿ ಫೆಲ್ಯೂವರ್ ಆಗಿದೆ. ಅವರಿಗೆ ಜನರ ಬದುಕಿನ ಬಗ್ಗೆ ಚಿಂತೆಯೇ ಇಲ್ಲ. ಹೇಗಾದರೂ ಮಾಡಿ ಜನರ ಮಧ್ಯ ಜಗಳ ಹಚ್ಚಬೇಕು. ಅಧಿಕಾರಕ್ಕೆ ಬರಬೇಕು ಲೂಟಿ ಮಾಡಬೇಕು ಎನ್ನೋದೆ ಬಿಜೆಪಿ ಉದ್ದೇಶವಾಗಿದೆ ಎಂದು

## ಐವಾನ್ ಶಾಹಿ ಪ್ರದೇಶದ ಸುಮಾರು 225 ಮನೆಗಳಿಗೆ ನಿರಂತರ ನೀರು ಸಂಪರ್ಕ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.02–ವಿಶ್ವ ಬ್ಯಾಂಕ್ ನೆರವಿನ ಕರ್ನಾಟಕ ನಗರ ನೀರು ಸರಬರಾಜು ಆಧುನೀಕರಣ (KUWSMP) ಯೋಜನೆಯಡಿ ಮಹಾನಗರದಲ್ಲಿ ಅನುಷ್ಠಾನಗೊಳ್ಳುತ್ತಿರುವ 24x7 ನಿರಂತರ ನೀರು ಸರಬರಾಜು ಯೋಜನೆಯಡಿ ಕಲಬುರಗಿ ನಗರದ ಜೋನ್ ನಂ.15ರ ವಾರ್ಡ್ ನಂ.46 ಮತ್ತು 49ರ (ಭಾಗಶಃ) ಐವಾನ್ ಶಾಹಿ ಪ್ರದೇಶದಲ್ಲಿನ ಸುಮಾರು 225 ಮನೆಗಳಿಗೆ ನಳದ ಸಂಪರ್ಕಗಳನ್ನು ಒದಗಿಸಿ, ಮೆ॥ ಎಲ್ ಆಂಡ್ ಟಿ ಕಂಪನಿಯು ಪ್ರಾರಂಭಿಕವಾಗಿ ಈ ಪ್ರದೇಶದಲ್ಲಿ ದಿನದ 20 ಗಂಟೆ ನೀರು ಸರಬರಾಜು ಮಾಡುತ್ತಿದೆ.

ಈ ಯೋಜನೆ ಕುರಿತು ಕಲಬುರಗಿ ನಗರದ ಐವಾನ್ ಶಾಹಿ ಪ್ರದೇಶದ ಗ್ರಾಹಕರು ಕೆಳಗಿನಂತೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ ಎಂದು ಕೆಯುಡಬ್ಲ್ಯುಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ತಿಳಿಸಿದ್ದಾರೆ. ಕಲಬರಗಿ ನಗರದ ಐವಾನ್ ಶಾಹಿ ಪ್ರದೇಶದ ಗೀತಾ ಗಂಡ ವಿಲಾಸ ಹರವಾಳಕ ಅವರು 24x7 ನಿರಂತರ ನೀರು ಸರಬರಾಜು ಯೋಜನೆಯಡಿ ಕಲಬುರಗಿ ನಗರದಲ್ಲಿ ಮೆ॥ ಎಲ್ ಆಂಡ್ ಟಿ ಕಂಪನಿಯು ಉತ್ತಮ ಗುಣಮಟ್ಟದ ಕಾಮಗಾರಿ ಕೈಗೊಂಡು ತಮ್ಮ ಬಡಾವಣೆಯಲ್ಲಿ ನಿರಂತರ ನೀರು ಸರಬರಾಜು ಮಾಡುತ್ತಿದ್ದು, ಈಗ ಪರಿಶುದ್ಧವಾದ ಹಾಗೂ ಮೊದಲನೆಯ ಮಹಡಿಯವರೆಗೆ ನೀರು ಬರುತ್ತಿದೆ. ನಿರಂತರ ನೀರು ಸರಬರಾಜಿನಿಂದ ಮಹಿಳೆಯರು ನೀರಿನ ಸಮಸ್ಯೆಯಿಂದ ಮುಕ್ತರಾಗಿದ್ದೇವೆ ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಪ್ರದೀಪ ಕಲ್ಯಾಣಕರ್ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತ ಈ ಮೊದಲು 4 ದಿನಗಳಿಗೊಮ್ಮೆ 2 ತಾಸು ನೀರು ಸರಬರಾಜು ಆಗುತ್ತಿತ್ತು. ಇದರಿಂದ ತಮಗೆ ನೀರಿನ ಬೇಡಿಕೆಯನ್ನು ಪೂರೈಸಿಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ. ಹಾಗಾಗಿ ನಾವು ಬೇರೆ ಮೂಲದಿಂದ ನೀರನ್ನು ಪಡೆದುಕೊಳ್ಳಬೇಕಾಗಿತ್ತು. ಆದರೆ ನಮ್ಮ ಪ್ರದೇಶದಲ್ಲಿ 24ಥ7 ನಿರಂತರ ನೀರು ಸರಬರಾಜಿನ ಹೊಸ ಪೈಪ್‌ಲೈನ್ ಅಳವಡಿಸಿ, ನಳ ಸಂಪರ್ಕಗಳನ್ನು ಕಲ್ಪಿಸಿರುವುದರಿಂದ ದಿನದ 20 ಗಂಟೆಗಿಂತ ಹೆಚ್ಚು ನೀರು ಸರಬರಾಜು ಆಗುತ್ತಿರುವುದರಿಂದ ನಮ್ಮ ನೀರಿನ ಸಮಸ್ಯೆಯು ಬಗೆಹರಿಸಿದಂತಾಗಿದೆ. ಈ ಯೋಜನೆ ಅದಷ್ಟು ಬೇಗ ಕಲಬುರಗಿ ನಗರದಾದ್ಯಂತ ಅಳವಡಿಸಿದ್ದಲ್ಲಿ ನೀರಿನ ಸಮಸ್ಯೆ ಮತ್ತು ನೀರು ಪೋಲಾಗುವುದನ್ನು ತಡೆಗಟ್ಟಬಹುದೆಂದು ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

## ಮಾಸಿಕ ವ್ಯಾಸಂಗ ವೇತನ ಫೆಲೋಶಿಫ್‌ಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಜ.02–ಪ್ರಸಕ್ತ 2024–25ನೇ ಸಾಲಿಗೆ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ. ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:10–01–2024 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ. ಪ್ರಾರಂಭಿಸಿರಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ) ಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ ಫೆಲೋಶಿಪ್‌ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್‌ಲೈನ್ ಮೂಲಕ 2025ರ ಜನವರಿ 20 ರ ಸಂಜೆ 5.30 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಯನ್ನು ಇಲಾಖೆಯ https://bcwd.karnataka.gov.in ವೆಬ್‌ಸೈಟ್‌ದಿಂದ ಹಾಗೂ ಮೊಬೈಲ್ ಸಂಖ್ಯೆ 8050770004 (ಕಚೇರಿ ವೇಳೆಯಲ್ಲಿ ಪ್ರತಿದಿನ ಬೆಳಿಗ್ಗೆ 10 ರಿಂದ ಸಂಜೆ 05.30 ರವರೆಗೆ) ಸಂಪರ್ಕಿಸಲು ಕೋರಲಾಗಿದೆ.

ತಾಲ್ಲೂಕ ಪಂಚಾಯತ ಬಸವಕಲ್ಯಾಣ

**ಗ್ರಾಮ ಪಂಚಾಯತ ಕಾರ್ಯಾಲಯ, ಮಂಠಾಳ ತಾ.ಬಸವಕಲ್ಯಾಣ**

ಸಂಖ್ಯೆ:ಗ್ರಾಪಂ.ಮಂಠಾ:ಉಖಾಯೋ:ದಪಪ್ರ:2024–25 ದಿನಾಂಕ : 13.03.2024

**ದರಪಟ್ಟಿಗಳ ಅಹ್ವಾನ**

ವಿಷಯ :– **ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರಪಟ್ಟಿ ಪ್ರಕಟಣೆ ಮಾಡುವ ಕುರಿತು.**

ಉಲ್ಲೇಖ :–1) **ಮಾನ್ಯ ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಬೆಂಗಳೂರು ಇವರ ಆದೇಶ ಸಂಖ್ಯೆ:RDC-EGS/988/2022(E-970872) ದಿನಾಂಕ : 17.05.2023.**

2) **ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಸಿ–ಇ.ಜಿ.ಎಸ್/988/2022 ಬೆಂಗಳೂರು ದಿನಾಂಕ : 16.05.2023.**

* * * *

ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರಪಟ್ಟಿ ಪ್ರಕಟಣೆ.

1) ದರಪಟ್ಟಿಗಳ ಆಹ್ವಾನ : ಗ್ರಾಮ ಪಂಚಾಯಿತಿ **ಮಂಠಾಳ** ವತಿಯಿಂದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಖಾತ್ರಿ ಯೋಜನೆಯ ಕ್ರೀಯಾ ಯೋಜನೆಗಳಡಿ ಅನುಮೋದನೆಯಾದ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರ ಪಟ್ಟಿ ಪ್ರಕಟಣೆ ಮಾಡಿ ಅರ್ಹ ದರಪಟ್ಟಿದಾರರಿಂದ (ಸರಬರಾಜುದಾರರು / ಏಜೆನ್ಸಿಯವರು / ಮಾರಾಟಗಾರರು / ಅರ್ಹ ಸಂಸ್ಥೆಯವರು ಇತ್ಯಾದಿ) ದರಪಟ್ಟಿಗಳನ್ನು ಪ್ರಕಟಣೆಯ ಅನುಬಂಧ–1 ರಲ್ಲಿ ದಾಖಲಿಸಲಾದ ಕಾಮಗಾರಿವಾರು ಸಾಮಗ್ರಿಗಳಿಗಾಗಿ ಮೊಹರು ಮಾಡಿದ ಲಕೋಟೆಗಳಲ್ಲಿ ಸ್ಪರ್ಧಾತ್ಮಕ ದರಪಟ್ಟಿಗಳನ್ನು ಆಹ್ವಾನಿಸಲಾಗಿರುತ್ತದೆ.

2) ದರಪಟ್ಟಿ ಪ್ರಕ್ರೀಯೆಯ ವೇಳಾಪಟ್ಟಿ :

| ಕ್ರ. ಸಂ. | ವಿವರ | ನಿಗಧಿಪಡಿಸಿದ ದಿನಾಂಕ | ಷರಾ |
|---|---|---|---|
| 01 | ದರಪಟ್ಟಿ ಫಾರ್ಮ ಮತ್ತು ಡಾಕ್ಯೂಮೆಂಟ್ ವಿತರಿಸುವ ದಿನಾಂಕ ಮತ್ತು ಸಮಯ | 13.03.2024 ದಿನಾಂಕದಿಂದ 15.03.2024 ರ ವರೆಗೆ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಮತ್ತು ಕಛೇರಿ ವೇಳೆಯಲ್ಲಿ | |
| 02 | ದರಪಟ್ಟಿದಾರರ ಪೂರ್ವಭಾವಿ ಸಭೆ ದಿನಾಂಕ ಮತ್ತು ಸಮಯ | ದಿನಾಂಕ : 15.03.2024 ರಂದು ಸಮಯ : ಬೆಳಿಗೆ 11.00 ಗಂಟೆಗೆ, ಗ್ರಾಮ ಪಂಚಾಯಿತಿ ಕಛೇರಿಯಲ್ಲಿ | |
| 03 | ಮೊಹರು ಮಾಡಿದ ದರಪಟ್ಟಿ ಫಾರ್ಮ ಮತ್ತು ಇತರೆ ದಾಖಲೆಗಳನ್ನು ಸ್ವಿಕರಿಸುವ ದಿನಾಂಕ ಮತ್ತು ಸಮಯ | ದಿನಾಂಕ : 16.03.2024 ರಂದು ಸಮಯ : ಬೆಳಿಗ್ಗೆ 11.00 ಗಂಟೆಯಿಂದ ಅಪರಾಹ್ನ 2.00 ಗಂಟೆಯವರೆಗೆ ಗ್ರಾಮ ಪಂಚಾಯತಿ ಕಛೇರಿಯಲ್ಲಿ | |
| 04 | ಮೊಹರು ಮಾಡಿದ ದರಪಟ್ಟಿ ಲಕೋಟೆ ತೆರೆಯುವ ಸ್ಥಳ, ದಿನಾಂಕ ಮತ್ತು ಸಮಯ | ಹಾಜರಿರುವ ದರಪಟ್ಟಿದಾರರ ಸಮ್ಮುಖದಲ್ಲಿ ದಿನಾಂಕ : 16.03.2024 ರಂದು ಸಮಯ : ಅಪರಾಹ್ನ 3.00 ಗಂಟೆಗೆ, ಗ್ರಾಮ ಪಂಚಾಯಿತಿ ಕಛೇರಿಯಲ್ಲಿ | |

| ಕ್ರ. ಸಂ. | ಕಾಮಗಾರಿಗಳ ವಿವರ | ಪ್ರಮಾಣ | ಸಾಮಗ್ರಿ ಮೊತ್ತ |
|---|---|---|---|
| 1 | Construction and Development of Kalal Samaj Smashan Bhoomi Manthal | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 654956 |
| 2 | Construction of Sanjivini Shed at Manthal Village | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 1234993 |

ದರಪಟ್ಟಿಗೆ ಸಂಬಂಧಿಸಿದಂತೆ, ಯಾವುದೇ ಮಾಹಿತಿಯನ್ನು ಕಛೇರಿ ಕೆಲಸದ ವೇಳೆಯಲ್ಲಿ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಿ ಪಡೆಯಬಹುದಾಗಿರುತ್ತದೆ. ದರಪಟ್ಟಿಯನ್ನು ಸ್ವಿಕರಿಸುವ ಮತ್ತು ತಿರಸ್ಕರಿಸುವ ಅಧಿಕಾರಿ ಗ್ರಾಮ ಪಂಚಾಯಿತಿಯದ್ದಾಗಿರುತ್ತದೆ ಹಾಗೂ ಈ ದರಪಟ್ಟಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿಯ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ.

ಸಹಿ/– ಅಧ್ಯಕ್ಷರು
ಗ್ರಾಮ ಪಂಚಾಯಿತಿ, ಮಂಠಾಳ

ಸಹಿ/– ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯತಿ, ಮಂಠಾಳ

## ಹಿಟ್ನಾಳ ಗ್ರಾಮದಲ್ಲಿ ಅದ್ದೂರಿಯಾಗಿ ಜರುಗಿದ ಭೀಮ ಕೋರೆಗಾವ್ ವಿಜಯೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭೀಮ ಕೋರೆಗಾವ್ ಯುದ್ಧದ 207 ವಾರ್ಷಿಕೋತ್ಸವದ ಗೌರವಾರ್ಥವಾಗಿ ಕೊಪ್ಪಳ ತಾಲೂಕಿನ ಹಿಟ್ನಾಳ ಗ್ರಾಮದಲ್ಲಿ ಗ್ರಾಮದ ಹಿರಿಯರು ಯುವಕ ಮಿತ್ರರು ಸೇರಿಕೊಂಡು ಡಾಕ್ಟರ್ ಬಿ ಆರ್ ಅಂಬೇಡ್ಕರ್ ಸರ್ಕಲ್ ಹತ್ತಿರ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿದರು ಮತ್ತು ವಿಜಯಸ್ತಂಬದ ಭಾವಚಿತ್ರ ಹಿಡಿದು ಸಂಭ್ರಮಾಚರಣೆಯನ್ನು ಮಾಡಿದರು. ಸಾರ್ವಜನಿಕರಿಗೆ ಅನ್ನಸಂತರ್ಪಣ ಕಾರ್ಯಕ್ರಮವು ಕೂಡ ಅದ್ದೂರಿಯಾಗಿ ಜರುಗಿ



ಸಂಪನ್ನಗೊಂಡಿತು. ಈ ಸಂದರ್ಭದಲ್ಲಿ ಹಿರಿಯ ಮುಖಂಡರು .ಲಕ್ಷ್ಮಣ ದೇವರಮನಿ ,ಸುಂಕಪ್ಪ ಲಕ್ಮಪೂರ, ಗಂಗಪ್ಪ ವೀರಾಪುರ, ಕನಕಪ್ಪ ಕುದರಿ ಮೋತಿ, ಬಸವರಾಜ ಪೂಜಾರಿ, ದೇವಪ್ಪ ನಡ್ಲಿಕೇರಿ. ಗ್ರಾಮದ ಯುವಕ ಮಿತ್ರರು ಗುರುಹಿರಿಯರು ಉಪಸ್ಥಿತರಿದ್ದರು.

## ನೇರ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 01– ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ 2025ರ ಜನವರಿ 4 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಉದ್ಯೋಗಾಧಿಕಾರಿ ಪ್ರಭಾಕರ್ ಅವರು ತಿಳಿಸಿದ್ದಾರೆ.

ಗ್ರೂಪ್ ಆಫ್ ಜನಶ್ರೀ ಎಂಟರ್‌ಪ್ರೈಸಸ್, ಸೇಲ್ಸ್‌ಮ್ಯಾನ್ 80 ಹುದ್ದೆಗಳು ಖಾಲಿ ಇದ್ದು ಹುದ್ದೆಗೆ ಅರ್ಹತೆ 7ನೇ/10ನೇ/ ಯಾವುದೇ ಪದವಿ ಯಾದಗಿರಿ ಶಹಾಪೂರು ಸುರುಪೂರ ದೇವದುರ್ಗ ಕಲಬುರಗಿ ಸೇಡಂ ಚಿತ್ತಾಪೂರು ಗುರುಮಠಕಲ್ ವಡಗೇರಾ ಹುಣಸಗಿ (ತಾವು ಇರುವ ಹತ್ತಿರ ಸ್ಥಳದಲ್ಲಿಯೇ ಕಾರ್ಯ ನಿರ್ವಹಿಸಲು ಅನುಕೂಲವಿದೆ) ಉದ್ಯೋಗ ಸ್ಥಳವಾಗಿದೆ. ವಯೋಮಿತಿ 18 ರಿಂದ 35 ವರ್ಷ ಒಳಗಿರಬೇಕು, ಪುರುಷ ಮತ್ತು ಮಹಿಳೆ ಭಾಗವಹಿಸಬಹುದಾಗಿದೆ.

02) ಅನ್ನಪೂರ್ಣ ಫೈನಾನ್ಸ್ ಪ್ರೈ.ಲಿ., (ಅ) ಫೀಲ್ಡ್ ಕ್ರೆಡಿಟ್ ಆಫೀಸರ್ 20 ಹುದ್ದೆಗಳು ಖಾಲಿ ಇದ್ದು, ಹುದ್ದೆಗೆ ಅರ್ಹತೆ 12ನೇ ಪಾಸ್. ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಯೋಮಿತಿ 18 ರಿಂದ 30 ವರ್ಷ (ಆ) ಡೆವಲಪ್ಮೆಂಟ್ ಆಫೀಸರ್ 10 ಹುದ್ದೆಗಳು ಖಾಲಿ ಇದ್ದು ಹುದ್ದೆಗೆ ಅರ್ಹತೆ 12ನೇ ಪಾಸ್. ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. 18 ರಿಂದ 30 ವರ್ಷ ಒಳಗಿರಬೇಕು.

ಅಸಿಸ್ಟಂಟ್ ಬ್ರಾಂಚ್ ಮ್ಯಾನೇಜರ್ 05 ಹುದೆಗಳು ಖಾಲಿ ಇದ್ದು ಹುದ್ದೆಗೆ ಅರ್ಹತೆ ಯಾವುದೇ ಪದವಿ. ಪುರುಷ, ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

# ವರ್ಷದ ಮೊದಲ ದಿನ ಪೂಜೆ, ಪ್ರಾರ್ಥನೆ





ಮಲ್ಲಮ ನುಡಿ ವಾರ್ತೆ ಬೀದರ. ಜ. 02 : ಹೊಸ ವರ್ಷದ ಮೊದಲ ದಿನವಾದ ಬುಧವಾರ ನಗರ ಸೇರಿದಂತೆ ಜಿಲ್ಲೆಯ ದೇವಸ್ಥಾನಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನಡೆದವು. ಕ್ರೈಸ್ತಧರ್ಮೀಯರು ಚರ್ಚ್‌ಗಳಲ್ಲಿ ಪ್ರಾರ್ಥನೆ ಮಾಡಿದರು.

ನಗರದ ಪಾಪನಾಶ ದೇವಸ್ಥಾನ, ಜನವಾಡ ರಸ್ತೆಯ ಹನುಮಾನ ದೇವಸ್ಥಾನ, ಹೊನ್ನಿಕೇರಿ ಸಿದ್ಧೇಶ್ವರ ದೇವಸ್ಥಾನ, ಮೈಲಾರ ಮಲ್ಲಣ್ಣ ದೇವಸ್ಥಾನಗಳಿಗೆ ವಿವಿಧ ಭಾಗಗಳಿಂದ ಜನ ತೆರಳಿ ದೇವರ ದರ್ಶನ ಪಡೆದರು.

ಬೆಳಗಿನ ಜಾವವೇ ಎಲ್ಲ ದೇವಸ್ಥಾನಗಳಲ್ಲಿ ಅರ್ಚಕರು ವಿಶೇಷ ಪೂಜೆ ಸಲ್ಲಿಸಿದರು.

ಇನ್ನು, ನಗರದ ಸೇಂಟ್ ಪಾಲ್ ಮೆಥೋಡಿಸ್ಟ್ ಚರ್ಚ್, ನಾವದಗೇರಿ, ಶಹಾಪುರ ಗೇಟ್ ಸಮೀಪದ ಚರ್ಚ್‌ಗಳಲ್ಲಿ ಮಂಗಳವಾರ ಮಧ್ಯರಾತ್ರಿಯಿಂದಲೇ ಪ್ರಾರ್ಥನಾ ಸಭೆಗಳು ಆರಂಭಗೊಂಡವು. ಬುಧವಾರ ಮಧ್ಯಾಹ್ನದವರೆಗೆ ಜನ ವಿವಿಧ ಕಡೆಗಳಿಂದ ಬಂದು ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು. ಹೊಸ ವರ್ಷಕ್ಕೆ ಹೊಸ ಸಂಕಲ್ಪ ಮಾಡಿದರು.

ನಗರದ ಪಾಪನಾಶ ಸಮೀಪದ ಬಸವಗಿರಿಯಲ್ಲಿ ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷೆ ಅಕ್ಕ ಗಂಗಾಂಬಿಕೆಯವರು ವಿಶೇಷ ಸಾಮೂಹಿಕ ಪ್ರಾರ್ಥನೆ ನಡೆಸಿಕೊಟ್ಟರು.

ಮಂಗಳವಾರ ಸಂಜೆಯಿಂದಲೇ ಹೊಸ ವರ್ಷಾಚರಣೆಯ ಸಂಭ್ರಮ ಎಲ್ಲೆಡೆ ಮನೆ ಮಾಡಿತ್ತು. ಕೆಲವು ಜನ ಕೇಕ್‌ಗಳನ್ನು ಕೊಂಡೊಯ್ದು ಮನೆಯಲ್ಲಿಯೇ ಕುಟುಂಬ ಸದಸ್ಯರೊಂದಿಗೆ ಹೊಸ ವರ್ಷ ಆಚರಿಸಿದರು. ರಾತ್ರಿ ಹತ್ತು ಗಂಟೆಯಿಂದ 12ರವರೆಗೆ ಡಿಜೆ ಹಾಡಿಗೆ ಮೈಮರೆತು ಕುಣಿದು ಕುಪ್ಪಳಿಸಿದರು. ಹೋಟೆಲ್, ರೆಸಾರ್ಟ್ ಹಾಗೂ ಹೋಂ ಸ್ಟೇಗಳಲ್ಲೂ ಹೊಸ ವರ್ಷಾಚರಣೆಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಮಕ್ಕಳು, ಮಹಿಳೆಯರು ಸೇರಿದಂತೆ ಎಲ್ಲ ವಯೋಮಾನದವರು ಪಾಲ್ಗೊಂಡಿದ್ದರು.

ಮಧ್ಯರಾತ್ರಿ 12ಗಂಟೆಯಾಗುತ್ತಿದ್ದಂತೆ ಆಕಾಶದಲ್ಲೆಲ್ಲಾ ಪಟಾಕಿಗಳ ಚಿತ್ತಾರ ಕಾಣಿಸಿತು. ಎಲ್ಲೆಡೆಯಿಂದ ಡಂ..ಡಂ ಎಂಬ ಪಟಾಕಿ ಶಬ್ದ ಕೇಳಿಸಿತು. ಸುಮಾರು ಅರ್ಧಗಂಟೆಯವರೆಗೂ ಪಟಾಕಿಗಳನ್ನು ಸಿಡಿಸಿದರು. ಕೇಕ್ ಕತ್ತರಿಸಿ, ಸಿಹಿ ತಿಂದು, ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಚಳಿಯ ಪ್ರಮಾಣ ಜಾಸ್ತಿಯಿದ್ದ ಕಾರಣ ಹಿಂದಿನಷ್ಟು ಸಡಗರ ಈ ವರ್ಷ ಕಂಡು ಬರಲಿಲ್ಲ. ಹೆಚ್ಚಿನವರು ಮನೆಯಿಂದ ಹೊರಗೆ ಬರಲಿಲ್ಲ. ಕುಟುಂಬ ಸದಸ್ಯರೊಂದಿಗೆ ಮನೆಯಲ್ಲಿಯೇ ಹೆಚ್ಚು ಜನ ಹೊಸ ವರ್ಷ ಆಚರಿಸಿದರು.

# 2025ನೇ ಸಾಲಿನ ದಿನದರ್ಶಿಕೆ ಬಿಡುಗಡೆ



ಮಲ್ಲಮ ನುಡಿ ವಾರ್ತೆ ಬೀದರ್:ಜ.2: ಇಲ್ಲಿಯ ನೌಬಾದ್ ಸಮೀಪದ ಔದುಂಬರಲಿಂಗ ಆಶ್ರಮದಲ್ಲಿ ನಾಗೋರಾ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ನರಸಪ್ಪ ಯಾಕತಪುರ ಹೊರ ತಂದಿರುವ 2025ನೇ ಸಾಲಿನ ದಿನದರ್ಶಿಕೆಯನ್ನು ಜೈ ಭಾರತ ಮಾತಾ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜ ಬಿಡುಗಡೆ ಮಾಡಿದರು.

ದಿನದರ್ಶಿಕೆ ಹಬ್ಬ, ಹರಿದಿನ, ರಜೆ, ಸಂಚಾರ ನಿಯಮಗಳ ಜಾಗೃತಿ ಬರಹಗಳನ್ನೂ ಒಳಗೊಂಡಿದೆ ಎಂದು ನರಸಪ್ಪ ಯಾಕತಪುರ ತಿಳಿಸಿದರು.

ಪ್ರಮುಖರಾದ ರಾಜು ಚಿಟ್ಟಾವಾಡಿ, ಬೊಮ್ಮಗೊಂಡ ಚಿಟ್ಟಾವಾಡಿ, ವಿಜಯಕುಮಾರ ಘೋಡಂಪಳ್ಳಿ, ಗೋಪಾಲ್ ಘೋಡಂಪಳ್ಳಿ, ಉಮೇಶ ರಾಯಗೊಂಡ, ಪ್ರಭು ಬುಗಟೆ, ರಾಕೇಶ್ ಸಾತೋಳಿ ಇದ್ದರು.

# ಸಮಾಜದ ಕಟ್ಟಕಡೆಯ ಮಗುವಿಗೂ ಶಿಕ್ಷಣ ದೊರೆಯಲಿ: ಶಶಿಧರ್ ಕೋಸಂಬೆ




ಬಳ್ಳಾರಿ,ಜ.02:ಶಿಕ್ಷಣ ಮೂಲಭೂತ ಹಕ್ಕಾಗಿದ್ದು, ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009ರ ಅನ್ವಯ ಸಮಾಜದಲ್ಲಿನ 6-14 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ದೊರೆಯಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ್ ಕೋಸಂಬೆ ಅವರು ಹೇಳಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ವಿಶೇಷ ಪೊಲೀಸ್ ಘಟಕ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣಾ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ 'ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009' ರ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಗುರುವಾರ ಏರ್ಪಡಿಸಿದ್ದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಹಕ್ಕುಗಳ ರಕ್ಷಣೆಗೆ ಪ್ರತಿಯೊಬ್ಬರೂ ಮುಂದಾಗಬೇಕಿದ್ದು, ಮಕ್ಕಳ ಹಕ್ಕುಗಳಿಗೆ ಚ್ಯುತಿಯಾಗದಂತೆ ಕಾರ್ಯನಿರ್ವಹಿಸುವುದು ವಿವಿಧ ಇಲಾಖೆ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದರು.

ಆರ್‌ಟಿಇ-2009 ಸೆಕ್ಸನ್ 10 ಪ್ರಕಾರ ಪ್ರತಿಯೊಬ್ಬ ಪೋಷಕರೂ ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಬೇಕು. ಇಲ್ಲವಾದಲ್ಲಿ ಆರ್‌ಟಿಇ ಕಾಯ್ದೆ ಸೆಕ್ಷನ್ 11ರ ಪ್ರಕಾರ ಶಿಕ್ಷಣ ಇಲಾಖೆಯ ಅಧಿಕಾರಿಗಳು ಶಾಲೆಗೆ ಕರೆತರುವ ಕೆಲಸ ಮಾಡಬೇಕು. ಜೊತೆಗೆ ಯಾವ ಪಾಲಕರು ಮಕ್ಕಳನ್ನು ಶಾಲೆಗೆ ಕಳುಹಿಸಲು ವಿಫಲಗೊಂಡಲ್ಲಿ ಶಿಸ್ತುಕ್ರಮಕ್ಕೆಗೊಳ್ಳಲು ಕಾನೂನಿನಲ್ಲಿ ಅವಕಾಶವಿದೆ ಎಂದು ಜನಸಾಮಾನ್ಯರಿಗೆ ಮನವರಿಕೆ ಮಾಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಮಕ್ಕಳ ಮೇಲಿನ ದೌರ್ಜನ್ಯ, ಹಲ್ಲೆ, ಶೋಷಣೆ ತಾರತಮ್ಯ ಹಾಗೂ ಮಕ್ಕಳ ರಕ್ಷಣೆಗಾಗಿ ಮಕ್ಕಳ ರಕ್ಷಣಾ ನೀತಿ-2016, ತಿದ್ದುಪಡಿ ಕಾಯ್ದೆ-2023ರ ನಿಯಮಗಳನ್ನು ಪಾಲಿಸಬೇಕು. ಗ್ರಾಮ ಪಂಚಾಯತ್ ಮಟ್ಟದಿಂದ ಜಿಲ್ಲಾ ಮಟ್ಟದ ಅಧಿಕಾರಿಗಳು ಸಕಾಲದಲ್ಲಿ ಸಭೆ ನಡೆಸಿ, ಮಕ್ಕಳ ಶಿಕ್ಷಣ ಕಾರ್ಯಪಡೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮಕ್ಕಳ ರಕ್ಷಣೆಯಲ್ಲಿ ಕಾರ್ಯ ಪ್ರವೃತ್ತರಾಗಬೇಕು ಎಂದು ಹೇಳಿದರು.

ಮಕ್ಕಳ ರಕ್ಷಣಾ ನೀತಿ ಅನ್ವಯ ಪ್ರತಿಯೊಂದು ಶಾಲಾ-ಕಾಲೇಜು, ವಸತಿ ನಿಲಯಗಳಲ್ಲಿ ಮಕ್ಕಳ ಸಹಾಯವಾಣಿ 1098 ಫಲಕ ಹಾಗೂ ಸಲಹಾ ಪೆಟ್ಟಿಗೆ ಅಳವಡಿಸಬೇಕೆಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ್ ಕೋಸಂಬೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಮಾಜಿ ಸದಸ್ಯರಾದ ಹೆಚ್.ಸಿ ರಾಘವೇಂದ್ರ ಅವರು ಉಪನ್ಯಾಸದಲ್ಲಿ ಮಾತನಾಡುತ್ತಾ, ಮಕ್ಕಳ ಬಾಲ್ಯ ಅಮೂಲ್ಯವಾಗಿದ್ದು, ಅವರ ಬಾಲ್ಯತನವನ್ನು ಸುಂದರಗೊಳಿಸಲು ಶಿಕ್ಷಣ ಮುಖ್ಯವಾಗಿದೆ ಎಂದರು.

ಜೀವಿಸುವ ಹಕ್ಕು ಪ್ರತಿಯೊಬ್ಬರಿಗೂ ಇದೆ. ಸ್ವಾತಂತ್ರ ??, ಸಮಾನತೆ, ಆರೋಗ್ಯ, ವಸತಿ ಸೇರಿದಂತೆ ಸಂವಿಧಾನದಲ್ಲಿ 21ಎ ಅಡಿ ಶಿಕ್ಷಣವೂ ಸೇರ್ಪಡೆಯಾಗಿದೆ. ಈ ನಿಟ್ಟಿನಲ್ಲಿ ಯಾವುದೇ ಮಕ್ಕಳು ಶಿಕ್ಷಣ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಮಕ್ಕಳಿಗೆ ದೈಹಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸೇರಿದಂತೆ ಇತರೆ ವಿಷಯಗಳಲ್ಲಿ ವಂಚನೆಗೆ ಒಳಗಾದಲ್ಲಿ, ಅಭಿಪ್ರಾಯ ವ್ಯಕ್ತ ಪಡಿಸುವ ಮುಕ್ತ ಅವಕಾಶದ ವಾತವರಣ ಹಾಗೂ ಪ್ರಶ್ನೆ ಕೇಳುವ ಮನೋಭಾವನೆ ಬೆಳೆಸಿಕೊಳ್ಳಲು ಮಕ್ಕಳಿಗೆ ಧೈರ್ಯ ತುಂಬಬೇಕು ಎಂದು ಹೇಳುತ್ತಾ, ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009 ಹಾಗೂ ವಿವಿಧ ವಿಷಯಗಳು ಕುರಿತು ವಿವರಿಸಿದರು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮಿ ??ೀ ಮೈದೂರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರು, ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ದಲಿಂಗಮೂರ್ತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಮತ್ತು ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಯ ಅಧೀಕ್ಷಕರುಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಇಂದು ಭೂ ಸುರಕ್ಷಾ ಇ-ಖಜಾನೆ ಉದ್ಘಾಟನೆ ಸಮಾರಂಭ

ಮಲ್ಲಮ ನುಡಿ ವಾರ್ತೆ ಬೆಂಗಳೂರು ಜ.02:- ಜಿಲ್ಲಾಡಳಿತ ಬೀದರ ವತಿಯಿಂದ ಜನವರಿ 3 ರಂದು ಮಧ್ಯಾಹ್ನ 3.30 ಗಂಟೆಗೆ ತಹಸೀಲ್ ಕಛೇರಿ ಬೀದರದಲ್ಲಿ ಆಯೋಜಿಸಿರುವ ಭೂ ಸುರಕ್ಷಾ ಇ-ಖಜಾನೆ (ತಾಲ್ಲೂಕು ಕಛೇರಿ, ಸರ್ವೆ ಮತ್ತು ನೋಂದಣಿ ಇಲಾಖೆಗಳ ಎಲ್ಲಾ ಭೂದಾಖಲೆಗಳ ಡಿಜಿಟಲೀಕರಣ) ಉದ್ಘಾಟನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ್ ಖಾನ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ ಹಾಗೂ ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ ಹಾಗೂ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬೀದರ ನಗರಸಭೆ ಅಧ್ಯಕ್ಷರಾದ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಭಾಗವಹಿಸಲಿದ್ದಾರೆ.

# ಅದ್ದೂರಿ ಗಣರಾಜ್ಯೋತ್ಸವ ಆಚರಣೆಗೆ ನಿರ್ಧಾರ : ಡಿಸಿ ಜಾನಕಿ



ಬಾಗಲಕೋಟೆ : ಜ. 02 : ಜಿಲ್ಲಾಡಳಿತದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಜನವರಿ 26 ರಂದು ಜರುಗಲಿರುವ ಗಣರಾಜ್ಯೋತ್ಸವವನ್ನು ಅರ್ಥಪೂರ್ಣ, ವಿಶಿಷ್ಟ ಹಾಗೂ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ಗಣರಾಜ್ಯೋತ್ಸವ ಆಚರಣೆ ಕುರಿತು ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾಡಳಿತ ಭವನದ ಕಟ್ಟಡದ ಮೇಲೆ ಜಿಲ್ಲಾಧಿಕಾರಿಗಳಿಂದ ಧ್ವಜಾರೋಹಣ, 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಉಸ್ತುವಾರಿ ಸಚಿವರಿಂದ ಧ್ವಜಾರೋಜಹಣ ಹಾಗೂ ಸಚಿವರಿಂದ ಗಣರಾಜ್ಯೋತ್ಸವದ ಸಂದೇಶದ ನಂತರ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದರು.

ಪಥಸಂಚಲನ ಕಾರ್ಯಕ್ರಮದಲ್ಲಿ ಪೋಲಿಸ್, ಗೃಹರಕ್ಷಕ ದಳ, ಸೇವಾದಳ, ಸ್ಕೌಟ್ ಆ್ಯಂಡ್ ಗೈಡ್ಸ್, ಎನ್.ಸಿ.ಸಿ. ಕೆಡೆಟ್‌ಗಳನ್ನು ಆಹ್ವಾನಿಸಲು ಸೂಚಿಸಲಾಯಿತು. ಧ್ವಜಾರೋಹಣ ವ್ಯವಸ್ಥೆ ಮಾಡಲು ಭಾರತ ಸೇವಾದಳ, ಪೋಲಿಸ್ ಇಲಾಖೆ, ತಹಶೀಲ್ದಾರ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿಗಳಿಗೆ ವಹಿಸಲಾಯಿತು. ಕಾರ್ಯಕ್ರಮಗಳ ಸಿದ್ದತೆಗೆ ಸಮಿತಿಗಳನ್ನು ರಚಿಸಲಾಗಿದ್ದು, ಪೂರ್ವ ತಯಾರಿಗಾಗಿ ಉಪ ಸಮಿತಿಗಳ ಸಭೆ ಕರೆದು ಬೇಕಾಗುವ ಎಲ್ಲ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲು ಸೂಚಿಸಿದರು.

ಸಂಪೂರ್ಣವಾಗಿ ಪ್ಲಾಸ್ಟಿಕ್ ಧ್ವಜ ಬಳಸುವುದನ್ನು ಹಾಗೂ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದ್ದು, ಶಾಲಾ ಮಕ್ಕಳಿಗೆ ಪ್ಲಾಸ್ಟಿಕ್ ಧ್ವಜಗಳನ್ನು ತರುವುದನ್ನು ನಿರ್ಭಂದಿಸುವ ಕುರಿತು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ವಿವೇಕಾನಂದ ಅವರಿಗೆ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು. ಕ್ರೀಡಾಂಗಣದಲ್ಲಿ ವೇದಿಕೆ ನಿರ್ಮಾಣ, ಗಣ್ಯರಿಗೆ ಶಾಸಕರಿಗೆ, ಸಂಸದರುಗಳಿಗೆ ಹಾಗೂ ಪತ್ರಕರ್ತರಿಗೆ ಸೂಕ್ತ ಆಸನಗಳ ವ್ಯವಸ್ಥೆ, ಧ್ವನಿವರ್ಧಕ ಹಾಗೂ ಜನರೇಟರ್ ವ್ಯವಸ್ಥೆಯನ್ನು ಕೈಗೊಳ್ಳಲು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ ಭವನ ಹಾಗೂ ತಾಲೂಕ ಭವನಕ್ಕೆ ವಿದ್ಯುತ್ ಅಲಂಕಾರ ಮಾಡುವಂತೆ ತಿಳಿಸಲಾಯಿತು. ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿಗಳಿಗೆ ಸನ್ಮಾನಿಸಲು ತೀರ್ಮಾನಿಸಲಾಯಿತು. ರಾಷ್ಟ್ರಕವಿ ಕುವೆಂಪುರವರ ವಿರಚಿತ ನೇಗಿಲಯೋಗಿ ಹಾಡನ್ನು ರಾಷ್ಟ್ರಗೀತೆ ನಂತರ ಪರಿಣಿತ ಕಲಾವಿದರಿಂದ ಹಾಡಿಸಲು ತಳಿಸಲಾಯಿತು. ಶಾಲಾ ಮಕ್ಕಳಿಗೆ ಸಿಹಿ ತಿಂಡಿ ವಿತರಣೆ ಮಾಡುವುದು, ಗಣರಾಜ್ಯೋತ್ಸವ ದಿನದಂದು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ರಿಯರ್ಸಲ್ ದಿನದಂದು ಕ್ರೀಡಾಂಗಣಕ್ಕೆ ಹೋಗಿ ಬರಲು ರಿಯಾಯಿತಿ ದರದಲ್ಲಿ ವಾಹನ ವ್ಯವಸ್ಥೆ ಕಲ್ಪಿಸಲು ತಿಳಿಸಲಾಯಿತು.

ಸದರಿ ದಿನದಂದು ಪೋಲಿಸ್ ಬಂದೂಬಸ್ತಿ ವ್ಯವಸ್ಥೆ ಮಾಡುವಂತೆ ಪೋಲಿಸ್ ಇಲಾಖೆಗೆ ಸೂಚಿಸಲಾಯಿತು. ರಾಷ್ಟ್ರೀಯ ಕಾರ್ಯಕ್ರಮವಾಗಿರುವದರಿಂದ ಜಿಲ್ಲೆಯ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಸಿಇಓ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ವಿವೇಕಾನಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಜಶೇಖರ ಪಟ್ಟಣಶೆಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅತಿಥಿ ಉಪನ್ಯಾಸಕ ಹುದ್ದೆಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು ಜ 02:ಬೆಂಗಳೂರಿನ ಕೆ.ಆರ್ ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ 2024 - 25ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಗಣಿತ, ಜೀವಶಾಸ್ತ್ರ ಮತ್ತು ಭಾರತದ ಸಂವಿಧಾನ ವಿಷಯಗಳನ್ನು ಬೋಧಿಸಲು ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಎಐಸಿಟಿಇ /ಯುಜಿಸಿ ನಿಯಮಗಳಿಗನುಸಾರ ಸೂಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ www.uvce.karnataka.gov.inನಿಂದ ನಿಗಧಿತ ನಮೂನೆಯನ್ನು ಡೌನ್ಲೋಡ್ ಮಾಡಿಕೊಂಡು ಅರ್ಜಿಯನ್ನು ಸಂಬಂಧಿತ ದಾಖಲೆಗಳ ಪ್ರತಿಗಳೊಂದಿಗೆ ಕುಲಸಚಿವರ ಕಛೇರಿ, ಯುವಿಸಿಇ, ಕೆ.ಆರ್ ವೃತ್ತ ಇಲ್ಲಿಗೆ ಜನವರಿ 13 ರೊಳಗೆ ಸಲ್ಲಿಸುವುದು. ನಿಗಧಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಸಮನ್ವಯಧಿಕಾರಿ, ತಾಂತ್ರಿಕೇತರ ವಿಷಯ, ಇವರನ್ನು ಸಂಪರ್ಕಿಸಬಹುದು. ಸಂದರ್ಶನದ ದಿನಾಂಕವನ್ನು ವೆ???ಸೈ???ನಲ್ಲಿ ತಿಳಿಸಲಾಗುತ್ತದೆ

# ಶಿಕ್ಷಣದೊಂದಿಗೆ ವ್ಯಕ್ತಿತ್ವ ರೂಪಿಸಿಕೊಳ್ಳಿ : ಎಸಿ ಶಕೀಲ್



ಬೀದರ, ಜ.02 : ವಿದ್ಯರ್ಥಿಗಳು ಇಂದಿನ ಶಿಕ್ಷಣದೊಂದಿಗೆ ಸೇವಾ ಮನೋಭಾವ ಮತ್ತು ವ್ಯಕ್ತಿತ್ವವನ್ನೂ ರೂಪಿಸಿಕೊಳ್ಳಬೇಕೆಂದು ಬೀದರನ ಸಹಾಯಕ ಆಯುಕ್ತರಾದ ಮೊಹ್ಮದ್ ಶಕೀಲ್ ಅವರು ಹೇಳಿದರು.

ಅವರು ಇಂದು ನಗರದ ರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ರ್ಪಡಿಸಿರುವ ರಾಷ್ಟ್ರೀಯ ಸೇವಾ ಯೋಜನೆಯ 2024-25ನೇ ಸಾಲಿನ ವಿಶೇಷ ವರ್ಷಿಕ ಶಿಬಿರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿದ ಅವರು ವಿದ್ಯರ್ಥಿಗಳಲ್ಲಿ ನೈತಿಕತೆ, ಸೇವಾ ಮನೋಭಾವನೆ ಮತ್ತು ಉತ್ತಮ ವ್ಯಕ್ತಿತ್ವ ರೂಪಿಸುವ ಸದುದ್ದೇಶದಿಂದ 1969ರಲ್ಲಿ ಮಹಾತ್ವ ಗಾಂಧಿಜಿಯವರ ಪ್ರೇರಣೆಯಿಂದ ಎನ್.ಎಸ್.ಎಸ್. ಅನ್ನು ಆರಂಭಿಸಲಾಗಿದ್ದು, ಪ್ರಸ್ತುತ ದೇಶಾದ್ಯಂತ 500ಕ್ಕೂ ಹೆಚ್ಚು ಕಾಲೇಜುಗಳಲ್ಲಿ 46 ಲಕ್ಷಕ್ಕೂ ಹೆಚ್ಚು ವಿದ್ಯರ್ಥಿಗಳು ಎನ್.ಎಸ್.ಎಸ್.ಕರ್ಯರ್ತರಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ, ರ್ಕಾರಿ ಪಾಲಿಟೆಕ್ನಿಕ್ ಕಲಬುರಗಿಯ ಉಪನ್ಯಾಸಕರಾದ ಎಸ್. ಮಚ್ಛೇಂದ್ರ ಅವರು ಮಾತನಾಡುತ್ತ, ಪ್ರತಿಯೊಬ್ಬರಿಗೂ ದೇಶಾಭಿಮಾನ ಇರಬೇಕು, ಸ್ವಾತಂತ್ರ ??ಯೋಧರಾದ ಸುಭಾಷಚಂದ್ರಬೋಸ್ ಅವರಿಂದ ನಾವು ಪ್ರೇರಣೆ ಪಡೆಯಬೇಕು, ಈ ದೇಶಕ್ಕೆ ನಾವೇನಾದರೂ ಕೊಡುಗೆ ನೀಡಬೇಕೆ ಹೊರತು ದೇಶ ನಮಗೇನು ಮಾಡಿದೆ ಎನ್ನುವ ನಕಾರಾತ್ಮಕ ಭಾವನೆ ಮೂಡಿಸಿಕೊಳ್ಳಬಾರದು, ನಾವೆಲ್ಲರೂ ಇಂತಹ ಶಿಬಿರಗಳ ಮೂಲಕ ನಮ್ಮ ಆಂತರಿಕ ಸೌಂರ್ಯ ಹೆಚ್ಚಿಸಿಕೊಳ್ಳಬೇಕೆಂದರು.

ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚರ್ಯರಾದ ವಿಜಯಕುಮಾರ ಎಸ್.ಜಾಧವ ಅವರು ಮಾತನಾಡಿ ಸಮಾಜ ಸೇವೆಯಿಂದ ಮಾತ್ರ ದೇವರನ್ನು ಕಾಣಲು ಸಾಧ್ಯ. ನಾವು ಬೇರೆಯವರಿಗೆ ಸಹಾಯ ಮಾಡಿದರೆ ಅದರಿಂದ ನಮಗೆ ಮಾನಸಿಕ ನೆಮ್ಮದಿ ಸಿಗುತ್ತದೆ. ಪ್ರತಿಯೊಬ್ಬರೂ ವೈಯಕ್ತಿಕ ಮತ್ತು ಸಾಮಾಜಿಕ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ವಿದ್ಯರ್ಥಿಗಳು ತಮ್ಮ ತಮ್ಮ ಆತ್ಮವಿಶ್ವಾಸ ಮತ್ತು ವ್ಯಕ್ತಿತ್ವ ವೃದ್ಧಿಸಿಕೊಳ್ಳಬೇಕೆಂದು ಹೇಳಿದರು.

ಇದೇ ಸಂರ್ಭದಲ್ಲಿ ರ್ನಾಟಕ ರಾಜ್ಯ ರ್ಕಾರಿ ನೌಕರರ ಸಂಘದ ನೂತನ ನರ್ದೇಶಕರಾಗಿ ಆಯ್ಕೆಯಾದ ಡಾ.ಸಂತೋಷ ಅವರನ್ನು ಗೌರವಿಸಲಾಯಿತು. ವೇದಿಕೆಯ ಮೇಲೆ ವಿದ್ಯುತ್ ವಿಭಾಗದ ಮುಖ್ಯಸ್ಥರಾದ ಜಾಕೀರ್ ಹುಸೇನ್, ನವರ್ನಾಟಕ ಸ್ವಾಭಿಮಾನಿ ವೇದಿಕೆಯ ಅಧ್ಯಕ್ಷರಾದ ರಾಜಕುಮಾರ ಕಂದಗೂಳೆ, ಪಾಲಿಟೆಕ್ನಿಕ್ ಕುಲಸಚಿವ ಶೇಖ್ ಸಿರಾಜೋದ್ದೀನ್ ಇದ್ದರು. ಸಿ.ಪಿ.ವಿದ್ಯರ್ಥಿನಿ ಕು.ಪಲ್ಲವಿ ಸ್ವಾಗತ ಗೀತೆ ಹಾಡಿದರು. ಉಪನ್ಯಾಸಕರಾದ ಶಿವಕುಮಾರ ಕಟ್ಟೆ ಸ್ವಾಗತಿಸಿದರೆ, ಎನ್.ಎಸ್.ಎಸ್.ಸಂಯೋಜನಾಧಿಕಾರಿ ಅರುಣ ಮೊಕಾಶಿ ನಿರೂಪಿಸಿದರು. ಜಿರೋಬೆ ಸಚಿನ್ ವಂದಿಸಿದರು.

ಉಪನ್ಯಾಸ :

ನಂತರ ನಡೆದ ಪ್ರತ್ಯೇಕ ಉಪನ್ಯಾಸ ಗೋಷ್ಠಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಯುವ ಘಟಕದ ಅಧ್ಯಕ್ಷ ಗುರುನಾಥ ರಾಜಗೀರಾ "ರಾಷ್ಟನರ್ಮಾಣದಲ್ಲಿ ಯುವಕರ ಪಾತ್ರ' ಕುರಿತು ಮಾತನಾಡುತ್ತ, ಭಾರತ ರ್ಥಿಕ ಅಭಿವೃದ್ದಿ ಆಗಬೇಕಾದರೆ ಯುವಕರು ಭಾರತ ನರ್ಮಿತ ಉತ್ಪನ್ನಗಳನ್ನು ಮಾತ್ರ ಉಪಯೋಗಿಸಬೇಕು ನಮ್ಮ ದೇಶ ಆರುವರೆ ಲಕ್ಷ ಸ್ವಾತಂ??????ಹೋರಾಟಗಾರರ ತ್ಯಾಗ ಬಲಿದಾನಗಳಿಂದ ಸ್ವಾತಂ?????? ಪಡೆದಿದ್ದು, ಇಂದಿನ ಯುವಕರು ತಮ್ಮ ಸಾಮಾಜಿಕ ಜವಾಬ್ದಾರಿಗಳನ್ನು ಅರಿತುಕೊಂಡು ಶ್ರಮಪಟ್ಟು ಕೆಲಸ ಮಾಡಿ ಜೀವನದಲ್ಲಿ ಯಶಸ್ಸು ಸಾಧಿಸಬೇಕೆಂದು ಹೇಳಿದರು.

# ಉತ್ತಮ ಸಾಧನೆ ನಿಮ್ಮದಾಗಲಿ:ಬೆಳಗುಂದಿ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಜ.2:2025ನೇಸಾಲಿನ ಶೈಕ್ಷಣಿಕ ವರ್ಷದಲ್ಲಿ ಉತ್ತಮ ಸಾಧನೆ ಮಾಡುವ ಪ್ರಯತ್ನ ನಿಮ್ಮದಾಗಲಿ ಎಂದು ಸಂಸ್ಥೆಯ ಅಧ್ಯಕ್ಷ ಸಣ್ಣಸಿದ್ರಾಮಪ್ಪಗೌಡ ಬೆಳಗುಂದಿ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾ ವರ್ಧಕ ಕಲಾ ಹಾಗೂ ವಾಣಿಜ್ಯ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡ ನೂತನ ವರ್ಷಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಪದವಿ ಹಂತದ ಶಿಕ್ಷಣ ಅಂತ್ಯಂತ ಮಹತ್ವದ್ದಾಗಿದೆ. ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದರೆ ಒಳ್ಳೆಯ ಉದ್ಯೋಗದೊಂದಿಗೆ ಸಾಮಾಜಿಕ, ಆರ್ಥಿಕವಾಗಿ ಅಭಿವೃದ್ಧಿ ಹೊಂದಬಹುದು. ಈ ದಿಸೆಯಲ್ಲಿ ಗ್ರಾಮೀಣ ಭಾಗದಲ್ಲಿ ಸಂಸ್ಥೆ ಪದವಿ ಕಾಲೇಜುನ್ನು ಪ್ರಾರಂಭ ಮಾಡಿದೆ. ಇದರ ಸರಿಯಾದ ಸದುಪಯೋಗ ಪಡೆದುಕೊಂಡರೆ ಸಂಸ್ಥೆಯ ಮಹತ್ವ ಹೆಚ್ಚಾಗುತ್ತದೆ. ಹೊಸ ವರ್ಷದ ಆಚರಣೆಯಲ್ಲಿ ಕೆಲ ಮಹತ್ವದ ಗುರಿ ಉದ್ದೇಶಗಳನ್ನು ರೂಪಿಸಿಕೊಳ್ಳಬೇಕು ಎಂದು ಕಿವಿ ಮಾತುಗಳನ್ನು ಹೇಳಿದರು.

ಸ' ಹ' ಕಾ ಂ ುೆ ೯ ದ' ಶಿ ೯ ಕೆ.ಬಿ.ಗೋವರ್ಧನ, ಕೋಶಾಧ್ಯಕ್ಷ ಮುಕುಂದಕುಮಾರ ಅಲಿಝಾರ, ಆಡಳಿತ ಮಂಡಳಿಯ ಸದಸ್ಯರಾದ ಸಿದ್ರಾಮಪ್ಪಗೌಡ ಗೊಂದಡಗಿ, ಸುರೇಶ ಆನಂಪಲ್ಲಿ, ಪ್ರೌಢ ಶಾಲಾ ಮುಖ್ಯಗುರು ಲಿಂಗಾರಡ್ಡಿ ನಾಯಕ, ಪ್ರಾಂಶುಪಾಲರಾದ ಹಂಪಣ್ಣ ಸಜ್ಜನಶೆಟ್ಟಿ, ಜಿ.ಎಂ.ಗುರುಪ್ರಸಾದ, ಕರಬಸಯ್ಯ ದಂಡಿಗಿಮಠ, ಶಿಕ್ಷಕರು, ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಸೇರಿದಂತೆ ಇತರರಿದ್ದರು.

## ವಿಜಯೇಂದ್ರನನ್ನ ಭೇಟಿಯಾಗೊ ಅವಶ್ಯಕತೆ ನನಗಿಲ್ಲ : ಯತ್ನಾಳ್ ತಿರುಗೇಟು




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜ.2–ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿಯಾಗುವ ಅವಶ್ಯಕತೆ ನನಗಿಲ್ಲ, ಅವರಾಗಿಯೇ ಬಂದು ನನ್ನ ಜೊತೆ ಮಾತನಾಡಿಸಿದರೂ ನಾನು ಮಾತನಾಡುವುದಿಲ್ಲ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿಕಾರಿದರು. ಒಂದು ವೇಳೆ ವಿಜಯೇಂದ್ರ ಅವರು ಮಾತನಾಡಿಸಿದರೆ ಮಾತನಾಡುತ್ತಿರಾ? ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಏಕೆ ವಿಜಯೇಂದ್ರ ಅವರ ಜೊತೆ ಮಾತನಾಡಬೇಕು? ಹೈಕಮಾಂಡ್ ಕರೆದು ಮಾತನಾಡಿಸಿದರೆ ಮಾತನಾಡುತ್ತೆನೆ. ನಮಗೆ ಏನು ಅನ್ಯಾಯ ಆಗಿದೆ ಎಂಬುದು ನಮಗೆ ಗೊತ್ತಿದೆ. ನಮ ನೋವು ನಮಗೆ ಇದೆ.

ಹೈಕಮಾಂಡ್ ನಾಯಕರು ಕರೆದು ಮಾತಾಡಲಿ ಎಂದು ಹೇಳುತ್ತೆವೆ ಎಂದಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ವಿಜಯೇಂದ್ರ ದೂರು ನೀಡಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ನಮಗೆ ಹೊಸ ವರ್ಷ ಯುಗಾದಿ. ವಿಜಯೇಂದ್ರ ಅವರಿಗೆ ಯಾವುದು ಹೊಸ ವರ್ಷ ಎಂಬುದು ನನಗೆ ಗೊತ್ತಿಲ್ಲ. ಪಕ್ಷದಿಂದ ನನ್ನ ಉಚ್ಚಾಟನೆ ಆಗುವುದಿಲ್ಲ. ಉಚ್ಚಾಟನೆ ಎನ್ನುವುದು ಮಾಧ್ಯಮಗಳು ಸೃಷ್ಟಿ ಮಾಡಿರುವುದು. ನನ್ನನ್ನ ಏಕೆ ಉಚ್ಚಾಟನೆ ಮಾಡುತ್ತಾರೆ? ಎಂದು ಪ್ರಶ್ನಿಸಿದರು.

ನಾನು ಯಾರ ಜೊತೆಯೂ ಅಡ್ಜೆಸೆಂಟ್ ಮಾಡಿಕೊಂಡಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಜಮೀರ್ ಅಹದ್ ಖಾನ್ ಜೊತೆ ನನ್ನ ಅಡ್ಜೆಸೆಂಟ್ ಇಲ್ಲ. ವಿಜಯೇಂದ್ರಗೆ ದೆಹಲಿ ನಾಯಕರು ಪದೇ ಪದೇ ಅಪಾಯಿಟೆಂಟ್ ಕೊಡುತ್ತಿದ್ದಾರೆ. ಅದಕ್ಕೆ ಹೋಗುತ್ತಾರೆ. ಆದರೆ ನಾವು ಯಾರ ಅಪಾಯಿಟೆಂಟ್ ಅನ್ನು ಕೇಳಿಲ್ಲ.

ನಾವು ಯಾರ ಮೇಲೂ ದೂರು ಕೊಡುವುದಿಲ್ಲ. ನಮದು ಜನರ ಆಂದೋಲ. ನಮದು ದಿಲ್ಲಿ ಆಂದೋಲ ಅಲ್ಲ. ನನ್ನಂತ ಪಕ್ಷ ನಿಷ್ಠಯಾರು ಇಲ್ಲ. ನಾನು ಕಾಂಗ್ರೆಸ್ ಭಿಕ್ಷೆಯಿಂದ ಶಾಸಕನಾಗಿಲ್ಲ, ನಾನು ಹಿಂದೂಗಳಿಂದ, ಬಿಜೆಪಿಯಿಂದ ಶಾಸಕ ಆಗಿರೋದು. ವಿಜಯೇಂದ್ರ ಭೇಟಿಯಾಗುವ ಅವಶ್ಯಕತೆ ನನಗೆ ಇಲ್ಲ. ಯತ್ನಾಳ್ ಏನು ಎಂಬುದು ಎಲ್ಲರಿಗೂ ಗೊತ್ತಿದೆ ಎಂದು ತಿರುಗೇಟು ನೀಡಿದ್ದಾರೆ.

ವಕ್ಫ್ ವಿಚಾರವಾಗಿ ಮಾತನಾಡಿ, ವಕ್ಫ್ ಎರಡನೇ ಹಂತದ ಪ್ರವಾಸ ನಾಳೆ ನಿರ್ಧಾರ ಮಾಡುತ್ತೆವೆ. ನಾಳೆ ನಡೆಯುವ ಸಭೆಯಲ್ಲಿ ನಿರ್ಧಾರ ಆಗುತ್ತದೆ. ನಮ ನಡೆ ಜನರ ಕಡೆಗೆ. ನಮ ನಡೆ ದೆಹಲಿ ಕಡೆಯಲ್ಲ ಎಂದು ತಿಳಿಸಿದರು.

## ಹಣಕಾಸು ಸಂಸ್ಥೆಗಳು, ಗಿರಿವಿದಾರರು, ಲೇವದೇವಿಗಾರರ ಲೈಸೆನ್ಸ್ ನವೀಕರಣಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 02, ಯಾದಗಿರಿ ಉಪ ವಿಭಾಗದಲ್ಲಿ 2020–21ರಲ್ಲಿ ನೋಂದಾಣಿಯಾದ ಮತ್ತು ನವೀಕರಿಸಿದ ಎಲ್ಲಾ ಹಣಕಾಸು ಸಂಸ್ಥೆಗಳು ಮತ್ತು ಗಿರಿವಿದಾರರು ಹಾಗೂ ಲೇವದೇವಿಗಾರರ ಲೈಸೆನ್ಸಗಳನ್ನು 2025ರ ಎಪ್ರಿಲ್ 1 ರಿಂದ 2030ರ ಮಾರ್ಚ್ 31ರ ಅವಧಿಗಾಗಿ ನವೀಕರಣಕ್ಕೆ ಸೂಚಿಸಿದೆ ಎಂದು ಯಾದಗಿರಿ ಉಪ ವಿಭಾಗ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಶೀಮಾ ಅವರು ತಿಳಿಸಿದ್ದಾರೆ.

ಯಾದಗಿರಿ ಉಪ ವಿಭಾಗದಲ್ಲಿ 2020–21ರಲ್ಲಿ ನೊಂದಣಿಯಾದ ಮತ್ತು ನವೀಕರಿಸಿದ ಎಲ್ಲಾ ಹಣಕಾಸು ಸಂಸ್ಥೆಗಳ ಲೇವಾದೇವಿಗಾರರು ಮತ್ತು ಗಿರಿವಿದಾರರು ಲೈಸನ್ಸಗಳನ್ನು ದಿನಾಂಕ 01–04–2025 ರಿಂದ 31–03–2030ರ ಅವಧಿಗಾಗಿ ನವೀಕರಣ ಅರ್ಜಿಗಳನ್ನು ಕರ್ನಾಟಕ ಮನಿಲೆಂಡಿಂಗ್ ಕಾಯ್ದೆ 1961 ನಿಯಮ 5(2) ರನ್ವಯ ದಾಖಲಾತಿಗಳೊಂದಿಗೆ 2025ರ ಜನವರಿ 31ರ ಒಳಗೆ ಸಹಕಾರ ಸಂಘಗಳ ನಿಬಂಧಕರ ಕಛೇರಿ ಯಾದಗಿರಿ ಇಲ್ಲಿಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಗವಾನ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಅನಾವರಣ: ಮಾರೆಪ್ಪ ನಾಯಕ ಮಗ್ದಂಪುರ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜ. 6 ರಂದು ಭಗವಾನ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಅನಾವರಣ ಕಾರ್ಯಕ್ರಮವು ಸೈದಪೂರ ವಲಯದ ಕರಿಬೆಟ್ಟ ಕ್ರಾಸ್ ಹತ್ತಿರ ಬೆಳಿಗ್ಗೆ 11.30 ಕ್ಕೆ ಆಯೋಜಿಸಿದ್ದೇವೆ ಎಂದು ಉತ್ತರ ಕರ್ನಾಟಕ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷರಾದ ಮಾರೆಪ್ಪ ನಾಯಕ ಮಗ್ದಂಪುರ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಭಗವಾನ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಪರಮ ಪೂಜ್ಯ ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ. ಪೂಜ್ಯ ಶ್ರೀ ವಾಲ್ಮೀಕಿ ವರದಾನಂದೇಶ್ವರ ಸ್ವಾಮೀಜಿ ದಿವ್ಯಸಾನಿದ್ಯವಹಿಸಲಿದ್ದಾರೆ ಎಂದರು.

ಕರ್ನಾಟಕ ಸರ್ಕಾರದ ಲೋಕೋಪಯೋಗಿ ಇಲಾಖೆ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಪುತ್ಥಳಿ ಅನಾವರಣ ಮಾಡಲಿದ್ದಾರೆ. ಸಣ್ಣ ಕೈಗಾರಿಕೆ ಮತ್ತು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಪುರ ಅವರು ಕಾರ್ಯಕ್ರಮದ ಜ್ಯೋತಿ ಬೆಳಗಿಸಲಿದ್ದಾರೆ. ಗುರಮಿಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಬಳ್ಳಾರಿ ಮಾಜಿ ಲೋಕಸಭಾ ಸದಸ್ಯರಾದ ವಿ ವಿ ಎಸ್ ಉಗ್ರಪ್ಪ ಅವರು ಕಾರ್ಯಕ್ರಮದ ಧ್ವಜಾರೋಹಣ ನೇರವೆರಿಸಲಿದ್ದಾರೆ. ರಾಯಚೂರು ಲೋಕಸಭಾ ಸದಸ್ಯರಾದ ಜಿ ಕುಮಾರ ನಾಯಕ ಅವರು ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಲಿದ್ದಾರೆ ಎಂದು ಹೇಳಿದರು.

ಕಲಬುರಗಿ ಲೋಕಸಭಾ ಕ್ಷೇತ್ರದ ಸದಸ್ಯರಾದ ರಾಧಾಕೃಷ್ಣ ದೊಡ್ಡಮನಿ. ಅಗ್ನಿ ಶಾಮಕ ಮತ್ತು ತುರ್ತುಸೇವೆಗಳ ಡಿ ಐ ಜಿ ಅಧಿಕಾರಿಗಳಾದ ರವಿ ಡಿ ಚೆನ್ನಣವರು. ಸುರಪುರ ಮತಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲ ನಾಯಕ. ದೇವದುರ್ಗ ಮತಕ್ಷೇತ್ರದ ಶಾಸಕಿಯಾದ ಶ್ರೀಮತಿ ಕರೆಮ್ಮ ನಾಯಕ. ಮಾಜಿ ಸಚಿವರಾದ ರಾಜುಗೌಡ(ನರಸಿಂಹ ನಾಯಕ).

ರಾಯಚೂರು ಲೋಕಸಭಾ ಕ್ಷೇತ್ರದ ಮಾಜಿ ಸಂಸದರಾದ ಬಿ ವಿ ನಾಯಕ. ಮಾಜಿ ಸಚಿವರಾದ ಶಿವನಗೌಡ ನಾಯಕ. ಭಗವಾನ ಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಭೂದಾನಿಗಳಾದ ಜಿಲ್ಲಾ ಪಂಚಾಯತ ಮಾಜಿ ಸದಸ್ಯರಾದ ಶ್ರೇಣಿಕುಮಾರ ಅವರುಗಳು ವಿಶೇಷ ಅಹ್ವಾನಿತರಾಗಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಯಾದಗಿರಿ ಜಿಲ್ಲಾ ವಾಲ್ಮೀಕಿ ನಾಯಕ ಸಮಾಜದ ಜಿಲ್ಲಾ ಅಧ್ಯಕ್ಷರಾದ ಗೌಡಪ್ಪಗೌಡ ಆಲ್ದಾಳ ಮಾತನಾಡಿ ಭಗವಾನ ಮಹರ್ಷಿ ವಾಲ್ಮೀಕಿ ಪುತ್ಥಳಿ ನಿರ್ಮಾಣ ಕಾರ್ಯಕ್ರಮವನ್ನು ಎಲ್ಲಾ ವಾಲ್ಮೀಕಿ ಸಮಾಜದ ಮುಖಂಡರು ಸೇರಿ ವಿಜೃಂಭಣೆಯಿಂದ ಮಾಡಲು ನಿರ್ಧರಿಸಿದ್ದೇವೆ ಈ ಕಾರ್ಯಕ್ರಮಕ್ಕೆ ವೇದಿಕೆ ಸಮಿತಿ. ಶಿಸ್ತು ಸಮಿತಿ. ಆಹಾರ ಸಮಿತಿ. ಮೆರವಣಿಗೆ ಸಮಿತಿ. ಪ್ರಚಾರ ಸಮಿತಿಗಳು ರಚನೆಮಾಡಿ ಈ ಕಾರ್ಯಕ್ರಮ ಯಶಸ್ಸಿಯಾಗಿ ಮಾಡುತ್ತೇವೆ. ಅದೇ ರೀತಿಯಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಕರ್ನಾಟಕ ಸರ್ಕಾರದ ಸಚಿವರಿಗೆ ನಮ್ಮ ಸಮಾಜದ ಬೇಡಿಕಗಳನ್ನು ಮನವಿ ಮಾಡುತ್ತೇವೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಸಮಸ್ತ ವಾಲ್ಮೀಕಿ ಸಮಾಜದ ಹಿರಿಯರು.

ಯುವಕರು. ಮಹಿಳೆಯರು. ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೋಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿ ಗೋಷ್ಠಿಯಲ್ಲಿ ನಿವೃತ್ತ ತಹಸಿಲ್ದಾರರು ಸಿದ್ದಲಿಂಗಪ್ಪ ನಾಯಕ. ವಾಲ್ಮೀಕಿ ಸಮಾಜದ ಮುಖಂಡರಾದ ದೊಡ್ಡಯ್ಯ ಹಳಿಗೇರಾ. ಶರಣಪ್ಪ ಜಾಕನಳ್ಳಿ. ರವಿಂದ್ರ ನಾಯಕ ಕೂಡ್ಲೂರು. ಲಕ್ಷ್ಮಣ್ಣ ನಾಯಕ ಕೂಡ್ಲೂರು. ಬಸವರಾಜ ನಿಲಹಳ್ಳಿ. ಅಂಬರೀಶ ಕೂಡ್ಲೂರು ಇದ್ದರು.

ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಪ್ರತಿಭಟನೆ.

# ಕಾಂಗ್ರೆಸ್ ಸರ್ಕಾರ ಆತ್ಮಹತ್ಯೆ ಮತ್ತು ಹತ್ಯೆ ಭಾಗ್ಯ ರಾಜ್ಯದ ಜನತೆಗೆ ನೀಡಿದೆ:–ಕು.ಲಲಿತಾ ಅನಪುರ..




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:–ರಾಜ್ಯದ್ಯಂತ ಬಾಣಂತಿಯರ ಹಾಗೂ ನವಜಾತ ಶಿಶುಗಳ ಸಾವುಗಳ ಕುರಿತು ಇಂದು ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಜಿಲ್ಲಾಧಿಕಾರಿ ಕಛೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ರಾಜ್ಯ ಕಾರ್ಯದರ್ಶಿ ಮತ್ತು ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪುರ ಅವರು ಕರ್ನಾಟಕದಲ್ಲಿ ಆಡಳಿತದಲ್ಲಿರುವ ಕಾ0ಗ್ರೆಸ್ ಸರ್ಕಾರ ಆತ್ಮಹತ್ಯೆ ಮತ್ತು ಹತ್ಯೆ ಭಾಗ್ಯವನ್ನು ಕರ್ನಾಟಕ ಜನತೆಗೆ ನೀಡಿದೆ ಹಾಗೂ ಕರ್ನಾಟಕದಲ್ಲಿ ಕಳೆದ 19 ತಿಂಗಳಲ್ಲಿ ಆರು ಅಧಿಕಾರಿಗಳಿಗೆ ಆತ್ಮಹತ್ಯೆ ಭಾಗ್ಯವನ್ನು ಈ ಸರ್ಕಾರ ಕರುಣಿಸಿದೆ, 700ಕ್ಕೂ ಹೆಚ್ಚು ಬಾಣಂತಿಯರ ಸಾವು ಕರ್ನಾಟಕದಲ್ಲಿ ಸಂಭವಿಸಿದೆ 1100 ಹೆಚ್ಚು ನವಜಾತ ಶಿಶುಗಳ ಸಾವು ಕಾರಣವಾಗಿರುವುದು ಕರ್ನಾಟಕದ ಕಾ0ಗ್ರೆಸ್ ಸರ್ಕಾರ ಆರೋಗ್ಯ ಇಲಾಖೆಯಲ್ಲಿ ನಡೆಯುತ್ತಿರುವ ವ್ಯಾಪಕ ಭಷ್ಟಾಚಾರ, ಕಮಿಷನ್ ದಂಧೆಯ ಕಾರಣ ಕಳಪೆ ಔಷಧಗಳು ಹಾಗೂ ವೈದ್ಯಕೀಯ ಸಾಮಗಿಗಳ ಪೂರೈಕೆ ಬಾಣ0ತಿಯರು ಹಾಗೂ ಹಸುಗೂಸುಗಳಿಗಾಗಿ ಕೇಂದ್ರ ಸರ್ಕಾರದ ಯೋಜನೆಗಳಾದ ಮಾತೃವ0ದನ ಇಂದ್ರಧನುಷ್ ಮುಂತಾದ ಯೋಜನೆಗಳನ್ನು ರಾಜ್ಯ ಸರ್ಕಾರ ಸರಿಯಾಗಿ ತಲುಪಿಸುತ್ತಿಲ್ಲ. ಹಾಗೂ ಕೇ0ದ್ರ ಸರ್ಕಾರ ಈ ಯೋಜನೆಗಳಿಗೆ ನೀಡುವ ಅನುದಾನದ ದುರ್ಬಳಕೆ ಮಾಡಿಕೊಂಡಿರುವ ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಸ0ಭವಿಸುತ್ತಿರುವ ಬಾಣ0ತಿಯರ ವ್ಯಾಪಕ ಸಾವಿನ ಹಿನ್ನೆಲೆಯಲ್ಲಿ ರಾಜ್ಯ ಮಹಿಳಾ ಮೋರ್ಚಾ ರಾಜ್ಯದ ಎಲ್ಲಾ ಜಿಲ್ಲಾ ಕೆ0ದ್ರಗಳಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾತನಾಡಿದ ನಿಕಟಪುರ ಜಿಲ್ಲಾಧ್ಯಕ್ಷಡಾ.ಶರಣಭೂಪಾಲರಡ್ಡಿ ಮಾತನಾಡಿದ ಅವರು ಕರ್ನಾಟಕ ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯವಸ್ಥೆ ಸರ್ಕಾರದ ಹೊಣೆಗೇಡಿತನದಿ0ದ ಸ0ಪೂರ್ಣ ಹದಗೆಟ್ಟಿದೆ. ಸಿಬ್ಬಂದಿಗಳ ಕೊರತೆಯಿ0ದ ಸೊರಗುತ್ತಿವೆ. ಅಂಬುಲೆನ್ಸ್ ಗಳಿಗೆ ಸರಿಯಾಗಿ ಡೀಸೆಲ್ ಸಿಗುತ್ತಿಲ್ಲ, ಅ0ಬುಲೆನ್ಸ್ ಡ್ರೈವರ್ ಗಳಿಗೆ ಸರ್ಕಾರ ಸಂಬಳ ನೀಡುತ್ತಿಲ್ಲ. ಸರ್ಕಾರಿ ಆಸ್ಪತ್ರೆಗಳಲ್ಲಿ ಐಸಿಯು, ಬಡ್ ಬ್ಯಾ0ಕ್ ಕೊರತೆ ಇದೆ. ಸರ್ಕಾರ ಎಲ್ಲಾ ಪ್ರಾಥಮಿಕ ಆರೋಗ್ಯ ಕೇ0ದ್ರ ಹಾಗೂ ಸರ್ಕಾರಿ ಆಸ್ಪತ್ರೆಗಳ. ವ್ಯವಸ್ಥೆಯನ್ನು ಪರಿಶೀಲಿಸಿ ಸುವ್ಯವಸ್ಥಿತಗೊಳಿಸಬೇಕು ಹಾಗೂ ಮೇಲ್ದರ್ಜೆಗೇರಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಸುನಿತಾ ಚೌವ್ಹಾಣ್ ಮಾತನಾಡಿದ ಅವರು ಬಾಣ0ತಿಯರ ಸಾವಿಗೆ ನೈಜ ಕಾರಣಗಳನ್ನು ತಿಳಿದು ಅದನ್ನು ನಿಯಂತ್ರಿಸಲು ಉಚ್ಚನ್ಯಾಯಾಲಯದ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸಬೇಕೆಂದು ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಶ್ರೀಮತಿ ಲಕ್ಷ್ಮಿ ಹೆಬ್ಬಾಳಕರ್ ರಾಜೀನಾಮೆ ನೀಡಲು ಆಗ್ರಹಿಸಿದ್ದಾರು

ಈ ಸಂದರ್ಭದಲ್ಲಿ ರಾಜ್ಯ ಮಹಿಳಾ ಮೋರ್ಚಾ ಕಾರ್ಯಕಾರಿಣಿ ಸದಸ್ಯೆ ವೀಣಾ ಮೋದಿ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ್ ಕಾಡಂನೊರ, ಮಹಿಳಾ ಮೋರ್ಚಾ ನಗರ ಮಂಡಲ ಅಧ್ಯಕ್ಷೆ ಭೀಮಬಾಮಿ ಶೇಂಡಿಗಿ, ಶಕುಂತಲಾ ಗುಜ್ಜಲೂರು, ನಗರಸಭೆ ಉಪಾಧ್ಯಕ್ಷೆ ರುಕೀಯ ಬೇಗಂ, ನಗರಸಭೆ ಸದಸ್ಯೆ ಪ್ರಭಾವತಿ ಕಲಾಲ ಮತ್ತು ವಿಜಯಲಕ್ಷ್ಮಿ ನಾಯಕ, ಸಾಬಣ್ಣ ನಾಯಕ, ಆಶಾ ರಾಜು, ಬಾಲ್ಲಮ್ಮ, ಮಮತಾ ಜಾದವ, ಮುನಿ ಬೇಗಂ, ಅನಿಲ್ ಕರಾಟೆ ಸೇರಿದಂತೆ ಮಹಿಳಾ ಮೋರ್ಚಾ ಪದಾಧಿಕಾರಿಗಳ ಮತ್ತು ಕಾರ್ಯಕರ್ತರದ್ದರು.

# ಬಾಣಂತಿಯರ ಸರಣಿ ಸಾವು ಸರ್ಕಾರಿ ಪ್ರಾಯೋಜಿತ ಕೊಲೆ : ಆರ್.ಅಶೋಕ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜ.2–ರಾಜ್ಯದಲ್ಲಿ ಬಾಣಂತಿಯರ ಸಾವು ದಿನದಿಂದ ದಿನಕ್ಕೆ ಮರಣಮೃದಂಗ ಬಾರಿಸುತ್ತಿದ್ದು, ಇದೊಂದು ಸರ್ಕಾರಿ ಪ್ರಾಯೋಜಿತ ಕೊಲೆಯಾಗಿರುವುದರಿಂದ ಸರ್ಕಾರ ಕೂಡಲೇ ನ್ಯಾಯಾಂಗದ ತನಿಖೆಗೆ ವಹಿಸಿ ಸಚಿವ ದಿನೇಶ್ಗುಂಡೂರಾವ್ ತಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಈವರೆಗೆ 736 ಬಾಣಂತಿಯರ ಸಾವಿನ ಪ್ರಕರಣಗಳು ನಡೆದಿವೆ. ಇದಕ್ಕೆ ಕಳಪೆ ಗುಣಮಟ್ಟದ ಔಷಧಿ ಕಾರಣ ಎಂಬುದು ಮೇಲ್ನೋಟಕ್ಕೆ ಸಾಬೀತಾಗಿದೆ. ಬಾಣಂತಿಯರ ಸಾವು ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದರಿಂದ ಸರ್ಕಾರದ ಪ್ರಾಯೋಜಿತ ಕೊಲೆ ಇದಾಗಿದೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ಗುಂಡೂರಾವ್ ತಮ ಸ್ಥಾನದಿಂದ ಮುಂದುವರೆಯಲು ಯಾವುದೇ ನೈತಿಕತೆಯನ್ನು ಇಟ್ಟುಕೊಂಡಿಲ್ಲ. ಎಸ್ಐಟಿ ಬದಲು ನ್ಯಾಯಾಂಗ ತನಿಖೆಗೆ ವಹಿಸಬೇಕು. ಆಗ ಮಾತ್ರ ನಿಷ್ಪಕ್ಷಪಾತವಾಗಿ ತನಿಖೆ ನಡೆದು ಸತ್ಯ ಹೊರಬರುತ್ತದೆ ಎಂದು ಅಭಿಪ್ರಾಯಪಟ್ಟರು.

ಕಳಪೆ ಔಷಧಿ ಮತ್ತು ಐವಿ ದ್ರಾವಣ ಮಿಶ್ರಣದ ಔಷಧಿಯನ್ನು ಸೇವಿಸಿ ಬಾಣಂತಿಯರು ಸತ್ತಿದ್ದಾರೆ. ಆದರೆ ಇದನ್ನು ಆರೋಗ್ಯ ಸಚಿವರು ಒಪ್ಪುತ್ತಿಲ್ಲ. ಏನೂ ಆಗಿಲ್ಲ, ಎಲ್ಲಾ ಕ್ರಮ ಕೈಗೊಂಡಿದ್ದೇವೆ ಎಂದು ಗುಂಡೂರಾವ್ ತಿಪ್ಪೆ ಸಾರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ನಾನು ಈ ಬಗ್ಗೆ ಬೆಳಗಾವಿಯ ಅಧಿವೇಶನದಲ್ಲೆ ಪ್ರಸ್ತಾಪ ಮಾಡಿದರೆ ನನ್ನ ವಿರುದ್ಧವೇ ಆರೋಗ್ಯ ಸಚಿವರು ಆರೋಪಗಳನ್ನು ಮಾಡಿದರು. ಕಳಪೆ ಔಷಧಿ ಬಗ್ಗೆ ಸರ್ಕಾರ ಒಂದು ನೋಟೀಸ್ ಕೊಟ್ಟಿದೆ. ಅದೇ ರೀತಿ ಡ್ರಗ್ ಕಂಟ್ರೋಲ್ಗೆ ಒಂದು ನೋಟೀಸ್ ಕೊಟ್ಟು ಕೈ ತೊಳೆದುಕೊಂಡಿದೆ. ಈ ಸರ್ಕಾರ ಡ್ರಗ್ ಮಾಫಿಯಾ ನಡೆಸಲು ಹೊರಟಿದೆ ಎಂದು ಗಂಭೀರ ಆರೋಪ ಮಾಡಿದರು.



ಪಶ್ಚಿಮ ಬಂಗಾಳದ ಫಾರ್ಮಾಸ್ಯುಟಿಕಲ್ ಕಂಪನಿಯನ್ನು ಕಪ್ಪುಪಟ್ಟಿಗೆ ಸೇರಿಸುವಲ್ಲಿ ಡ್ರಗ್ ಕಂಟ್ರೋಲರ್ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಸರ್ಕಾರವೇ ನೋಟೀಸ್ನಲ್ಲಿ ಹೇಳಿದೆ. ಈ ಕಂಪನಿಯ ಔಷಧಿಗಳನ್ನು ಸೇವಿಸಿದ ಬಾಣಂತಿಯರು ಸಾವನ್ನಪ್ಪಿದ್ದಾರೆ. ಇದರ ಹಿಂದಿರುವ ಹಿತಾಸಕ್ತಿ ಏನು ಎಂದು ಅವರು ಪ್ರಶ್ನೆ ಮಾಡಿದರು.

ರಾಯಚೂರು ಜಿಲ್ಲೆಯೊಂದರಲ್ಲೆ 11 ಬಾಣಂತಿಯರು ಸಾವನ್ನಪ್ಪಿದ್ದಾರೆ. ಅದೇ ರೀತಿ ತುಮಕೂರು ಜಿಲ್ಲೆ,ತಿಪಟೂರಿನಲ್ಲಿ ಫಿರ್ದೋಜ್ ಎನ್ನುವ ಬಾಣಂತಿ ಕೂಡ ಸಾವನ್ನಪ್ಪಿದ್ದಾರೆ. ಈಗ ಇರುವ ಅವರ ಒಂದು ಮಗು ಅನಾಥವಾಗಿದೆ. ಇದ–ಕ್ಕೆ ಸರ್ಕಾರ ಹೊಣೆ ಅಲ್ಲವೇ? ಎಂದು ಅಶೋಕ್ ಪ್ರಶ್ನಿಸಿದರು. ಬೆಳಗಾವಿಯಲ್ಲಿ ಸಾವನ್ನಪ್ಪಿದ ಬಾಣಂತಿ ಜ್ಯೋತಿ ಎಂಬುವರ ಪತಿಯು ಆತಹತ್ಯೆಗೆ ಯತ್ನಿಸಿ ಐಸಿಯುವಿನಲ್ಲಿದ್ದಾರೆ. 5 ಗ್ಯಾರಂಟಿಗಳನ್ನು ಕೊಟ್ಟಿದ್ದೇವೆ ಎಂದು ಬೀಗುತ್ತಿರುವ ಸರ್ಕಾರ, ಬಾಣಂತಿಯರಿಗೆ ಆತಹತ್ಯೆ ಮಾಡಿಕೊಳ್ಳಿ ಎನ್ನುವ ಭಾಗ್ಯ ಕೊಟ್ಟಿಲ್ಲ ಎಂಬುದೇ ಅಚ್ಚರಿ. ಸತ್ತ ಬಾಣಂತಿಯರ ಕುಟುಂಬ ನೋವಿನಲ್ಲಿ ಮುಳುಗಿದೆ. ಕಡೆ ಪಕ್ಷ ಅವರನ್ನು ಭೇಟಿಯಾಗಿ ಸಾಂತ್ವನ ಹೇಳುವ ಕೆಲಸವೂ ಆಗಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ನಾನು ಈಗಲೂ ಹೇಳುತ್ತೆನೆ. ಮುಂದೆಯೂ ಹೇಳುತ್ತೆನೆ. ಸರ್ಕಾರ ಡ್ರಗ್ ಮಾಫಿಯಾಕ್ಕೆ ಮಣಿದಿದೆ. ನ್ಯಾಯಾಲಯದಲ್ಲಿ ಸಮರ್ಥವಾದ ಮಂಡಿಸಲೂ ಕೂಡ ಸರ್ಕಾರ–ಕ್ಕೆ ಯೋಗ್ಯತೆಯಿಲ್ಲ. ಕಪ್ಪುಪಟ್ಟಿಗೆ ಸೇರಿಸಿದ ಕಂಪನಿಗಳ ಜೊತೆಗೆ ಶಾಮೀಲಾಗಿ ವಸೂಲಿ ಮಾಡುವುದೇ ಇವರ ಕಾಯಕವಾಗಿದೆ.ಸರ್ಕಾರದ ಲೋಪದೋಷಗಳು ನಿಮ ಅವಧಿಯಲ್ಲಿ ನಡೆದಿಲ್ಲವೇ ಎಂದು ಪ್ರಶ್ನೆ ಮಾಡುತ್ತಾರೆ ಎಂದು ಕಿಡಿಕಾರಿದರು.

ಚಾಮರಾಜನಗರದಲ್ಲಿ ಆಕ್ಸಿಜನ್ ದುರಂತ ಸಂಭವಿಸಿದಾಗ ಕಾಂಗ್ರೆಸ್ ನಾಯಕರು ತೆರಳಿ ಮೊಸಳೆ ಕಣ್ಣಿರು ಸುರಿಸಿದರು. ಹಾಸನದ ಸಮಾವೇಶದ ವೇಳೆ ಬಾಣಂತಿಯರು ಸತ್ತರು. ಅವರ ಮನೆಗಳಿಗೆ ನೀವು ಏಕೆ ಭೇಟಿ ಕೊಡಲಿಲ್ಲ. ಕನಿಷ್ಠ ಪಕ್ಷ ಒಂದು ಸಾಂತ್ವನವನ್ನೂ ಹೇಳಲಿಲ್ಲ. ನಿಮ ಕಣ್ಣಿರು ಬತ್ತಿ ಹೋಗಿತ್ತೆ ಎಂದು ಪ್ರಶ್ನಿಸಿದರು.


ರಾಜ್ಯದಲ್ಲಿ ಎಷ್ಟು ಬಾಣಂತಿಯರು ಸಾವನ್ನಪ್ಪಿದ್ದಾರೆ ಎಂಬ ಬಗ್ಗೆ ನಿಖರವಾದ ಮಾಹಿತಿ ಸಿಗಬೇಕು. ಅಧಿವೇಶನದಲ್ಲಿ ಕೊಟ್ಟ ಉತ್ತರ ತೃಪ್ತಿಕರ ತಂದಿಲ್ಲ. ಕಳಪೆ ಔಷಧಿಗೆ ಕಾರಣರಾದ ಕಂಪನಿಗಳ ವಿರುದ್ಧ ಕ್ರಿಮಿನಲ್ ದೂರು ದಾಖಲಿಸಬೇಕು. ಜಿಲ್ಲಾಸ್ಪತ್ರೆಗಳು ಬಾಣಂತಿಯರ ಸಾವಿನ ಕೇಂದ್ರಗಳಾಗಿವೆ ಎಂದು ಅಶೋಕ್ ಕಿಡಿಕಾರಿದರು. ಆಸ್ಪತ್ರೆಗಳಲ್ಲಿ ಬಾಣಂತಿಯರು ಸಾವನ್ನಪ್ಪಿದರೆ ಕುಟಂಬದವರ ಮೇಲೆ ವೈದ್ಯರು ಒತ್ತಡ ಹಾಕಿ ಬೀಗ ಜಡಿದು ನಂತರ ಯಾರೂ ಇಲ್ಲದ ಸಮಯದಲ್ಲಿ ಶವ ಸಾಗಿಸುತ್ತಿದ್ದಾರೆ ಎಂದು ಆರೋಪಿಸಿದರು. ಪಂಚ ಗ್ಯಾರಂಟಿಗಳ ಜೊತೆ ಬಾಣಂತಿಯರಿಗೆ ಬದುಕಿನ ಗ್ಯಾರಂಟಿಯನ್ನು ಕೊಡಬೇಕು. ಹೆಣ್ಣುಮಕ್ಕಳಿಗೆ 2 ಸಾವಿರ ರೂ. ಕೊಡುತ್ತೆನೆ ಎಂದು ಹೇಳುತ್ತಿರುವ ಸಿಎಂ ಸಿದ್ದರಾಮಯ್ಯನವರು ಮೊದಲು ಸಾವು ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಯೋಗೀಶ್ ಗೌಡ ಕೊಲೆ ಪ್ರಕರಣ ವಿಚಾರವಾಗಿ ಮಾತನಾಡಿದ ಅಶೋಕ್, ಈಗ ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಸಾಕ್ಷ್ಯಗಳು ಸಿಬಿಐನವರಿಗೆ ಲಭ್ಯವಾಗಿವೆ. ಆರೋಪಿಯಾಗಿರುವ ವಿನಯ್ಕುಲಕರ್ಣಿ ಅಂದು ತಮ ಹಿಂಬಾಲಕರ ಮೂಲಕ ಕೊಲೆ ಮಾಡಿಸಿದ್ದಾರೆ ಎಂಬುದು ತನಿಖೆಯಿಂದ ಸಾಬೀತಾಗಿದೆ.

ನಮಗೆ ಅವರು ಸಾಕ್ಷಿಗಳನ್ನು ಕೊಡಿ ಎಂದು ಕೇಳುತ್ತಿದ್ದರು. ಈಗ ಎಲ್ಲವೂ ಬಹಿರಂಗಗೊಂಡಿವೆ. ತಮ ರಕ್ಷಣೆಗಾಗಿ ವಿನಯ್ಕುಲಕರ್ಣಿ ಎಂಎಲ್ಎಗಳ ತಂಡ ಕಟ್ಟಿಕೊಂಡು ತಿರುಗಾಡುತ್ತಿದ್ದಾರೆ. ಈ ಬಗ್ಗೆ ಸರ್ಕಾರ ಏನು ಹೇಳುತ್ತದೆ? ಎಂದು ಅಶೋಕ್ ಪ್ರಶ್ನಿಸಿದರು.

ಅಂದು ಬಿಜೆಪಿ ಸರ್ಕಾರ ಇದ್ದಾಗ ಈಶ್ವರಪ್ಪನವರನ್ನು ಉದ್ದೇಶಿಸಿ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದರು. ಒಬ್ಬ ವ್ಯಕ್ತಿ ಆತಹತ್ಯೆ ನಿರ್ಧಾರಕ್ಕೆ ಬರಬೇಕು ಎಂದ–ರೆ ಎಷ್ಟು ಕಷ್ಟಪಟ್ಟಿರಬಹುದು, ಎಷ್ಟು ಮಂದಿ ಬೀದಿಗೆ ಬಂದಿರಬಹುದು ಎಂದು ಪ್ರಿಯಾಂಕ್ ಪ್ರಶ್ನಿಸಿದ್ದರು. ಅದೇ ಪ್ರಿಯಾಂಕ್ ಖರ್ಗೆ ಈಗ ಮಾನ ಮರ್ಯಾದೆ ಇದ್ದರೆ ರಾಜೀನಾಮೆ ನೀಡಲಿ ಎಂದು ಕಿಡಿಕಾರಿದ್ದಾರೆ.

ಎಐಸಿಸಿ ಅಧ್ಯಕ್ಷರ ಮಗ ಎಂದು ಪ್ರಿಯಾಂಕ್ ಖರ್ಗೆ ರಾಜೀನಾಮೆ ಪಡೆಯಲು ಸಿದ್ದರಾಮಯ್ಯ ನಡುಗುತ್ತಿದ್ದಾರೆ. ನಾವು ಬಟ್ಟೆ ಹರಿದುಕೊಳ್ಳುವುದಕ್ಕಿಂತ ಮೊದಲು ಅವರ ಬಟ್ಟೆ ಹರಿದು ಹೋಗುತ್ತದೆ ಎಂದು ತಿರುಗೇಟು ನೀಡಿದ್ದಾರೆ.



ಬೀದರ್, ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆ ಹಾಗೂ ಶ್ರೀ ಮಾಣಿಕ ಪ್ರಭು ಪತ್ತಿನ ಸೌಹಾರ್ದ ಸಹಕಾರಿಯ ಕ್ಯಾಲೆಂಡರ್‌ಗಳನ್ನು ವಿತರಣೆ ಮಾಡಲಾಯಿತು. ಜಿಲ್ಲಾ ವರದಿಗಾರ ಸಂತೋಷ ಚಿಟ್ಟೆ, ಹುಮನಾಬಾದ್ ವರದಿಗಾರ ಮಲ್ಲಿಕಾರ್ಜುನ ರಡ್ಡಿ ವಿತರಣೆ ಮಾಡಿದ್ದಾರೆ.

ಮಲ್ಲಮ್ಮ ನುಡಿ ಕನ್ನಡ ದಿನ ಪತ್ರಿಕೆಯಲ್ಲಿ ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ: 09964206170

# ವೃತ್ತ ಮತ್ತು ರಸ್ತೆಗಳ ನಾಮಕರಣ; ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.02–ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ವಿವಿಧ ವಾರ್ಡ್ಗಳ ರಸ್ತೆ ಹಾಗೂ ವೃತ್ತಗಳಿಗೆ ಮರುನಾಮಕರಣ ಮಾಡಲಾಗುತ್ತಿದ್ದು, ಈ ಕುರಿತು ಸಾರ್ವಜನಿಕರಿಂದ ಸಲಹೆ ಮತ್ತು ಆಕ್ಷೇಪಣೆಗಳೇನಾದರು ಇದ್ದಲ್ಲಿ ಸಲ್ಲಿಸಬಹುದು.

ಪಾಲಿಕೆ ವ್ಯಾಪ್ತಿಯ 05 ನೇ ವಾರ್ಡ್ನ ಕಾರ್ಕಲತೋಟ ಮುಖ್ಯ ರಸ್ತೆಯಲ್ಲಿನ (ಸರ್ಕಾರಿ ಶಾಲೆ ಹಿಂಭಾಗ) ವೃತ್ತವನ್ನು "ನಂದಮೂರಿ ತಾರಕ ರಾಮರಾವ್" ವೃತ್ತ ಮತ್ತು ಕಾರ್ಕಲತೋಟ ಮುಖ್ಯ ರಸ್ತೆಯನ್ನು "ನಂದಮೂರಿ ತಾರಕ ರಾಮರಾವ್" ರಸ್ತೆ ಎಂದು ನಾಮಕರಣ, ವಾರ್ಡ್ ನಂ.08ರ ಆಕ್ರಾಯ್ ವೃತ್ತವನ್ನು ಗೋಮಾತಾ ವೃತ್ತ ಎಂದು, ಕೌಲ್‌ಬಜಾರ್ ರಸ್ತೆಯ ಒಂದನೇ ರೈಲ್ವೇ ಗೇಟ್ ಹತ್ತಿರದ (ಫ್ಲೈಓವರ್) ಇರುವ ವೃತ್ತವನ್ನು ಶ್ರೀ ಮೌಲಾನ ಅಬ್ದುಲ್ ಕಲಾಂ ಅಜಾದ್ ವೃತ್ತ ಎಂದು ನಾಮಕರಣ ಮಾಡುವುದಾಗಿ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಈ ಕುರಿತು ಸಾರ್ವಜನಿಕರಿಂದ ಸಲಹೆ, ಆಕ್ಷೇಪಣೆಗಳಿದ್ದಲ್ಲಿ 30 ದಿನದೊಳಗಾಗಿ ಲಿಖಿತ ರೂಪದಲ್ಲಿ ಪಾಲಿಕೆ ಕಚೇರಿಗೆ ಸಲ್ಲಿಸಬಹುದು.

ನಿಗದಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದಲ್ಲಿ ಸರ್ಕಾರದ ಸುತ್ತೋಲೆ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಪಾಲಿಕೆಯು ಪ್ರಕಟಣೆಯಲ್ಲಿ ತಿಳಿಸಿದೆ.

# ಹಿಂಗಾರು ಬೆಳೆ ಸಮೀಕ್ಷೆಗೆ ಖಾಸಗಿ ನಿವಾಸಿಗಳ ಆಪ್ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.02–ಪ್ರಸ್ತಕ ಸಾಲಿನ ಹಿಂಗಾರು ಹಂಗಾಮಿನಲ್ಲಿ ಖಾಸಗಿ ನಿವಾಸಿಗಳು ರೈತರಿಂದ ಬೆಳೆದ ಬೆಳೆಗಳ ಬಗ್ಗೆ ನಿಖರ ಮಾಹಿತಿಯನ್ನು ಮೊಬೈಲ್ ಆಪ್‌ನಿಂದ ದಾಖಲಿಸಲು ಆಪ್ ಬಿಡುಗಡೆ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ತಿಳಿಸಿದ್ದಾರೆ.

ಈಗಾಗಲೇ ಇ–ಆಡಳಿತ ವತಿಯಿಂದ ಅಭಿವೃದ್ಧಿಪಡಿಸಿರುವ ಬೆಳೆ ಸಮೀಕ್ಷೆ ನಡೆಸುವ ಕಾರ್ಯ ಜ.01ರಿಂದ ಚಾಲನೆಯಾಗಿದೆ. ಖಾಸಗಿ ನಿವಾಸಿಗಳು ತಮ್ಮ ಮೊಬೈಲ್‌ನಲ್ಲಿ ಗೂಗಲ್ ಪ್ಲೇಸ್ಟೋರ್‌ನಿಂದ ಬೆಳೆ ಸಮೀಕ್ಷೆ ಹಿಂಗಾರು ಹಂಗಾಮಿನ (ಕಖ ೦ಠಿಠಿ ಅಡಿಠಿ ಖಡಿಡಿತಜಥಿ ಖಚಿಖು 2024–25) ಆಪ್‌ನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

ಬೆಳೆ ಸಮೀಕ್ಷೆ ದತ್ತಾಂಶ ಮಾಹಿತಿಯನ್ನು ಬೆಳೆ ವಿಸ್ತರಣೆ ಎಣಿಕೆ ಕಾರ್ಯ, ಬೆಳೆ ಕಟಾವು ಪ್ರಯೋಗ, ಪ್ರಕೃತಿ ವಿಕೋಪ ಸಂದರ್ಭ, ಬೆಳೆಹಾನಿ ವರದಿ ಸಿದ್ಧಪಡಿಸಲು, ಬೆಳೆ ವಿಮಾ ಯೋಜನೆ, ಬೆಂಬಲ ಬೆಲೆ ಯೋಜನೆ, ಆರ್.ಟಿ.ಸಿ.ಯಲ್ಲಿ ಬೆಳೆ ವಿವರ ದಾಖಲಿಸಲು, ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಮಂಜೂರು ಮಾಡಲು ಬೆಳೆ ಸಮೀಕ್ಷೆ ಮಾಹಿತಿ ಉಪಯೋಗಿಸಲಾಗುತ್ತದೆ.

ಜಿಲ್ಲೆಯಲ್ಲಿ 2,42,520 ಬೆಳೆ ತಾಕುಗಳಿದ್ದು, ಮೊಬೈಲ್ ಆಪ್‌ನಲ್ಲಿ ಜಿಯೋ ರೆಫೆರೆನ್ಸ್ಡ್ ಅಂಡ್ ಡಿಜಿಟೈಜ್ಡ್ ಬೆಳೆ ಗ್ರಾಮ ನಕಾಶೆ ಅಳವಡಿಸಲಾಗಿರುವುದರಿಂದ ಆಯಾ ತಾಕಿನ ಗಡಿ ರೇಖೆಯೊಳಗೆ ಹೋಗಿ ಜಿಪಿಎಸ್ ನಿಖರತೆ ಪಡೆದು ಛಾಯಾಚಿತ್ರದೊಂದಿಗೆ ಎಲ್ಲಾ ಬೆಳೆಗಳ ವಿವರಗಳನ್ನು ಕಡ್ಡಾಯವಾಗಿ ದಾಖಲು ಮಾಡಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ಯಾರಂಟಿ ಯೋಜನೆಯ ಜಾಗೃತಿ; ಸಾರ್ವಜನಿಕರಿಗೆ ಕರ ಪತ್ರ ವಿತರಣೆ



(ಮಲ್ಲಮ್ಮ ನುಡಿ ವಾರ್ತೆ)

ಚಿಟಗುಪ್ಪ:–ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಬೀದರ್ ತಾಲ್ಲೂಕಿನ ಚಟ್ನಳ್ಳಿ ಗ್ರಾಮದಲ್ಲಿ ರಾಜ್ಯ ಸರ್ಕಾರದ ಐದು ಗ್ಯಾರಂಟಿಗಳ ಜನಜಾಗೃತಿ ಕಾರ್ಯಕ್ರಮ ನಡೆಯಿತು. ಸಾರ್ವಜನಿಕರಿಗೆ ಕರಪತ್ರ ವಿತರಿಸಿ, ಯೋಜನೆಗಳನ್ನು ಜಾರಿಗೆ ತಂದ ಉದ್ದೇಶ ಹಾಗೂ ಅವುಗಳಿಂದ ಜನರ ಬದುಕಿನಲ್ಲಿ ಆದ ಬದಲಾವಣೆ ಕುರಿತು ಮನವರಿಕೆ ಮಾಡಲಾಯಿತು. ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯ ರಾಜಕುಮಾರ ಮಡಕಿ ಅವರ ನೇತೃತ್ವದಲ್ಲಿ ಬ್ಯಾಂಡ್ ಬಾಜಾದೊಂದಿಗೆ ಗ್ರಾಮದಲ್ಲಿ ಜಾಗೃತಿ ಮೂಡಿಸಲಾಯಿತು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಹಾದೇವಿ ಮಲ್ಲಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಮಿಳಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸದಸ್ಯರಾದ ಉದಯಕುಮಾರ್ ಚಟ್ನಳ್ಳಿ, ಶಿವಕುಮಾರ್ ಕುತ್ತಾಬಾದ್, ಲೋಕೇಶ್ ಕನಶೆಟ್ಟಿ, ಗ್ರಾಮ ಪಂಚಾಯತ್ ಸದಸ್ಯರಾದ ವೀರಶಟ್ಟಿ ಪಾಟೀಲ್, ರಾಜರಡ್ಡಿ,, ಖುಷಬಾಯಿ, ಇಸ್ಮಾಯಿಲ್, ಪರಶುರಾಮ, ಲಲಿತಾ ,ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಬಸವರಾಜ ಪಾಟೀಲ, ಮುಖಂಡರಾದ ಶಂಕರೆಪ್ಪಾ, ಗುರುಲಿಂಗಯ್ಯ, ಶಿವಶರಣರಯ್ಯ, ಚೋಟುಮಿಂಯ್ಯಾ, ನಾಗೇಶ, ಪಂಡಿತ, ಬಕ್ಕಪ್ಪಾ ಸೇರಿ ಅಂಗನವಾಡಿ ಕಾರ್ಯಕರ್ತೆಯರು ಹಾಜರಿದ್ದರು.

# ನಿಂಬೆ ಬೆಳೆಗೆ ಸಮಗ್ರ ರೋಗ ನಿರ್ವಹಣಾ ಕ್ರಮ ಮುಖ್ಯ




ಮಲ್ಲಮ್ಮ ನುಡಿ ವಾರ್ತೆ

ಇಂಡಿ:ಹಿಂಗಾರು ಹಂಗಾಮಿನಲ್ಲಿ ನಿಂಬೆ ಬೆಳೆಗೆ ಸೊರಗೆ ರೋಗ, ಕಜ್ಜಿ ರೋಗ, ಹಿಟ್ಟು ತಿಗಣೆಯ ಬಾಧೆ ಕಂಡು ಬರುತ್ತಿದ್ದು ಸಮಗ್ರ ನಿರ್ವಹಣಾ ಕ್ರಮ ಅನುಸರಿಸಲು ಡಾ.ಹೀನಾ ಹೇಳಿದರು. ಕೃಷಿ ವಿಜ್ಞಾನ ಕೇಂದ್ರ ಇಂಡಿ ವತಿಯಿಂದ ಸಾಲೋಟಗಿ ಗ್ರಾಮದ ಬಾಬು ಅವಟಿಯವರ ತೋಟದಲ್ಲಿ ನಿಂಬೆ ಬೆಳೆಯಲ್ಲಿ ಬಹಾರ ಮತ್ತು ಪೋಷಕಾಂಶಗಳ ನಿರ್ವಹಣೆ ಕುರಿತು ಪ್ರಾತ್ಯಕ್ಷಿಕೆ ನೀಡಿ ಮಾತನಾಡುತ್ತಿದ್ದರು. ಡಾ. ಪ್ರೇಮಚಂದ್ರ, ಡಾ. ವೀಣಾ ಚಂದಾವರಿ ಮತ್ತು ಡಾ. ಬಾಲಾಜಿ ನಾಯ್ಕ ಅವರು ಮಾತನಾಡಿ. ಸಮಗ್ರ ರೋಗ ನಿರ್ವಹಣೆಗೆ ಕೈ ಕೊಡರ್ಮ ಮತ್ತು ಸುಡಮನಾಸ್ ಜೈವಿಕ ರೋಗ ನಿರೋಧಕ ಇವುಗಳನ್ನು ತಿಪ್ಪಿ ಗೊಬ್ಬರದಲ್ಲಿ ಬೆರೆಸಿ ಮರದ ಬುಡಕ್ಕೆ ಬಿಡಬೇಕು. ಹಾಗೂ ಕಾಂಡಗಳಿಗೆ ಬೋರ್ಡೋ ಪೇಸ್ಟ ತಯಾರಿಕೆ ಮಾಡಿ ಲೇಪನ ಮಾಡುವದರಿಂದ ರೋಗವನ್ನು ಹತೋಟಿ ಮಾಡಬಹುದು ಎಂದರು. ಈ ಸಂದರ್ಭದಲ್ಲಿ ಶ್ರೀಕಾಂತ ಅವಟಿ, ಸೋಮಣ್ಣ ಕೆರುರ ಭೀಮಾಶಂಕರ ಅವರಾದಿ ಸೇರಿದಂತೆ ಹಲವಾರು ರೈತರು ಪಾಲ್ಗೊಂಡಿದ್ದರು.

# ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಹೊಣೆ: ಶಶಿಧರ ಕೋಸಂಬೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.02–ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಪ್ರತಿಯೊಂದು ಮಗುವಿಗೂ ಶಿಕ್ಷಣ ನೀಡಿ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸಹಕರಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ಅವರು ಹೇಳಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ವಿಶೇಷ ಪೊಲೀಸ್ ಘಟಕ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣಾ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ ಆರ್‌ಟಿಇ ಕಾಯ್ದೆಯಡಿ 'ಶಾಲೆಯಲ್ಲಿದೆ ಶಿಕ್ಷಣ ಜೊತೆಗೆ ರಕ್ಷಣೆ' ಮತ್ತು 'ಮಕ್ಕಳೊಂದಿಗೆ ಮುಕ್ತ ಸಂವಾದ ಮತ್ತು ಆಹವಾಲು ಸ್ವೀಕಾರ ಕಾರ್ಯಕ್ರಮ' ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಂದು ಮಗುವಿಗೂ ಜನ್ಮ ಹೊಂದುವ, ಜೀವಿಸುವ, ಉತ್ತಮ ಆರೋಗ್ಯ ಸೇವೆ, ಪೌಷ್ಠಿಕ ಆಹಾರ ಪಡೆದು ದೇಶದ ಪ್ರಜೆ ಎಂದು ಗುರುತಿಸಿ ಕೊಂಡು ಬದುಕುವ ಹಕ್ಕಿದೆ. ಅದರಂತೆ ಶಿಕ್ಷಣ ಪಡೆದು ವಿಕಾಸ ಹೊಂದುವ ಹಕ್ಕಿದೆ ಎಂದು ಅವರು ತಿಳಿಸಿದರು.

ಉಚಿತ ಮತ್ತು ಕಡ್ಡಾಯ ಶಿಕ್ಷಣ ಪರಿಚ್ಛೇದ '21ಎ' ಅಡಿ ಸಾಂವಿಧಾನಿಕ ಮೂಲಭೂತ ಹಕ್ಕಾಗಿದೆ. ಸರ್ಕಾರಿ ಶಾಲೆಗಳಲ್ಲಿ ಉಚಿತ ಊಟ, ಸಮವಸ್ತ್ರ, ಪೌಷ್ಠಿಕ ಆಹಾರಗಳೊಂದಿಗೆ ಗುಣಮಟ್ಟ ಶಿಕ್ಷಣ ನೀಡಲಾಗುತ್ತಿದೆ. ಪೋಷಕರಲ್ಲಿ ಸರ್ಕಾರಿ ಶಾಲೆಗಳ ಮೇಲಿನ ಪೂರ್ವಾಗ್ರಹವನ್ನು ಹೋಗಲಾಡಿಸಿ ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಮಕ್ಕಳು ದಾಖಲಾಗುವಂತೆ ಕ್ರಮವಹಿಸಬೇಕು ಎಂದು ಹೇಳಿದರು.

ಮಕ್ಕಳಿಗೆ ಮನೆ ಹೊರತುಪಡಿಸಿ, ಅತ್ಯಂತ ಸುರಕ್ಷಿತ ಸ್ಥಳ ಎಂದರೆ ಅದು ಶಾಲೆಯಾಗಿದೆ. ಪ್ರಸ್ತುತ ದಿನಮಾನಗಳಲ್ಲಿ ಸರ್ಕಾರಿ ಶಾಲೆಗಳಿಗೆ ದಾಖಲಾಗುವ ಮಕ್ಕಳ ಸಂಖ್ಯೆ ಕ್ಷೀಣಿಸುತ್ತಿದ್ದು, ಕಳೆದ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿಯೇ ಸುಮಾರು 60 ಸಾವಿರಕ್ಕೂ ಹೆಚ್ಚು ಮಕ್ಕಳು ಶಾಲೆಯಿಂದ ಹೊರಗುಳಿದಿರುವುದನ್ನು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ವರದಿ ಮಾಡಿದೆ. ರಾಜ್ಯದಲ್ಲಿ 2012 ರಿಂದ 2024 ರವರೆಗೆ 3,800 ಕ್ಕೂ ಹೆಚ್ಚು ಪೋಕ್ಸೋ ಪ್ರಕರಣಗಳು ದಾಖಲಾಗಿವೆ ಎಂದರು.

ಜಿಲ್ಲೆಯ ಪ್ರತಿ ಶಾಲೆಗಳಲ್ಲಿ ಮಕ್ಕಳ ಸುರಕ್ಷತಾ ಸಮಿತಿ ರಚಿಸಬೇಕು. ತಿಂಗಳಿಗೊಮ್ಮೆ ಕಡ್ಡಾಯವಾಗಿ ಪ್ರಗತಿ ಪರಿಶೀಲನಾ ಸಭೆ ನಡೆಸಬೇಕು. ಮಕ್ಕಳ ರಕ್ಷಣೆ, ಹಕ್ಕುಗಳ ಬಗ್ಗೆ ಚರ್ಚಿಸುವುದರೊಂದಿಗೆ ಅರಿವು ಮೂಡಿಸುವ ಕೆಲಸ ಮಾಡಬೇಕು. ಪ್ರತಿ ಶಾಲೆಯಲ್ಲೂ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೋಡೆ ಬರಹದಲ್ಲಿ ಬರೆಯಬೇಕು ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಮಾತನಾಡಿ, ಮಕ್ಕಳು ಸಂವಿಧಾನಾತ್ಮಕವಾಗಿರುವ ಹಕ್ಕುಗಳನ್ನು ಪಡೆದುಕೊಳ್ಳಬೇಕು. ಜೀವನಾಧಾರಿತ ಮೌಲ್ಯ ಶಿಕ್ಷಣ ಹೊಂದುವ ಮೂಲಕ ಸಮಾಜದಲ್ಲಿ ಜವಾಬ್ದಾರಿಯುತ ನಾಗರಿಕರಾಗಬೇಕು ಎಂದು ಹೇಳಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು ಅವರು ಮಾತನಾಡಿ, ಮಕ್ಕಳು ತಮ್ಮ ಭವಿಷ್ಯವನ್ನು ತಾವೇ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಸದಸ್ಯರಾದ ಹೆಚ್.ಸಿ.ರಾಘವೇಂದ್ರ ಭಟ್ ಅವರು ಮಕ್ಕಳೊಂದಿಗೆ ಸಂವಾದ ನಡೆಸಿದರು.

*ಸಂವಾದ:*

ಕುರುಗೋಡು ತಾಲ್ಲೂಕಿನ ಸೋಮಸಮುದ್ರ ಗ್ರಾಮದ ಸರ್ಕಾರಿ ಪ್ರೌಢಶಾಲೆಯ 9ನೇ ತರಗತಿಯ ವಿದ್ಯಾರ್ಥಿನಿ ವರಲಕ್ಷ್ಮೀ ಮಾತನಾಡಿ, ಗ್ರಾಮದಲ್ಲಿ ಶಾಲೆಯ ಕಟ್ಟಡ ಅವಶ್ಯವಿದೆ ಎಂದು ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ದಲಿಂಗಮೂರ್ತಿ ಅವರು, ಈಗಾಗಲೇ ಶಾಲೆಯು ಉನ್ನತೀಕರಿಸಿದ ಶಾಲೆಯಾಗಿದ್ದು, ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ನೂತನ ಕಟ್ಟಡ ಮಂಜೂರಾಗಿದೆ. ಟೆಂಡರ್ ಪ್ರಕ್ರಿಯೆ ಹಂತದಲ್ಲಿದೆ ಎಂದು ತಿಳಿಸಿದರು.

ದೇವಲಾಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯ 9ನೇ ತರಗತಿ ವಿದ್ಯಾರ್ಥಿನಿ ಶಶಿಕಲಾ ಮಾತನಾಡಿ, ಗ್ರಾಮದಲ್ಲಿ ಬಾಲ್ಯವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಸುಧಾರಣೆಯಾಗುತ್ತಿಲ್ಲ ಎಂದು ಪ್ರಶ್ನಿಸಿದರು. ಈ ಕುರಿತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ ಅವರು ಪ್ರತಿಕ್ರಿಯಿಸಿ, ಬಾಲ್ಯವಿವಾಹ ಪ್ರಕರಣಗಳು ಕಂಡುಬಂದಲ್ಲಿ ಕೂಡಲೇ ಸಹಾಯವಾಣಿ ಸಂಖ್ಯೆ 1098 ಕರೆ ಮಾಡಿ ಮಾಹಿತಿ ನೀಡಬೇಕು. ಬಾಲ್ಯವಿವಾಹ ದುಷ್ಪರಿಣಾಮ ಕುರಿತು ಗ್ರಾಮ ಪಂಚಾಯತ್ ಮಟ್ಟದಲ್ಲಿ ಹೆಚ್ಚು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.

ಮತ್ತೋರ್ವ ವಿದ್ಯಾರ್ಥಿನಿ ಸಂಗೀತಾ.ಯು ಮಾತನಾಡಿ, ನಮ್ಮದು ಉಳೂರು ಗ್ರಾಮವಾಗಿದ್ದು, ಪ್ರೌಢ ವಿದ್ಯಾಭ್ಯಾಸಕ್ಕೆ ತಾಳೂರು ಗ್ರಾಮಕ್ಕೆ ಬರಬೇಕು. ಆದರೆ, ಬಸ್ ಕೊರತೆ ಇದ್ದು, ಒಮ್ಮೊಮ್ಮೆ ನಡೆದುಕೊಂಡೇ ಹೋಗಿಬರಬೇಕು. ಸಂಜೆ ಸಮಯದಲ್ಲಿ ಕಷ್ಟಕರವಾಗುತ್ತದೆ ಎಂದು ಸಭೆಗೆ ತಿಳಿಸಿದರು. ಸದಸ್ಯರಾದ ಶಶಿಧರ ಕೋಸಂಬೆ ಅವರು ಪ್ರತಿಕ್ರಿಯಿಸಿ, ಈ ಕುರಿತು ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಪತ್ರ ವ್ಯವಹಾರ ನಡೆಸಬೇಕು ಎಂದು ಬಿಇಒಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಎಎಸ್ಪಿ ನವೀನ್ ಕುಮಾರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಜಲಾಲಪ್ಪ.ಎ.ಕೆ., ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ದಲಿಂಗಮೂರ್ತಿ, ಬಳ್ಳಾರಿ ನಗರ ಉಪವಿಭಾಗ ಡಿವೈಎಸ್ಪಿ ನಂದಾರೆಡ್ಡಿ ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಮತ್ತು ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಯ ಅಧೀಕ್ಷಕರುಗಳು, ವಿವಿಧ ಶಾಲೆಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅನಾಮದೇಯ ಮೃತ ದೇಹ ಪತ್ತೆ: ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.02–ನಗರದ ಸೆಂಟ್ ಮೇರಿ ಅಸ್ಪತ್ರೆಯ ಗೇಟ್ ಪಕ್ಕದಲ್ಲಿರುವ ಆರೋಗ್ಯ ಮಾತ ಪ್ರತಿಮೆ ಮುಂದೆ ಅಂದಾಜು 35– 40 ವರ್ಷದ ಅಪರಿಚಿತ ವ್ಯಕ್ತಿಯ ಮೃತದೇಹ ಜ.01 ರಂದು ಪತ್ತೆಯಾಗಿದ್ದು, ಈ ಕುರಿತು ಕೌಲ್‌ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಮೃತನ ಚಹರೆ:

ಎತ್ತರ 5.7 ಇಂಚು, ಕೋಲು ಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಮೃತನ ದೇಹದ ಮೈಮೇಲೆ ಒಂದು ಹಳದಿ ಬಣ್ಣದ ತುಂಬು ತೋಳಿನ ಅಂಗಿ, ಕಂದು ಬಣ್ಣದ ಪ್ಯಾಂಟ್ ಇರುತ್ತದೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತನ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100, ಕೌಲ್‌ಬಜಾರ್ ಪೊಲೀಸ್ ಠಾಣೆಯ ದೂ.08392–240731, ಪಿ.ಐ ಮೊ.9480803047, ಪಿಎಸ್‌ಐ ಮೊ.9480803084 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಯ ಅಭಿವೃದ್ಧಿ ನಮ್ಮ ಧ್ಯೇಯ: ಪ್ರೊ.ಮುನಿರಾಜು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.02–ವಿಶ್ವವಿದ್ಯಾಲಯವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಅಭಿವೃದ್ಧಿಪಡಿಸಿ ಮಾದರಿ ವಿಶ್ವವಿದ್ಯಾಲಂು ವಾಗಿ ಮಾರ್ಪಡಿಸುವುದು ನಮ್ಮ ಧ್ಯೇಯ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಎಂ.ಮುನಿರಾಜು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀ ಕೃಷ್ಣದೇವರಾಂು ವಿಶ್ವವಿದ್ಯಾಲಯದ ಪರೀಕ್ಷಾ ಭವನ ಮುಂಭಾಗದಲ್ಲಿ ಬುಧವಾರ ಶಿಕ್ಷಣ ಮಹಾವಿದ್ಯಾಲಯಗಳ ಆಡಳಿತ ಮಂಡಳಿ ಮತ್ತು ಪ್ರಾಂಶುಪಾಲರು ಥಿಯೋಸಫಿಕಲ್ ಸೊಸೈಟಿ, ಹೊಸಪೇಟೆ ಹಾಗೂ ಬಳ್ಳಾರಿಯ ಕೆನರಾ ಬ್ಯಾಂಕ್ ಜಂಟಿಯಾಗಿ ಆಯೋಜಿಸಿದ್ದ 'ವಿದ್ಯಾರ್ಥಿ ದೇವರುಗಳ ಸೇವೆಗಾಗಿ ಬ್ಯಾಟರಿ ಚಾಲಿತ ವಾಹನ ಹಾಗೂ ವಸತಿ ನಿಲಯ ಕಟ್ಟಡಗಳ ನವೀಕರಣ ಕಾಮಗಾರಿಗಳ ಉದ್ಘಾಟನೆ ಮತ್ತು 2025ರ ವರ್ಷಾರಂಭಕ್ಕೆ ಸ್ವಾಗತ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹೊಸವರ್ಷದಲ್ಲಿ ವಿವಿಯ ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಳ್ಳಲು ಅಗತ್ಯವಾದ ಎಲ್ಲ ಸೌಲಭ್ಯವನ್ನು ಒದಗಿಸಲಾಗುವುದು. ಮುಂಬರುವ ದಿನಗಳಲ್ಲಿ ವಿದ್ಯಾರ್ಥಿಗಳಿಗಾಗಿ ದಾಸೋಹ ಭವನ ನಿರ್ಮಿಸಲಾಗುವುದು. ವಿವಿಯ ಅಭಿವೃದ್ಧಿಗೆ ಎಲ್ಲ ಸಿಬ್ಬಂದಿ ಕೈಜೋಡಿಸಬೇಕು ಎಂದು ಹೇಳಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಎಸ್.ಎನ್.ರುದ್ರೇಶ ಅವರು ಮಾತನಾಡಿ, ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿ ಬ್ಯಾಟರಿ ಚಾಲಿತ ವಾಹನದ ಸೇವೆಯನ್ನು ವಿದ್ಯಾರ್ಥಿಗಳಿಗಾಗಿಯೇ ಒದಗಿಸಿದೆ. ಈ ವಿನೂತನ ಸೇವೆಯನ್ನು ಆರಂಭಿಸಿರುವ ರಾಜ್ಯದ ಪ್ರಥಮ ವಿಶ್ವವಿದ್ಯಾಲಯ ನಮ್ಮದು. ಇದೇ ರೀತಿ ಹತ್ತು–ಹಲವು ಯೋಜನೆಗಳನ್ನು ಮುಂಬರುವ ದಿನಗಳಲ್ಲಿ ವಿದ್ಯಾರ್ಥಿಗಳಿಗಾಗಿ ರೂಪಿಸಲಾಗುವುದು. ಈ ನಿಟ್ಟಿನಲ್ಲಿ ಎಲ್ಲ ಸಿಬ್ಬಂದಿ ಸಹಕಾರ ಅಗತ್ಯ ಎಂದರು.

ಥಿಯೋಸಫಿಕಲ್ ಸೊಸೈಟಿಯ ನಿರ್ದೇಶಕ ಶರಣಪ್ಪ ಅವರು ಮಾತನಾಡಿ, ವಿದ್ಯಾರ್ಥಿಗಳು ದೇವರು ಎಂಬ ಪರಿಕಲ್ಪನೆ ವ್ಯಕ್ತಪಡಿಸಿರುವ ವಿಶ್ವವಿದ್ಯಾಲಯದ ಆಡಳಿತವರ್ಗಕ್ಕೆ ಅಭಿನಂದನೆ ಸಲ್ಲಿಸಿದರು. ಈ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ನಡೆಸುತ್ತಿರುವ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗುವದರಲ್ಲಿ ಸಂಶಯವಿಲ್ಲ ಎಂದರು.

ಥಿಯೋಸಫಿಕಲ್ ಸೊಸೈಟಿಯ ಕಾರ್ಯದರ್ಶಿಗಳಾದ ಅಶೋಕ ಜೀರೆ ಅವರು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಹಲವಾರು ಅವಕಾಶಗಳಿವೆ. ಪ್ರವಾಸೋದ್ಯಮದಿಂದಾಗಿ ವಿದ್ಯಾರ್ಥಿಗಳಿಗೆ ಉದ್ಯೋಗವಕಾಶಗಳು ದೊರೆಯುತ್ತವೆ ಎಂದು ತಿಳಿಸಿದರು.

ಕೆನರಾ ಬ್ಯಾಂಕ್ ಡಿವಿಜನಲ್ ಮ್ಯಾನೇಜರ್ ಗಿರೀಶ ಕುಲಕರ್ಣಿ ಅವರು ಮಾತನಾಡಿ, ವಿಶ್ವವಿದ್ಯಾಲಯದ ಮತ್ತು ವಿದ್ಯಾರ್ಥಿಗಳ ಕಲ್ಯಾಣಕ್ಕೆ ಸೇವೆ ನೀಡಲು ಸದಾ ಸಿದ್ಧವಿದ್ದು, ವಿದ್ಯಾರ್ಥಿ ಸ್ನೇಹಿ ಯೋಜನೆ ಪರಿಚಯಿಸಿರುವ ವಿವಿಯ ಆಡಳಿತ ಮಂಡಳಿಗೆ ಅಭಿನಂದಿಸಿದರು.

ವಿವಿಯ ಮಾಜಿ ಸಿಂಡಿಕೇಟ್ ಸದಸ್ಯ ರಾಜಶೇಖರ ಅವರು ಮಾತನಾಡಿ, ಸರ್ಕಾರದಿಂದ ಎಲ್ಲ ಸಹಾಯವನ್ನು ನಿರೀಕ್ಷಿಸದೆ ಸ್ವ ಪ್ರಯತ್ನದಿಂದ ಅಭಿವೃದ್ಧಿಗೆ ಶ್ರಮಿಸುತ್ತಿರುವುದಕ್ಕೆ ವಿವಿಯ ಆಡಳಿತವರ್ಗವನ್ನು ಹೊಗಳಿದರು.

ಹುಬ್ಬಳ್ಳಿಯ ಬಿ.ವಿ.ಭೂಮರೆಡ್ಡಿ ತಾಂತ್ರಿಕ ಮಹಾವಿದ್ಯಾಲಯದ ಪ್ರೊ ಶಿವಾನಂದ ಪಾಟೀಲ್ ಅವರು ಮಾತನಾಡಿ, ಶಿಕ್ಷಣ ಪೂರೈಸುವ ವಿದ್ಯಾರ್ಥಿಗಳು ಕೇವಲ ಉದ್ಯೋಗಕ್ಕೆ ಸೀಮಿತವಾಗಿರದೆ ಉದ್ಯೋಗ ಸೃಷ್ಟಿಸುವ ಮಟ್ಟಿಗೆ ಬೆಳೆಯಬೇಕು. ವಿಭಿನ್ನ ಆಲೋಚನೆಗಳಿರುವ ವಿದ್ಯಾರ್ಥಿಗಳು ನಮ್ಮೊಡನೆ ಪ್ರಾಜೆಕ್ಟ್ ಮಾಡಲು ಅವಕಾಶ ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎರಡು ವಿದ್ಯುತ್ ಚಾಲಿತ ವಾಹನಗಳನ್ನು ಗಣ್ಯರು ಲೋಕಾರ್ಪಣೆಗೊಳಿಸಿದರು. ವಿದ್ಯಾರ್ಥಿಗಳಿಗಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ವಿವಿಯ ಮೌಲ್ಯಮಾಪನ ಕುಲಸಚಿವರಾದ ಪ್ರೊ. ರಮೇಶ್ ಓ ಓಲೇಕಾರ್, ವಿವಿಧ ನಿಕಾಯದ ಡೀನರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಶ್ರೀದೇವಿ ಆಲೂರ ನಿರೂಪಿಸಿದರು, ಸಿದ್ಧರಾಮಪ್ಪ ಪೂಜಾರ ವಂದಿಸಿದರು. ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ ಸದಸ್ಯರು, ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ

# ಜನವರಿ 5ಕ್ಕೆ ಕಡ್ಡಾಯವಾಗಿ ಮತದಾನ ಮಾಡಿ; ಚುನಾವಣಾಧಿಕಾರಿ ಸುದರ್ಶನ್ ಮನವಿ





(ಮಲ್ಲಮ್ಮನುಡಿವಾರ್ತೆ)

ಚಿಟಗುಪ್ಪ:–ತಾಲೂಕಿನ ಬೆಳಕೇರಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಆಯ್ಕೆ ಚುನಾವಣೆ ಜನವರಿ 5ಕ್ಕೆ ಮತದಾನ ನಡೆಯಲ್ಲಿದು. ಒಟ್ಟು 12 ನಿರ್ದೇಶಕರ ಪೈಕಿ ಒಟ್ಟು 24 ಜನ ನಾಮಪತ್ರ ಅರ್ಜಿ ಸಲ್ಲಿಸಿ ಚುನಾವಣೆ ಕಣದಲಿದ್ದಾರೆ ಎಂದು ಚುನಾವಣಾಧಿಕಾರಿ ಸುದರ್ಶನ್ ವಿಶ್ವಕರ್ಮ ತಿಳಿಸಿದ್ದಾರೆ.

ಜನವರಿ 5ಕ್ಕೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ ನಡೆಯಲಿದ್ದು, ಅರ್ಹ ಮತದಾರರು ಬೆಳಿಗ್ಗೆ 9 ಘಂಟೆಯಿಂದ ಸಾಯಂಕಾಲ 4 ಘಂಟೆ ವರೆಗೆ ತಮ್ಮ ಅಮೂಲ್ಯವಾದ ಮತವನ್ನು ಚಲಾಯಿಸಬೇಕು. ಜೊತೆಗೆ ಚುನಾವಣೆಗೆ ಸಹಕರಿಸಿ ಯಶಸ್ವಿಗೊಳಿಸಬೇಕು.


–ಸುದರ್ಶನ್ ವಿಶ್ವಕರ್ಮ
ಚುನಾವಣಾಧಿಕಾರಿ



ಸಾಮಾನ್ಯ ಕ್ಷೇತ್ರದಲ್ಲಿ(06) ಪರಿಶಿಷ್ಟ ಜಾತಿ(02) ಪರಿಶಿಷ್ಟ ಪಂಗಡ(05) ಹಿಂದುಳಿದ ವರ್ಗ ಪ್ರವರ್ಗ(ಎ)(02) ಹಿಂದುಳಿದ ವರ್ಗ ಪ್ರವರ್ಗ(ಬಿ) (02) ಮಹಿಳಾ(05) ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರಕ್ಕೆ(02) ಒಟ್ಟು 24 ಜನ ನಾಮಪತ್ರ ಸಲ್ಲಿಸಿ ಚುನಾವಣೆ ಕಣದಲ್ಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:8971850542

## ಶಾಸಕರ ಬಗ್ಗೆ ಪ್ರಚೋದನಕಾರಿ ಹೇಳಿಕೆ ಸರಿಯಲ್ಲ : ಕಾಂಗ್ರೆಸ್ ವಕ್ತಾರ ಸಂಗಮೇಶ್ ಗುತ್ತಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಭಾಜಪ ಮುಖಂಡ ವೀರಣ್ಣ ಹುಬ್ಬಳ್ಳಿ ತಮ್ಮ ವಯಸ್ಸಿಗೆ ತಕ್ಕಂತೆ ಸೌಜನ್ಯವಾಗಿರದೆ ಸಾರ್ವಜನಿಕವಾಗಿ ಪ್ರತಿಭಟನಾ ಸ್ಥಳದಲ್ಲಿ ಅವಾಚ್ಯ ಶಬ್ದಗಳಿಂದ ಕ್ಷೇತ್ರದ ಶಾಸಕರನ್ನು ನಿಂದಿಸಿದ್ದು ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ವತಿಯಿಂದ ಕುಕನೂರು ಪೊಲೀಸ್ ಠಾಣೆಗೆ ಮನವಿ ಸಲ್ಲಿಸಲಾಯಿತು.

ಕುಕನೂರು ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆಯ ಆವರಣದಲ್ಲಿರುವ ಆರ್ ಡಿ ಸಿ ಸಿ ಬ್ಯಾಂಕ್ ಎದುರುಗಡೆ ಡಿಸೆಂಬರ್ 30ರಂದು ಭಾರತೀಯ ಜನತಾ ಪಕ್ಷದ ನೇತೃತ್ವದ ಪ್ರತಿಭಟನೆಯಲ್ಲಿ ವೀರಣ್ಣ ಹುಬ್ಬಳ್ಳಿ ಮಾತನಾಡುತ್ತಾ ಶಾಸಕರು ಹಾಗೂ ರಾಜ್ಯ ಸರ್ಕಾರದ ಸಂಪುಟ ದರ್ಜೆ ಸ್ಥಾನಮಾನದ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾಗಿರುವ ಬಸವರಾಜ ರಾಯರೆಡ್ಡಿ ಅವರಿಗೆ ಅವಶ್ಯಕತೆಗಳಿಂದ ಹವಹೇಳನಕಾರಿ ಹೇಳಿಕೆ ನೀಡಿದ್ದು ಜೊತೆಗೆ ಹಾಲಿ ಶಾಸಕರನ್ನು ಯಾರು ಬಡಿಯುತ್ತಾರೋ ಅವರೇ ಮುಂದಿನ ಶಾಸಕರು ಎಂದು ತುಚ್ಚವಾಗಿ ಮಾತನಾಡಿದ್ದು ಶಾಂತಿ ಕದಡುವ ಪ್ರಚೋದನಕಾರಿ ಹೇಳಿಕೆಯನ್ನು ನೀಡಿರುತ್ತಾರೆ. ಇದಕ್ಕೆ ಸಂಬಂಧಪಟ್ಟಂತೆ ವಿಡಿಯೋ ತುಣುಕುಗಳು ಸಹ ಲಭ್ಯವಿದ್ದು ಶೀಘ್ರದಲ್ಲಿ ಬಿಡುಗಡೆಗೊಳಿಸಲಾಗುವುದು ಎಂದು ಕುಕನೂರು ತಾಲೂಕ ಕಾಂಗ್ರೆಸ್ ವಕ್ತಾರ ಸಂಗಮೇಶ ಗುತ್ತಿ ಹೇಳಿದರು ಹೇಳಿದರು.

ಸಂವಿಧಾನಿಕ ಹುದ್ದೆಯಲ್ಲಿರುವ ಶಾಸಕರಿಗೆ ಏಕವಚನದಲ್ಲಿ ಹವ್ಯಾಚ ಶಬ್ದಗಳಿಂದ ನಿಂದಿಸಿರುವುದು ಅಕ್ರಮ ಅಪರಾಧವಾಗಿದ್ದು ಸಮಾಜದಲ್ಲಿ ಹೊಡಿ ಬಡಿ ಎಂದು ಪ್ರಚೋದನಕಾರಿ ಹೇಳಿಕೆಗಳನ್ನು ನೀಡಿ ಅಶಾಂತಿಯನ್ನು ಉಂಟು ಮಾಡಿ ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುವ ಮೂಲಕ ಶಾಂತಿ ಭಂಗವನ್ನು ಉಂಟು ಮಾಡಿರುತ್ತಾರೆ ಅದರಿಂದ ವೀರಣ್ಣ ಹುಬ್ಬಳ್ಳಿ ಅವರ ಮೇಲೆ ಸೂಕ್ತ ಕಾನೂನು ಕ್ರಮವನ್ನು ಕೈಗೊಳ್ಳುವಂತೆ ಕುಕನೂರು ಪೊಲೀಸ್ ಠಾಣಾಧಿಕಾರಿ ಗುರುರಾಜ್ ಟಿ ಅವರಿಗೆ ಮನವಿ ಸಲ್ಲಿಸಲಾಯಿತು.

ಇದಕ್ಕೂ ಮುನ್ನ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಸಂಗಮೇಶ ಗುತ್ತಿ ಮಾತನಾಡುತ್ತಾ ವಿನಾಕಾರಣ ಕ್ಷೇತ್ರದ ಶಾಸಕರನ್ನು ಬಿಜೆಪಿಗರು ನಿಂದಿಸುತ್ತಿರುವುದು ಆಶ್ಚರ್ಯಕರ ಸಂಗತಿಯಾಗಿದ್ದು ಸಾರ್ವಜನಿಕವಾಗಿ ಹೇಳಿದ ಹೇಳಿಕೆ ಕುರಿತಂತೆ ಸಾರ್ವಜನಿಕವಾಗಿಯೇ ಕ್ಷಮಾಪಣೆ ಕೇಳಬೇಕು ಇಲ್ಲವಾದಲ್ಲಿ ಹೇಳಿಕೆ ನೀಡಿದವರ ಮನೆಗೆ ಮುತ್ತಿಗೆ ಹಾಕಿ ಪ್ರತಿಭಟಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ಈ ವೇಳೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರರಾದ ಸಿದ್ದಯ್ಯ ಕಳ್ಳಿ ಮಠ, ರಾಮಣ್ಣ ಭಜಂತ್ರಿ, ರಾಮಣ್ಣ ಬಂಕದಮನಿ, ಶಿವಾನಂದ್ ಬಣಕಾರ್, ವೀರಯ್ಯ ದಳಪತಿ, ಪ್ರಶಾಂತ ಆರ್ ಬೆರಳಿನ್, ಗಗನ್ ನೋಟ್ ಗಾರ, ಹನುಮಂತಪ್ಪ ನಿಡುಗುಂದಿ, ಅಶೋಕ್ ತೆ-ೂಟದ, ಕಳಕಪ್ಪ ಕುಂಬಾರ್, ಮುತ್ತಣ್ಣ ವಾಲ್ಮೀಕಿ, ಅಪ್ಪಣ್ಣ ಜೋಶಿ ಗುನ್ನಾಳ, ಯಮನೂರಪ್ಪ ಕಟ್ಟಿಮನಿ, ಬಸವರಾಜ್ ಜಂಗ್ಲಿ, ಮೊಮ್ಮದ್ ರಫಿ ಮಂಡಲಗಿರಿ, ನೂರು ಬಾಬಾ ಗೂಡಿಯಿಂದಲ, ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು.

## ವಿಮಾ ಪರಿಹಾರ ಮೊತ್ತ 3 ರಿಂದ 10 ಲಕ್ಷಕ್ಕೆ ಹೆಚ್ಚಳ: ಸಚಿವ ರಾಮಲಿಂಗಾರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಹೊಸ ವರ್ಷಕ್ಕೆ ರಾಜ್ಯ ಸರ್ಕಾರ ಬಿಎಂಟಿಸಿ ಸಿಬ್ಬಂದಿಗಳಿಗೆ ಗುಡ್ ನ್ಯೂಸ್ ನೀಡಲಾಗಿದೆ. ಗುಂಪು ವಿಮಾ ಯೋಜನೆಯ ಪರಿಹಾರದ ಮೊತ್ತವನ್ನು 3 ಲಕ್ಷದಿಂದ 10 ಲಕ್ಷಕ್ಕೆ ಹೆಚ್ಚಳ ಮಾಡಲಾಗಿದೆ. ಅಲ್ಲದೇ ಇಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು 17 ಮೃತ ನೌಕರರ ಅವಲಂಬಿತರಿಗೆ ಗುಂಪು ವಿಮಾ ಯೋಜನೆಯ ಪರಿಹಾರದ ಹಣವಾಗಿ ರೂ.10.00 ಲಕ್ಷ ವಿತರಣೆಯನ್ನು ಮಾಡಿದರು. ಈ ಕುರಿತಂತೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಸಂಸ್ಥೆಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಅಧಿಕಾರಿಗಳು ಮತ್ತು ನೌಕರರ ಹಿತದೃಷ್ಟಿಯಿಂದ ಅನಾರೋಗ್ಯ/ ಇನ್ನಿತರೆ ಕಾರಣಗಳಿಂದ ಮೃತಪಟ್ಟಂತಹ ಅಧಿಕಾರಿ/ನೌಕರರ ಅವಲಂಭಿತ ಕುಟುಂಬದ ಆರ್ಥಿಕ ಭದ್ರತೆಯನ್ನು ನೀಡುವ ನಿಟ್ಟಿನಲ್ಲಿ ಈ ಹಿಂದೆ ಜಾರಿಯಲ್ಲಿದ್ದಂತಹ ಗುಂಪು ವಿಮಾ ಯೋಜನೆಯ ಪರಿಹಾರ ಮೊತ್ತವನ್ನು ರೂ.3.00 ಲಕ್ಷಗಳಿಂದ ರೂ.10.00 ಲಕ್ಷಗಳಿಗೆ ಪರಿಷ್ಕರಿಸಿ ದಿನಾಂಕ:19.02.2024 ರಿಂದ ಜಾರಿಗೆ ತರಲಾಗಿರುತ್ತದೆ ಎಂದಿದೆ. ಈ ಯೋಜನೆಯನ್ವಯ, ಪ್ರಸ್ತುತ ಅರ್ಹ 17 ಮೃತ ನೌಕರರ ನಾಮನಿರ್ದೇಶಿತರಿಗೆ ತಲಾ 10 ಲಕ್ಷಗಳಂತೆ ಒಟ್ಟು ಒಂದು ಕೋಟಿ ಎಪ್ಪತ್ತು ಲಕ್ಷ (1,70,00,000) ರೂಪಾಯಿಗಳನ್ನು ಸನ್ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿ ರವರು ಗುಂಪು ವಿಮಾ ಪರಿಹಾರ ಮೊತ್ತವನ್ನು ಫಲಾನುಭವಿಗಳಿಗೆ ದಿನಾಂಕ:31.12.2024 ರಂದು ವಿತರಿಸಿದರು. ಹೊಸವರ್ಷಕ್ಕೆ ಬೆಂಗಳೂರಿಗರಿಗೆ ಬಿಎಂಟಿಸಿ ಗುಡ್ ನ್ಯೂಸ್ ಇನ್ನೂ ಹಬ್ಬದ ದಿನಗಳಲ್ಲಿ ಅತ್ಯುತ್ತಮವಾಗಿ ವಾಹನಗಳನ್ನು ಕಾರ್ಯಾಚರಣೆ ಮಾಡಿ ಸಂಸ್ಥೆಗೆ ಹೆಚ್ಚಿನ ಸಾರಿಗೆ ಆದಾಯ ತಂದಂತಹ ಘಟಕ ವ್ಯವಸ್ಥಾಪಕರುಗಳಿಗೆ ಪ್ರಶಾಂಸನ ಪತ್ರ ಮತ್ತು ನಗದು ಬಹುಮಾನವನ್ನು ವಿತರಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ರಾಮಚಂದ್ರನ್. ಆರ್ ರವರು ಮತ್ತು ಸಂಸ್ಥೆಯ ನಿರ್ದೇಶಕರು (ಭದ್ರತಾ ಮತ್ತು ಜಾಗೃತೆ)ರವರಾದ ಅಬ್ದುಲ್ ಅಹದ್ ರವರು ಹಾಗೂ ಇಲಾಖಾ ಮುಖ್ಯಸ್ಥರುಗಳು, ವಿಭಾಗೀಯ ನಿಯಂತ್ರಣಾಧಿಕಾರಿಗಳು, ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಪೋಸ್ಟರ್ಸ್ ಮತ್ತು ಬ್ಯಾನರ್ಸ ಗಳನ್ನು ಅನಾವರಣ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 02,– 2024ನೇ ಯುವನಿಧಿ ಯೋಜನೆಯ ನೋಂದಣಿಗೆ ಚಾಲನೆಯನ್ನು ಯಾದಗಿರಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ 2025ರ ಜನವರಿ 2ರ ಗುರುವಾರ ರಂದು ಅಪರಾಹ್ನ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೊಳ ಅವರ ಸಮ್ಮುಖದಲ್ಲಿ ವಾರ್ತಾ ಇಲಾಖೆಯ ಸಹಯೋಗದೊಂದಿಗೆ ಯುವನಿಧಿ ಯೋಜನೆಯ ಪೋಸ್ಟರ್ಸ್ ಮತ್ತು ಬ್ಯಾನರ್ಸ್‌ಗಳನ್ನು ಅನಾವರಣಗೊಳಿಸಲಾಯಿತು. ಈ ಮೂಲಕ 2024ನೇ ಯುವನಿಧಿ ಯೋಜನೆಯ ನೋಂದಣಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಕೌಶಲ್ಯಭಿವೃದ್ಧಿ ಅಧಿಕಾರಿಗಳು, ಉದ್ಯೋಗಾಧಿಕಾರಿಗಳು, ಜಿಲ್ಲಾ ಪಂಚಾಯತ್ ನೋಡಲ್ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಶ್ರೀಮಂತರ ಕೊರತೆ ಇಲ್ಲ, ಹೃದಯವಂತರ ಕೊರತೆ ಇದೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಇಂದು ನಮ್ಮ ಸಮಾಜದಲ್ಲಿ ಶ್ರೀಮಂತರಿಗೆ ಕೊರತೆ ಇಲ್ಲ ಸಾಕಷ್ಟು ಜನ ಶ್ರೀಮಂತರು ನಮಗೆ ಸಿಗುತ್ತಾರೆ ಆದರೆ ಹೃದಯವಂತರು ಸಿಗುವುದು ವಿರಳ, ಇಂದಿನ ದತ್ತಿ ನಿಧಿ ದಾನಿಗಳಾದ ಗುರಣ್ಣಗೌಡರು ಹೃದಯ ಶ್ರೀಮಂತಿಕೆ ಬೆಳಸಿ ಕೊಂಡಿರುವುದರಿಂದಲೇ ಈ ಸತ್ಕಾರ್ಯ ಮಾಡಲು ಅವರಿಗೆ ಸಾಧ್ಯವಾಗಿದೆ ಎಂದು ಸಾಹಿತಿ ಶ್ರೀಕಾಂತ ಪತ್ತಾರ ಹೇಳಿದರು. ತಾಲೂಕಿನ ಬ.ಸಾಲವಾಡಗಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ದಿವಂಗತ ಸಾಹೇಬಗೌಡ ಹೊರಗಿನಮನಿ ಇವರ ಸ್ಮರಣಾರ್ಥ ದತ್ತಿ ನಿಧಿ( ರೂ.50 ಸಾವಿರ) ಕೊಟ್ಟ ಹಿನ್ನೆಲೆಯಲ್ಲಿ ಗುರುವಾರ ಹಮ್ಮಿಕೊಂಡ ಶಾಲಾ ದತ್ತಿ ನಿಧಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ ದತ್ತಿ ನಿಧಿ ದಾನಿಗಳಾದ ಗುರಣ್ಣಗೌಡ ಹೊರಗಿನಮನಿ ಅವರು ಈ ಶಾಲೆಯಲ್ಲಿಯೇ ಕಲಿತು ಇಂದು ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ ಅವರು ದಾನ ಮಾಡಬಹುದಾದರೆ ಎಲ್ಲಿಯಾದರೂ ಮಾಡಬಹುದಾಗಿತ್ತು ಆದ್ರೆ ತಾವು ಕಲಿತ ಶಾಲೆಗೆ ದಾನವನ್ನು ಮಾಡಿ ಇಡೀ ಗ್ರಾಮದ ಜನರಿಗೆ ಶಿಕ್ಷಣ ಸಂಸ್ಥೆಗಳಿಗೆ ಸಹಕಾರ ನೀಡುವುದು ಎಷ್ಟು ಅಗತ್ಯ ಎಂಬುದನ್ನು ತೋರಿಸಿಕೊಟ್ಟಿದ್ದಾರೆ, ಈ ಗ್ರಾಮ ಸಮಾಜಕ್ಕೆ ಶ್ರೇಷ್ಠ ವ್ಯಕ್ತಿಗಳನ್ನು ಕೊಟ್ಟ ಗ್ರಾಮವಾಗಿದೆ, ಇಲ್ಲಿಯ ವಿದ್ಯಾರ್ಥಿಗಳು ಕಠಿಣ ಪರಿಶ್ರಮದಿಂದ ಜೀವನದಲ್ಲಿ ಸಾಧನೆಯನ್ನು ಮಾಡುವಂಥವವರಾಗಬೇಕು ಎಂದರು. ಸಾಹಿತಿ ಡಾ.ಬಿ.ಆರ್.ಪೊಲೀಸಪಾಟೀಲರು ತಮ್ಮ ಸ್ವರಚಿತ ಕವನಗಳನ್ನು ತಮ್ಮ ತಂಡದೊಂದಿಗೆ ಲಾವಣಿ ರೂಪದಲ್ಲಿ ಹಾಡಿ ಸಮಾಜದ ಜ್ವಲಂತ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಿದರು. ದತ್ತಿ ನಿಧಿ ದಾನಿಗಳಾದ ಗುರಣ್ಣಗೌಡ ಹೊರಗಿನಮನಿ ಅವರು ಮಾತನಾಡಿ ನನ್ನ ಈ ಕಾರ್ಯಗಳಿಗೆ ನನ್ನ ತಂದೆ ತಾಯಿ ನನಗೆ ಕೊಟ್ಟ ಸಂಸ್ಕಾರಗಳೇ ಪ್ರೇರಣೆ ಎಂದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಮುಖ್ಯ ಶಿಕ್ಷಕಿ ಸುಮಂಗಲಾ ಕೋಳೂರ ಅವರು ಇಂದು ದತ್ತಿ ನಿಧಿ ರೂಪದಲ್ಲಿ ಪಡೆದ 50 ಸಾವಿರ ಹಣವನ್ನು ಶಿಕ್ಷಕ ಹಾಗೂ ವಿದ್ಯಾರ್ಥಿಗಳ ಕಲ್ಯಾಣಕ್ಕಾಗಿ ವಿನಿಯೋಗಿಸಲಾಗುವುದು.ನಾನು ಸಹ ನನ್ನ ತಂದೆಯವರಾದ ಗುರಣ್ಣ ಕೋಳೂರ ಅವರ ಸ್ಮರಣಾರ್ಥ ರೂ.15 ಸಾವಿರ ದತ್ತಿ ನಿಧಿ ಕೊಡುತ್ತೇನೆ ಎಂದರು. ಇದೇ ಸಂದರ್ಭದಲ್ಲಿ ನೂತನವಾಗಿ ನಿರ್ಮಾಣಗೊಂಡ ಕಲಿಕಾ ಕೊಠಡಿಯನ್ನು ಡಾ.ಬಿ.ಆರ್. ಪೊಲೀಸಪಾಟೀಲ ಉದ್ಘಾಟಿಸಿದರು.ಶಿಕ್ಷಕ ಐ.ಎಂ.ಚಿಮ್ಮಲಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.ವೇದಿಕೆಯಲ್ಲಿ ಬಸಯ್ಯ ಹಿರೇಮಠ,ಎಸ್.ಡಿ.ಎಂ.ಸಿ. ಅಧ್ಯಕ್ಷ ಕುಮಾರಗೌಡ ಅನಂತರೆಡ್ಡಿ,ಶಿಕ್ಷಕ ಐ.ಎಂ.ಚಿಮ್ಮಲಗಿ,ಪ್ರಭುಗೌಡ ಅನಂತರೆಡ್ಡಿ,ಶಂಕರಗೌಡ ರಾರಡ್ಡಿ, ಯಲಪ್ಪಾಸಾಹೇಬ ಮೂಲಿಮನಿ, ಸೋಮನಗೌಡ ಅನಂತರೆಡ್ಡಿ, ಸಂಗನಗೌಡ ಲಿಂಗಾರೆಡ್ಡಿ,ಎಂ. ಎಚ್.ಚೌದ್ರಿ, ಚೆನ್ನಪ್ಪ ಬಾಗೇವಾಡಿ, ಶ್ರೀಕಾಂತ ಕೊಡೆಕಲ್ ಹಾಗೂ ಶಾಲಾ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಇದ್ದರು. ವಿದ್ಯಾರ್ಥಿನಿ ಮಲ್ಲಿಕಾ ಹೂಗಾರ ಪ್ರಾರ್ಥಿಸಿದರು.ಶಿಕ್ಷಕ ರಾಜು ಹುನಗುಂದ ಸ್ವಾಗತಿಸಿದರು.ಶಿಕ್ಷಕಿ ರತ್ನಾ ಹಂಗರಗಿ ನಿರೂಪಿಸಿ ವಂದಿಸಿದರು

## ರೈತ ವಿರೋಧಿ 3 ಕೃಷಿ ಕಾಯ್ದೆಗಳನ್ನು ವಾಪಾಸ್ಸು ಪಡೆಯಬೇಕು:ರೈತರ ಸಂಘ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಕೇಂದ್ರ ಸರ್ಕಾರ ತಂದಿದ್ದ ರೈತ ವಿರೋಧಿ 3 ಕೃಷಿ ಕಾಯ್ದೆಗಳನ್ನು ವಾಪಾಸ್ಸು ಪಡೆಯಬೇಕು. ಎಂ.ಎಸ್.ಪಿ ಯನ್ನು ಕಾನೂನಾತ್ಮಕವಾಗಿ ಜಾರಿ ಮಾಡುವುದು, ವಿದ್ಯುತ್‌ಚ್ಚಕ್ತಿ ಖಾಸಗೀಕರಣ ಮಾಡಬಾರದೆಂದು ಒತ್ತಾಯಿಸಿ ದೆಹಲಿ ಹೊರವಲಯದಲ್ಲಿ 13 ತಿಂಗಳ ಕಾಲ ಸತತವಾಗಿ ಚಳುವಳಿ ನಡೆಸಲಾಯಿತು. ಆ ಸಂದರ್ಭದಲ್ಲಿ 700ಕ್ಕೂ ಹೆಚ್ಚು ಜನ ರೈತರು ಹೋರಾಟದಲ್ಲಿ ಹುತಾತ್ಮರಾದರು. ನಂತರ ಕೇಂದ್ರ ಸರ್ಕಾರ ಚಳುವಳಿಗೆ ಮಣಿದು ರೈತ ವಿರೋಧಿ 3ಕೃಷಿ ಕಾಯ್ದೆಗಳನ್ನು ವಾಪಾಸ್ಸು ಪಡೆಯಿತು. ಮತ್ತು ಆ ಸಂದರ್ಭದಲ್ಲಿ ಎಂ.ಎಸ್.ಪಿ ಕಾನೂನು ಬದ್ಧವಾಗಿ ಜಾರಿ ಮಾಡುವುದಾಗಿ, ವಿದ್ಯುತ್ ಚ್ಛಕ್ತಿ ಖಾಸಗೀಕರಣ ಮಾಡುವುದಿಲ್ಲವೆಂದು ಲಿಖಿತ ಭರವಸೆ ಕೊಟ್ಟಿತ್ತು.

ಲಿಖಿತ ಭರವಸೆ ಕೊಟ್ಟು 2ವರ್ಷಗಳು ಕಳೆದರೂ ಎಂ.ಎಸ್.ಪಿ ಜಾರಿ ಮಾಡದ ಕಾರಣ, ಮನಃ ಹರಿಯಾಣದ ಶಂಭು ಗಡಿಯಲ್ಲಿ 8 ತಿಂಗಳುಗಳಿಂದ ರೈತರು ಚಳುವಳಿ ನಡೆಸುತ್ತಿದ್ದಾರೆ. ರೈತ ನಾಯಕ ಜಗತ್‌ಸಿಂಗ್ ದಲ್ಲೈ ವಾಲರವರು 38 ದಿನಗಳಿಂದ ಉಪವಾಸ ಸತ್ಯಾಗ್ರಹ ಕೈಗೊಂಡಿದ್ದು, ಇವರ ಆರೋಗ್ಯ ಸಂಪೂರ್ಣ ಹದಗೆಟ್ಟಿದೆ. ದೇಶದ ಕೃಷಿ ಕ್ಷೇತ್ರದ ಅಭಿವೃದ್ಧಿಗೊಸ್ಕರ ಜೀವನ್ಮರಣದ ಮಧ್ಯೆ ಹೋರಾಡುತ್ತಿದ್ದಾರೆ. ಸುಪ್ರೀಂ ಕೋರ್ಟ್ ಸಹ ಕೇಂದ್ರ ಸರ್ಕಾರ ಮತ್ತು ಪಂಜಾಬ್ ಸರ್ಕಾರ ಇವರ ಸಮಸ್ಯೆಗಳ ಬಗ್ಗೆ ಮಾತುಕತೆ ನಡೆಸಿ ನ್ಯಾಯವಾಗಿ ಪರಿಹಾರ ಕೊಟ್ಟು ಅಮೂಲ್ಯವಾದಂತಹ ಅವರ ಜೀವ ಉಳಿಸಬೇಕೆಂದು ಎರಡು ಸರ್ಕಾರಗಳಿಗೆ ಸೂಚನೆ ಕೊಟ್ಟಿದೆ. ಆದಾಗ್ಯೂ ಸರ್ಕಾರಗಳು ನಿರ್ಲಕ್ಷವಹಿಸಿವೆ.

ಈ ಚಳುವಳಿ ಪಂಜಾಬ್ ಮತ್ತು ಹರಿಯಾಣ ರೈತರಿಗೆ ಮಾತ್ರ ಸೀಮಿತವಾಗಿಲ್ಲ. ಭಾರತ ದೇಶದ ರೈತರ ಪರವಾಗಿ ಚಳುವಳಿ ನಡೆ-ಯುತ್ತಿದೆ. ಜಗತ್‌ಸಿಂಗ್ ದಲ್ಲೈವಾಲರವರು ಸಹ ಈ ದೇಶದ ರೈತರ ಪರವಾಗಿ ಗಾಂಧಿಜೀಯವರು ಹಾಕಿಕೊಟ್ಟಂತಹ ಮಾರ್ಗದಲ್ಲಿ ಅಹಿಂಸಾತ್ಮಕವಾಗಿ ಉಪವಾಸ ಸತ್ಯಾಗ್ರಹ ಮಾಡುತ್ತಿದ್ದಾರೆ. ಆದ್ದರಿಂದ ಕೇಂದ್ರ ಸರ್ಕಾರ ಮಾತುಕತೆ ಮೂಲಕ ಮೇಲ್ಕಂಡ ಸಮಸ್ಯೆಯನ್ನು ಪರಿಹರಿಸಿ ರೈತ ಮುಖಂಡನ ಪ್ರಾಣ ಉಳಿಸುವ ಕೆಲಸ ಮಾಡಬೇಕೆಂದು. ಸಹಾಯಕ ಆಯುಕ್ತರು ಮುಖಾಂತರ

ಪ್ರಧಾನಮಂತ್ರಿಗೆ ಮನವಿ ಸಲ್ಲಿಸಿದರು. ಇಲ್ಲವಾದಲ್ಲಿ ದೇಶಾದ್ಯಂತ ಚಳುವಳಿಯನ್ನು ಎಚ್ಚರಿಕೆ ನೀಡಿದರು .

## ಸಾಹಿತ್ಯದಿಂದ ಸಮುದಾಯದ ಬದುಕು ಸುಂದರ-ಡಾ.ಗೊರುಚ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.2–ಆಧುನಿಕ ಕಾಲಘಟ್ಟದಲ್ಲಿರುವ ಸಮುದಾಯಗಳು ವೈಜ್ಞಾನಿಕ, ಶೈಕ್ಷಣಿಕ ಮತ್ತು ವೈಚಾರಿಕ ಪ್ರಜ್ಞೆಯಿಂದ ಕೂಡಿವೆ. ಇಂದಿನ ಒತ್ತಡದ ಬದುಕಿನ ನಿರ್ವಹಣೆಯಲ್ಲಿ ಸಾಹಿತ್ಯ ಅಧ್ಯಯನದ ಓದು ಮುಖ್ಯ ಏಕೆಂದರೆ ಸಾಹಿತ್ಯದಿಂದ ಸಮುದಾಯದ ಬದುಕು ಸುಂದರವಾಗುತ್ತದೆ ಎಂದು ನಾಡೋಜ ಡಾ.ಗೊ.ರು.ಚನ್ನಬಸಪ್ಪ ಹೇಳಿದರು.

ಬಾಗಲಕೋಟೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ತಮಗೆ ಗುರುವಾರ ನೀಡಿದ ಅಭಿನಂದನೆ ಸ್ವೀಕರಿಸಿ, ಸಾಹಿತಿ ಆರ್.ಸಿ.ಚಿತ್ತವಾಡಗಿ ಅವರ ನೆಲಬಣ್ಣದ ಹಕ್ಕಿ ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ನಾನು ಯಾವುದೇ ಭೌತಿಕ ಸಂಪತ್ತು ಗಳಿಸಿಲ್ಲ, ಆದರೆ ಜನರ ಪ್ರೀತಿ, ವಿಶ್ವಾಸ ಸಾಕಷ್ಟು ಗಳಿಸಿದ್ದೇನೆ. ನನಗೆ ನಾಡಿನ ಸೇವೆಗಾಗಿ ಲಭಿಸಿದ ಅವಕಾಶಗಳು ಅದು ಕನ್ನಡಿಗರ ಪ್ರೀತಿಯ ಕೈಗನ್ನಡಿಯಾಗಿವೆ ಎಂದು ಹೇಳಿದರು.

ಮಾಜಿ ಶಾಸಕ, ಸಾಹಿತಿ ಎಸ್.ಜಿ.ನಂಜಯ್ಯನಮಠ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿ, ನಾಡೋಜ ಗೊರುಚ ಅವರು ಕನ್ನಡ ನಾಡಿನ ಆಸ್ತಿ ಮತ್ತು ಅಸ್ಮಿತೆಯಾಗಿದ್ದಾರೆ. ಅವರನ್ನು ಗೌರವಿಸುವ ಸುವರ್ಣಾವಕಾಶ ದೊರತಿರುವುದು ಜಿಲ್ಲೆಯ ಕನ್ನಡಿಗರ ಭಾಗ್ಯವಾಗಿದೆ ಎಂದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ.ಜಿ.ಜಿ.ಹಿರೇಮಠ ಅಭಿನಂದನಾ ನುಡಿ ಹೇಳಿ, ಶರಣ ಸಾಹಿತಿಗಳಾದ ಡಾ.ಗೊ.ರು.ಚನ್ನಬಸಪ್ಪ ಅವರು ನಾಡಿನ ಸೇವೆ ಮಾಡುತ್ತಾ ಕನ್ನಡದ ಅಮೃತನಿಧಿ ಯೋಜನೆಯಡಿ 'ಒಬ್ಬ ಕನ್ನಡಿಗ ಒಂದು ರೂಪಾಯಿ' ಎಂಬ ಘೋಷ ವಾಕ್ಯದ ಮೂಲಕ ದೇಣಿಗೆ ಸಂಗ್ರಹಿಸಿ, ಕನ್ನಡ ಸಾಹಿತ್ಯ ಪರಿಷತ್ತನ್ನು ಆರ್ಥಿಕವಾಗಿ ಸದೃಢಗೊಳಿಸಿದ ಕೀರ್ತಿಯೊಂದಿಗೆ ಕನ್ನಡ ನೆಲಕ್ಕೆ ಹೊನ್ನು ಬಿತ್ತಿದ ಕನ್ನಡದ ಕಟ್ಟಾಳು ಆಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಇಲಕಲ್ಲದ ಚಿತ್ತರಗಿ ಶ್ರೀ ವಿಜಯ ಮಹಾಂತೇಶ ಸಂಸ್ಥಾನ ಮಠದ ಪೂಜ್ಯ ಶ್ರೀ. ಗುರುಮಹಾಂತ ಸ್ವಾಮಿಗಳವರು ಸಾನಿಧ್ಯ ವಹಿಸಿ ಆಶೀರ್ವನ ನೀಡಿ, ಬಸವ ಕಲ್ಯಾಣದಲ್ಲಿ 770 ಕಂಬಗಳ ಅನುಭವ ಮಂಟಪದಲ್ಲಿ ಒಂದು ಕಂಬಕ್ಕೆ ಒಬ್ಬ ಗಣಂಗಳ ಹೆಸರಿನೊಂದಿಗೆ ಅವರ ಒಂದು ವಚನ, ಅವರ ಪರಿಚಯ ನೀಡುವಂತೆ ವ್ಯವಸ್ಥಿತವಾಗಿ ರೂಪರೇಷೆಯನ್ನು ನೀಡಿದ್ದು ನಾಡೋಜ ಡಾ.ಗೊರು. ಚನ್ನಬಸಪ್ಪನವರು. ಅವರ ಚಿಂತನೆಗಳು ನಮ್ಮ ನಾಡಿನ ಸಂಪತ್ತು ಎಂದು ತಿಳಿಸಿದರು.

ಸಾಹಿತಿ ಡಾ.ಸಿ.ಎಂ.ಜೋಶಿ 'ನೆಲಬಣ್ಣದ ಹಕ್ಕಿ' ಕೃತಿ ಪರಿಚಯಿಸಿ ಮಾತನಾಡಿದರು. ಕಸಾಪ ಜಿಲ್ಲಾಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಅಧ್ಯಕ್ಷತೆ ವಹಿಸಿ ಮಾತನಾಡಿ. ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಸ್ಥಾಪನೆ ಮಾಡುವ ಮೂಲಕ ರಾಜ್ಯದ ಜನಪದ ಕಲೆಗಳ ಸಂರಕ್ಷಣೆ, ಪ್ರದರ್ಶನ, ದಾಖಲೀಕರಣ, ಪ್ರಸಾರವಾಗುವಂತ ಮಹತ್ವದ ಕಾರ್ಯಗಳನ್ನು ನಾಡೋಜ ಡಾ.ಗೊ.ರು.ಚ ಅವರು ಮಾಡಿದ್ದಾರೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ ಮತ್ತು ಸಾಹಿತಿ ಆರ್.ಸಿ.ಚಿತ್ತವಾಡಗಿ ದಂಪತಿಗಳನ್ನು ಕಸಾಪ ಜಿಲ್ಲಾ ಘಟಕದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಮುಖ್ಯ ಅತಿಥಿಗಳಾಗಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಎ.ಎಸ್.ಪಾವಟೆ, ಡಾ.ತಾತಸಾಹೇಬ ಬಾಂಗಿ, ಲೇಖಕ ಆರ್.ಸಿ.ಚಿತ್ತವಾಡಗಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಶ್ರೀನಿವಾಸ ಬಳ್ಳಾರಿ, ಖುತುಬುದ್ದಿನ್ ಖಾಜಿ, ಮಲ್ಲಿಕಾರ್ಜುನ ಶೆಲ್ಲಿಕೇರಿ, ಮಹಾದೇವ ಕಂಬಾಗಿ, ಕಿರಣ ಬಾಳಗೊಳ, ಡಾ.ಸಣ್ಣವೀರಣ್ಣ ದೊಡ್ಡಮನಿ, ಡಾ.ಪಿ.ಎಂ.ಹುಗ್ಗಿ, ಬಸವರಾಜ ಬೋಳಿಶೆಟ್ಟಿ, ಡಾ.ಸಿದ್ದರಾಮ ಬಂಗಾರಿ, ಬಿ.ಎಫ್.ಹೊರಕೇರಿ, ಬಸವರಾಜ ಮುಕ್ಕುಪ್ಪಿ, ಬಸವರಾಜ ಮಠ, ವಿ.ಬಿ.ಚೌಕಿಮಠ, ಡಾ.ಗೀತಾ ದಾನಶೆಟ್ಟಿ, ವಿಜಯಶ್ರೀ ಮುರನಾಳ, ಡಾ.ಸುಮಂಗಲಾ ಮೇಟಿ, ಎಂ.ಹೆಚ್. ಗಾಣಿಗೇರ, ವಿ.ಟಿ.ಪೂಜಾರ, ಡಾ.ಸಂತೋಷ ಕಾಳನ್ನವರ, ಬಸವರಾಜ ಅನಗವಾಡಿ, ಡಾ.ಮೌನೇಶ ಕಮ್ಮಾರ ಹಾಗೂ ಕಸಾಪ, ಕಜಾಪ ಜಿಲ್ಲಾ ಪದಾಧಿಕಾರಿಗಳು, ಸಾಹಿತಿಗಳು, ಕಲಾವಿದರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪವಿತ್ರಾ ಜಕ್ಕಪ್ಪನವರ ಹಾಗೂ ಸಂಗಡಿಗರು ನಾಡಗೀತೆ ಹಾಡಿದರು, ಡಾ.ಲೋಕಣ್ಣ ಭಜಂತ್ರಿ ಸ್ವಾಗತಿಸಿದರು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು, ಪ್ರೊ.ಸಂಗಮೇಶ ಬ್ಯಾಳಿ ವಂದಿಸಿದರು.

## ಜ್ಞಾನ ಸಂಪಾದನೆಗೆ ರಸಪ್ರಶ್ನೆ ಸಹಕಾರಿ-ಶ್ರೀಲತಾ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.2– ರಸಪ್ರಶ್ನೆಯಂತಹ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸುವದರ ಮೂಲಕ ತಮ್ಮ ಜ್ಞಾನದ ಕ್ಷಿತಿಜವನ್ನು ವಿಸ್ತರಿಸಿಕೊಳ್ಳಬೇಕು ಎಂದು ವಿದ್ಯಾ ಪ್ರಸಾರಕ ಮಂಡಳದ ಕಾರ್ಯಾಧ್ಯಕ್ಷೆ ಶ್ರೀಲತಾ ಹೆರಂಜಲ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಪಿಯುಸಿ ಎರಡನೆಯ ವರ್ಷದ ಕಲಾ ವಿದ್ಯಾರ್ಥಿಗಳಿಗೆ ನಡೆಸಿದ ತಾಲೂಕಾ ಮಟ್ಟದ ಪಠ್ಯ ಆಧಾರಿತ ರಸಪ್ರಶ್ನೆ ಸ್ಪರ್ಧೆಯ ಪಾರಿತೋಷಕ ವಿತರಣಾ ಸಮಾರಂಭದಲಿ ಅವರು ಮಾತನಾಡಿದರು.

ವಿವಿಧ ಮೂಲಗಳಿಂದ ಹಲವು ವಿಷಯಗಳಿಗೆ ಸಂಬಂಧಿಸಿದ ಜ್ಞಾನವನನ್ನು ಸಂಪಾದನೆ ಮಾಡಲು ಈ ಸ್ಪರ್ಧೆ ಸಹಕಾರಿ. ವಿವೇಚನೆಯಿಂದ ಉತ್ತರಿಸುವ ಕಲೆಯ ಜೊತೆಗೆ ಇನ್ನೂ ಹಲವು ಕೌಶಲಗಳನ್ನು ಬೆಳೆಸಿಕೊಳ್ಳಬಹುದು ಎಂದರು.

ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ ಮಾತನಾಡಿ, ಪಿಯು ವಿದ್ಯಾರ್ಥಿಗಳು ಇಲ್ಲಿನ ಪದವಿ ಶಿಕ್ಷಣದ ಹಾಗೂ ಲಭ್ಯವಿರುವ ಸೌಲಭ್ಯಗಳ ಪ್ರಯೋಜನವನ್ನು ಪಡೆಯಬೇಕು. ಬರುವ ಶೈಕ್ಷಣಿಕ ವರ್ಷದಲ್ಲಿ ಸಂಸ್ಥೆಯ ಪದವಿ ಕಾಲೇಜಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ, ಉಚಿತ ನೇತ್ರ ತಪಾಸಣೆ, ಪ್ರತಿಭಾವಂತರಿಗೆ ರೂ.1,000 ನಗದು ಬಹುಮಾನ ಸಹಿತ ಹಲವು ಯೋಜನೆಗಳನ್ನು ರೂಪಿಸಿಲಾಗಿದ್ದು ಅವುಗಳ ಲಾಭವನ್ನು ಪಿಯು ವಿದ್ಯಾರ್ಥಿಗಳು ಪಡೆಯಬೇಕು ಎಂದು ಹೇಳಿದರು.

ಪ್ರಾಚಾರ್ಯ ಶ್ರೀನಿವಾಸ ನರಗುಂದ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗಿಯೇ ಮಹಾವಿದ್ಯಾಲಯದ ಉದ್ದೇಶವಾಗಿದೆ. ಅದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಪಠ್ಯ ಮತ್ತು ಪಠ್ಯಪೂರಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳು ಇವುಗಳ ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು.

ಕಾಲೇಜು ಉಪವಿಭಾಗದ ಅಧ್ಯಕ್ಷ ಡಾ.ಪಿ.ಆರ್.ಜೋಶಿ ವೇದಿಕೆ ಮೇಲಿದ್ದರು. ಉಪನ್ಯಾಸಕ ಸಂತೋಷ ಬೊಮ್ಮಣ್ಣವರ ನಿರೂಪಿಸಿದರು. ಕೆ.ಜಿ.ಲಮಾಣಿ ವಂದಿಸಿದರು.

ಫಲಿತಾಂಶ: ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಶ್ವೇತಾ ಕರೆಗುಪ್ಪಿ ಪ್ರಥಮ, ಶಂಕ್ರಪ್ಪ ಸಕ್ರಿ ಪದವಿ ಪೂರ್ವ ಕಾಲೇಜಿನ ಶ್ರೀನಿವಾಸ ಹೊಸಮನಿ ದ್ವಿತೀಯ ಮತ್ತು ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕಾವೇರಿ ತಿಪ್ಪಣ್ಣವರ ತೃತೀಯ ಸ್ಥಾನ ಪಡೆದು ನಗದು ಬಹುಮಾನ ಪಡೆದುಕೊಂಡರು.

## 04 ರಂದು ವಿಜಯೇಂದ್ರ ನೇತ್ರತ್ವದಲ್ಲಿ ಪ್ರಿಯಾಂಕ ಖರ್ಗೆ ಮನೆಗೆ ಮುತ್ತಿಗೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 02 : ಬೀದರ ಜಿಲ್ಲೆಯ ಭಾಲ್ಕಿ ತಾಲೂಕಿನ ಕಟ್ಟಿತುಗಾಂವ ಗ್ರಾಮದ ಯುವ ಗುತ್ತಿಗೆದಾರ ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣದ ತೆನಿಖೆಯ ದಿಕ್ಕು ತಪ್ಪಿಸುತ್ತಿರುವ ರಾಜ್ಯ ಸರ್ಕಾರವು ಇಲ್ಲಿಯವರೆ ಡೆತ್‌ನೋಟನಲ್ಲಿ ಉಲ್ಲೇಖಿಸಿರುವ ಯಾವುದೆ ಆರೋಪಿಯನ್ನು ಬಂಧಿಸಿಲ್ಲ. ಪೋಲಿಸ ಇಲಾಖೆ ಸುಕ್ತ ಸಮಯಕ್ಕೆ ಸೂಕ್ತ ಕ್ರಮ ಕೈಗೊಂಡಿದ್ದರೆ ಹಿಂದುಳಿದ ವರ್ಗಕ್ಕೆ ಸೇರಿದ ಯುವಕನ ಪ್ರಾಣ ಉಳಿಯುತ್ತಿತ್ತು. ಆತ್ಮಹತ್ತೆಯಾಗಿ ಒಂದು ವಾರ ಗತಿಸಿದರು ತೆನಿಖೆಯಲ್ಲಿ ಯಾವುದೆ ಪ್ರಗತಿಯಾಗದಿರುವುದು ಇದರ ಹಿಂದೆ ಪ್ರಾಭವಿ ಮಂತ್ರಿ ಕಾಂಗ್ರೆಸ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಪುತ್ರ ಪ್ರಿಯಾಂಕ ಖರ್ಗೆಯವರು ನೇರವಾಗಿ ಭಾಗಿಯಾಗಿರುವುದು ಕಂಡುಬರುತ್ತಿದೆ. ಆದ್ದರಿಂದ ಪ್ರಿಯಾಂಕ ಖರ್ಗೆಯವರ ರಾಜಿನಾಮೆಗೆ ಒತ್ತಾಯಿಸಿ ಹಾಗೂ ಆರೊಪಿಗಳನ್ನು ಶೀಘ್ರ ಬಂಧಿಸಿ ಮತ್ತು ಸ್ವಾಮಿಜಿಗಳ ಹಾಗೂ ಶಾಸಕರ, ನಮ್ಮ ಪಕ್ಷ ಅಧ್ಯಕ್ಷರ ಕೊಲೆಗೆ ಮಹಾರಾಷ್ಟ್ರದವರಿಗೆ ಸುಪಾರಿ ಕೊಟ್ಟಿರುವ ವಿಷಯವನ್ನು ಸಚಿನ್ ಪಾಂಚಾಳ ಡೆತ್‌ನೋಟನಲ್ಲಿ ಉಲ್ಲೇಖಿಸಿದ್ದರಿಂದ ಇದೊಂದು ಅಂತರರಾಜ್ಯ ಪ್ರಕರಣವಾಗಿರುವುದರಿಂದ ಮತ್ತು ಸಚಿನ ಕುಟುಂಬಸ್ಥರ ಒತ್ತಾಯವು ಪ್ರಕರಣವನ್ನು ಸಿ.ಬಿ.ಐ ತನಿಖೆಗೆ ಕೊಡಬೇಕೆಂದಿದ್ದು. ಸಿ.ಬಿ.ಐ ತೆನಿಖೆಗೆ ಆಗ್ರಹಿಸಿ ದಿನಾಂಕ 04-01-2025 ರಂದು ಮುಂಜಾನೆ 10:00 ಗಂಟೆಗೆ ಕಲಬುರ್ಗಿಯ ಜಗತ ವ್ರತ್ತದಿಂದ ಜಿಲ್ಲಾಧಿಕಾರಿ ಕಛೇರಿ ಮುಖಾಂತರ ನಮ್ಮ ರಾಜ್ಯಾಧ್ಯಕ್ಷರಾದ ಶ್ರೀ ಬಿ.ವೈ. ವಿಜಯೇಂದ್ರರವರ ನೇತೃತ್ವದಲ್ಲಿ ಪ್ರಿಯಾಂಕ ಖರ್ಗೆ ಮನೆಗೆ ಮುತ್ತಿಗೆ ಹಾಕಲಾಗುವುದು. ಈ ಕಾರ್ಯಕ್ರಮದಲ್ಲಿ 15,000 ಕಿಂತ ಹೆಚ್ಚಿನ ಬಿ.ಜೆ.ಪಿ. ಕಾರ್ಯಕರ್ತರು ಪಾಲ್ಗೊಳಲಿದ್ದು ಬೀದರ ಜಿಲ್ಲೆಯ 5,000 ಕ್ಕು ಹೇಚ್ಚು ಕಾರ್ಯಕರ್ತರು ಪಾಲ್ಗೊಳಲಿದ್ದಾರೆ. ಈ ಹೊರಾಟ ದಲ್ಲಿ ಜಿಲ್ಲೆಯ ಯಲ್ಲಾ ಕಾರ್ಯಕರ್ತರು, ಮುಖಂಡರು, ಪದಾಧಿಕಾರಿಗಳು ಪಾಲ್ಗೊಳ್ಳಲು ಮನವಿ ಮಾಡಿದ್ದಾರೆ.

## ವಿಭಾಗಮಟ್ಟದ ಬ್ಯಾಸ್ಕೆಟಬಾಲ್ ಟೂರ್ನಿ ನಾಳೆಯಿಂದ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 02 : ಜಿಲ್ಲಾ ಬ್ಯಾಸ್ಕೆಟಬಾಲ್ ಅಸೋಸಿಯೇಷನ್ ಹಾಗೂ ಕರ್ನಾಟಕ ರಾಜ್ಯ ಬ್ಯಾಸ್ಕೆಟಬಾಲ್ ಅಸೋಸಿಯೇಷನ್ ವತಿಯಿಂದ ಜ. 4 ಮತ್ತು 5 ರಂದು ನಗರದ ನೆಹರೂ ಕ್ರೀಡಾಂಗಣದಲ್ಲಿ ವಿಭಾಗಮಟ್ಟದ ಮುಕ್ತ ಬ್ಯಾಸ್ಕೆಟಬಾಲ್ ಟೂರ್ನಮೆಂಟ್ ಹಮ್ಮಿಕೊಳ್ಳಲಾಗಿದೆ.

ಕ್ರೀಡೆಗೆ ಉತ್ತೇಜನ ನೀಡಲು ಟೂರ್ನಮೆಂಟ್ ಸಂಘಟಿಸಲಾಗಿದೆ. ಯಶಸ್ವಿಗೆ ಭರದ ಸಿದ್ಧತೆಗಳು ನಡೆದಿವೆ ಎಂದು ನಗರದಲ್ಲಿ ಗುರುವಾರ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಜಿಲ್ಲಾ ಬ್ಯಾಸ್ಕೆಟಬಾಲ್ ಅಸೋಸಿಯೇಷನ್ ಅಧ್ಯಕ್ಷ ಸಂತೋಷ ತಾಳಂಪಳ್ಳಿ ತಿಳಿಸಿದರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್ ಉದ್ಘಾಟಿಸಲಿದ್ದಾರೆ. ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾರೋಪ ಸಮಾರಂಭದಲ್ಲಿ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ವಿಜೇತ ತಂಡಗಳಿಗೆ ಟ್ರೋಫಿ ವಿತರಿಸಲಿದ್ದಾರೆ. ಡಾ.ಎಸ್. ಎಸ್. ಸಿದ್ದಾರೆಡ್ಡಿ ಫೌಂಡೇಷನ್ ಅಧ್ಯಕ್ಷೆ ಗುರಮ್ಮ ಸಿದ್ದಾರೆಡ್ಡಿ, ರಾಷ್ಟ್ರೀಯ ಬಸವ ದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ, ನಗರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷ ಪ್ರಶಾಂತ ದೊಡ್ಡಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಬೀದರ್, ಬಳ್ಳಾರಿಯ ತಲಾ ಎರಡು ಹಾಗೂ ಕಲಬುರಗಿಯ ಮೂರು ತಂಡಗಳು ಟೂರ್ನಿಯಲ್ಲಿ ಭಾಗವಹಿಸಲಿವೆ ಎಂದು ಅಸೋಸಿಯೇಷನ್ ಕಾರ್ಯದರ್ಶಿ ಶಿವಕುಮಾರ ಹೇಳಿದರು.

ಟೂರ್ನಿ ಕ್ರೀಡಾಪಟುಗಳ ಪ್ರತಿಭೆ ಅನಾವರಣಕ್ಕೆ ವೇದಿಕೆ ಒದಗಿಸಲಿದೆ ಎಂದು ನಗರಸಭೆ ಸದಸ್ಯ ರಾಜಾರಾಮ ಹೇಳಿದರು.

ಟೂರ್ನಿಯಲ್ಲಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಬೇಕು ಎಂದು ಅಸೋಸಿಯೇಷನ್ ಸದಸ್ಯೆ ಮಂಗಲಾ ಭಾಗವತ್ ಮನವಿ ಮಾಡಿದರು.

ಕ್ರೀಡಾಪಟುಗಳಾದ ಎಸ್. ಎಸ್. ಭಟ್ಟ ಲೋಕೇಶ್ವರ, ಜಾನ್ ಇದ್ದರು.

## ಬಿಜೆಪಿಯಿಂದ ಪ್ರಿಯಾಂಕ್ ಖರ್ಗೆ ಹೆಸರು ಕೆಡಿಸುವ ಯತ್ನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 02 : ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣದಲ್ಲಿ ರಾಜಕೀಯ ಲಾಭಕ್ಕಾಗಿ

ಬಿಜೆಪಿಯವರು ಸಚಿವ ಪ್ರಿಯಾಂಕ್ ಖರ್ಗೆ ಹೆಸರು ಕೆಡಿಸಲು ಪ್ರಯತ್ನಿಸುತ್ತಿದ್ದಾರೆ

ಎಂದು ಕಲಬುರಗಿ-ಬೀದರ್-ಯಾದಗಿರಿ ಹಾಲು ಒಕ್ಕೂಟದ ನಿರ್ದೇಶಕರೂ ಆದ ಗೊಂಡ ಸಮಾಜದ ಮುಖಂಡ

ಮಲ್ಲಿಕಾರ್ಜುನ ಬಿರಾದಾರ ಆರೋಪಿಸಿದ್ದಾರೆ. ಆತ್ಮಹತ್ಯೆ ಪ್ರಕರಣದಲ್ಲಿ ಸಚಿವರ ಯಾವುದೇ ಪಾತ್ರವಿಲ್ಲ. ಡೆತ್‌ನೋಟ್‌ನಲ್ಲಿ ಅವರ ಹೆಸರು ಕೂಡ ಇಲ್ಲ. ಆದರೂ, ಬಿಜೆಪಿ ನಾಯಕರು ಅವರ ವಿರುದ್ಧ ಅಪಪ್ರಚಾರ ನಡೆಸುತ್ತಿರುವುದು ಹಾಗೂ ರಾಜೀನಾಮೆಗೆ ಒತ್ತಾಯಿಸುತ್ತಿರುವುದು ಕ್ಷುಲ್ಲಕ ರಾಜಕೀಯ ಎಂದು ಟೀಕಿಸಿದ್ದಾರೆ.



ಪ್ರಿಯಾಂಕ್ ಖರ್ಗೆ ಅವರೇ ಮುಖ್ಯಮಂತ್ರಿಗೆ ಪತ್ರ ಬರೆದು ಪ್ರಕರಣದ ನಿಷ್ಪಕ್ಷಪಾತ

ತನಿಖೆಗೆ ಕೋರಿದ್ದರು. ಈಗಾಗಲೇ ಪ್ರಕರಣದ ಸಿಐಡಿ ತನಿಖೆ ನಡೆಯುತ್ತಿದೆ. ಆದರೆ,

ಬಿಜೆಪಿಯರು ಸುಖಾ ಸುಮ್ಮನೆ ಗುಲ್ಲೆಬ್ಬಿಸುತ್ತಿದ್ದಾರೆ ಎಂದು ಆಪಾದಿಸಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರು ಪ್ರಭಾವಿ ರಾಜಕಾರಣಿಯಾಗಿ ಹೊರಹೊಮ್ಮಿದ್ದಾರೆ. ಸಚಿವರಾಗಿ

ಉತ್ತಮ ಕೆಲಸ ಮಾಡಿ ಜನ ಮೆಚ್ಚುಗೆ ಗಳಿಸಿದ್ದಾರೆ. ಸಚಿನ್ ಪ್ರಕರಣದಲ್ಲಿ ಅವರ ಹೆಸರು

ಎಳೆದು ತಂದಿರುವುದು ಅವರ ವರ್ಚಸ್ಸು ಕುಗ್ಗಿಸುವ ಷಡ್ಯಂತ್ರವಾಗಿದೆ ಎಂದಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಒಳ್ಳೆಯ

ಆಡಳಿತ ನೀಡುತ್ತಿದೆ. ಬಿಜೆಪಿಯವರಿಗೆ ಸರ್ಕಾರ ಅಥವಾ ಸಚಿವರ ಬಗ್ಗೆ ಮಾತನಾಡಲು ಯಾವುದೇ

ವಿಷಯಗಳಿಲ್ಲ. ಜನರ ದೃಷ್ಟಿ ಬೇರೆಡೆ ಸೆಳೆಯಲು ಆತ್ಮಹತ್ಯೆ ಪ್ರಕರಣ ಬಳಸಿಕೊಳ್ಳಲು

ಹೊರಟಿದ್ದಾರೆ. ಆದರೆ, ಜನ ಪ್ರಜ್ಞಾವಂತರಿದ್ದಾರೆ ಎನ್ನುವುದನ್ನು ಬಿಜೆಪಿಯವರು

ಅರಿಯಬೇಕು ಎಂದು ಹೇಳಿದ್ದಾರೆ.

## ಸಚಿನ್ ಪಾಂಚಾಳ್ ಆತ್ಮಹತ್ಯೆ ; ನಿಷ್ಪಕ್ಷಪಾತ ತನಿಖೆಗೆ ವಿಶ್ವಕರ್ಮ ಮಹಾ ಒಕ್ಕೂಟ ಆಗ್ರಹ



ಬೀದರ. ಜ.02 : ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಕಟ್ಟಿತುಗಾಂವ ಗ್ರಾಮದ ನಿವಾಸಿ, ಪ್ರಥಮದ ದರ್ಜೆ ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣದ ಕುರಿತು ಸರ್ಕಾರ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕು ಎಂದು ವಿಶ್ವಕರ್ಮ ಮಹಾ ಒಕ್ಕೂಟದ ರಾಜ್ಯಾಧ್ಯಕ್ಷ ವಿಜಯಕುಮಾರ ಪತ್ತಾರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಆತ್ಮಹತ್ಯೆಗೂ ಮುನ್ನ ಬರೆದಿರುವ ಡೆತ್‌ನೋಟ್ ಸಚಿನ್ ಪಾಂಚಾಳ್ ಅವರೇ ಬರೆದಿದ್ದು ಎಂಬುವುದು ವಿಧಿ ವಿಜ್ಞಾನ ಪ್ರಯೋಗಾಲಯ ದೃಢಪಡಿಸಿದೆ. ಹೀಗಾಗಿ ಪತ್ರದಲ್ಲಿ ಹೆಸರಿಸಿರುವ ಆರೋಪಿಗಳ ವಿರುದ್ಧ ಹಾಗೂ ಈ ಪ್ರಕರಣದಲ್ಲಿ ಕರ್ತವ್ಯ ಲೋಪವೆಸಗಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಹಣಕ್ಕಾಗಿ ಒತ್ತಡ ಹಾಕಿದ ರಾಜು ಕಪ್ನೂರು ಯಾರು ಅವರು ಯಾವ ಕಾರಣಕ್ಕಾಗಿ ಸಚಿನ್‌ಗೆ ಹಣ ನೀಡಿದರು. ಹಣಕ್ಕಾಗಿ ಒತ್ತಡ ಹಾಕಿ ಆತ್ಮಹತ್ಯೆಯಂತಹ ಕ್ರೂರ ನಿರ್ಧಾರ ಕೈಗೊಳ್ಳುವುದಕ್ಕೆ ಪ್ರೇರಣೆಯಾಗಿದ್ದು ಯಾಕೆ ?ಈ ನಿಟ್ಟಿನಲ್ಲಿ ಸರ್ಕಾರ ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರಿಗೆ ಸೂಕ್ತ ಶಿಕ್ಷೆಯಾವಂತೆ ಮಾಡಬೇಕು, ಸಚಿನ್ ಕುಟುಂಬ ಈಗ ಅನಾಥವಾಗಿದೆ. ವಿವಾಹವಾಗಬೇಕಾದ ಇಬ್ಬರು ಯುವತಿಯರಿದ್ದಾರೆ. ಹಾಗಾಗಿ ಸರ್ಕಾರ ಕೂಡಲೇ ಸಚಿನ್ ಕುಟುಂಬಕ್ಕೆ ಪರಿಹಾರ ಕೊಡಬೇಕು ಮತ್ತು ಸಚಿನ್ ಕಿರಿಯ ಸಹೋದರಿಗೆ ಉದ್ಯೋಗ ನೀಡಬೇಕು, ಬಹಳ ಮುಖ್ಯವಾಗಿ ಸಚಿನ್‌ಗೆ ಬೆದರಿಕೆ ಬಂದಾಗ ಕುಟುಂಬದ ಸದಸ್ಯರು ದೂರು ನೀಡಲು ಮುಂದಾಗಿದ್ದರು. ಆಗ ಪೊಲೀಸ್ ಅಧಿಕಾರಿಗಳು ದೂರು ಸ್ವೀಕರಿಸಿ, ಕ್ರಮ ಕೈಗೊಂಡಿದರೆ, ಸಚಿನ್ ಅವರ ಸಾವನ್ನು ತಪ್ಪಿಸಬಹುದಾಗಿತ್ತು. ಇಲ್ಲಿ ಪೋಲೀಸರು ಮಾಡಿದ ಸೇವಾ ಲೋಪವೇ ಸಚಿನ್ ಸಾವಿಗೆ ಕಾರಣ ಎಂದು ಆರೋಪಿಸಿದ ಅವರು, ಪೊಲೀಸ್ ಅಧಿಕಾರಿಗಳನ್ನು ಕೂಡಲೇ ಅಮಾನತು ಮಾಡಬೇಕು ಎಂದು ಆಗ್ರಹಿಸಿದರು.

ಸಚಿನ್ ಪಾಂಚಾಳ್ ಸಾವಿನ ಸುತ್ತ ಈಗ ರಾಜಕೀಯ ಕೆಸರೆರೆಚಾಟ ನಡೆಯುತ್ತಿದ್ದು, ಇದು ಸತ್ತ ವ್ಯಕ್ತಿಗೆ ಮಾಡುವ ಅವಮಾನ. ಹಿಂದುಳಿದ ಸಮುದಾಯದಿಂದ ಬಂದು, ತನ್ನ ಶ್ರಮದಿಂದ ಮೇಲೆ ಬಂದ ವ್ಯಕ್ತಿಯ ಬದುಕು ಸಾವಿನಲ್ಲಿ ಕೊನೆಗೊಳ್ಳುವಂತಾಗಿದೆ. ಇಂತಹ ಸಂದರ್ಭದಲ್ಲಿ ಕುಟುಂಬದ ಜೊತೆಗೆ ನಿಲ್ಲಬೇಕಾದ ಪಕ್ಷಗಳು ರಾಜಕೀಯ ಮಾಡುತ್ತಿವೆ. ಸರ್ಕಾರ ಇವುಗಳಿಗೆ ಆಸ್ಪದ ನೀಡದೆ ನಿಷ್ಪಕ್ಷಪಾತ ತನಿಖೆ ನಡೆಸಿ ಸಚಿನ್ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಈ ವಿಷಯವಾಗಿ ರಾಜ್ಯ ಸರ್ಕಾರವು ಸೂಕ್ತವಾಗಿ ಸ್ಪಂದಿಸಿ, ಯಾವುದೇ ಕ್ರಮ ಕೈಗೊಳದೇ ಇದ್ದ ಪಕ್ಷದಲ್ಲಿ ಬೆಂಗಳೂರಿನ ಫ್ರೀಡ್‌ಂಪಾರ್ಕ್‌ನಲ್ಲಿ ಉಗ್ರ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಒಕ್ಕೂಟದ ದಾವಣಗೆರೆ ಜಿಲ್ಲಾ ಅಧ್ಯಕ್ಷ ಬಿ.ನಾಗೇಂದ್ರ ಆಚಾರ್ಯ, ಬೀದರ್ ಜಿಲ್ಲಾ ಅಧ್ಯಕ್ಷ ಶ್ರೀನಿವಾಸ ಪಾಂಚಾಳ, ಬಿ.ಪಿ.ಜಗನ್ನಾಥ, ಸೋಮನಾಥ ಪಾಂಚಾಳ, ಕೊಟ್ರೇಶ್, ಮೃತ ಸಚಿನ್ ಪಾಂಚಾಳ ಸಹೋದರಿ ಸುರೇಖಾ ಪಾಂಚಾಳ, ಸಹೋದರ ವಿಜಯಕುಮಾರ ಪಾಂಚಾಳ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆ , ಹಾಗೂ ಶ್ರೀ ಮಾಣಿಕ ಪ್ರಭು ಪತ್ತಿನ ಸೌಹಾರ್ದ ಸಹಕಾರಿ ( ನಿ) ಇದರ ಕ್ಯಾಲೆಂಡರ್ ನ್ನು ಮಾಣಿಕನಗರದ ಪೀಠಾಧಿಪತಿಗಳಾದ ಶ್ರೀ ಡಾ. ಜ್ಞಾನ ನರಾಜ ಪ್ರಭುಗಳು. ಗುರುವಾರ ಬಿಡುಗಡೆ ಗೊಳಿಸಿದರು.

## ಕದಳಿವನದ ಅಭಿವೃದ್ಧಿಗೆ ಪ್ರಯತ್ನ: ಶಾಸಕ ಪಿ. ಸಂಜೀವ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ (ಮಲ್ಲಪ್ಪಾ ಟಿ ಹಾಸಗೊಂಡ)

ಭಾಲ್ಕಿ:ಜ.2: ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರ ಸದಾಶಯದಂತೆ 12ನೇ ಶತಮಾನದ ಮಹಾನ್ ಶರಣೆ ಅಕ್ಕಮಹಾದೇವಿಯ ಐಕ್ಯಸ್ಥಳ ಕದಳಿವನದ ಅಭಿವೃದ್ಧಿಗೆ ಪ್ರಯತ್ನಿಸುತ್ತಿದ್ದು, ಈ ಸಂಬಂಧ ಮುಖ್ಯಮಂತ್ರಿ ರೇವಂತರೆಡ್ಡಿ ಅವರ ಜತೆ ಈಗಾಗಲೇ ಸಮಾಲೋಚನೆ ನಡೆಸಿದ್ದೇನೆ ಎಂದು ನಾರಾಯಣಖೇಡ ಶಾಸಕ ಡಾ. ಪಿ. ಸಂಜೀವ ರೆಡ್ಡಿ ಹೇಳಿದರು.

ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯ ಕಂಗಟಿ ಮಂಡಲದ ನಾಗೂರ (ಬಿ) ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಲಿಂ. ಭಾಗೀರಥಿ ರಾಚಪ್ಪ ಕಾಡೋದೆ ಅವರ 31ನೇ ಸ್ಮರಣೋತ್ಸವ ಹಾಗೂ ಸರ್ವ ಶಿವಶರಣೆಯರ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಅವರು ನನ್ನ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಶೀಘ್ರದಲ್ಲಿ ಮತ್ತೊಮ್ಮೆ ಮುಖ್ಯಮಂತ್ರಿ ಜೊತೆ ಸಭೆ ಏರ್ಪಡಿಸಿ ಕದಳಿವನದ ಅಭಿವೃದ್ಧಿಪಡಿಸುವ ದಿಸೆಯಲ್ಲಿ ಪ್ರಾಮಾಣಿಕ ಪ್ರಯತ್ನ ಮುಂದುವರೆಸುತ್ತೇನೆ ಎಂದು ತಿಳಿಸಿದರು.

ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಭಾಗೀರಥಿ ತಾಯಿ ಬಸವಲಿಂಗ ಪಟ್ಟದ್ದೇವರಂಥ ಮಹಾನ್ ಗುರುವಿಗೆ ಜನ್ಮ ನೀಡಿರುವ ಶ್ರೇಷ್ಠ ಮಾತೆ ಆಗಿದ್ದಾರೆ.

ಭಾಲ್ಕಿಯ ಹಿರೇಮಠದ ಪೀಠಾಧ್ಯಕ್ಷರಾದ ಪಟ್ಟದ್ದೇವರು ರಾಜ್ಯ, ರಾಷ್ಟ್ರಮಟ್ಟದಲ್ಲಿ ತಮ್ಮ ಸೇವಾ ಸಾಧನೆ ಮೂಲಕ ಪ್ರಸಿದ್ಧಿ ಪಡೆದಿದ್ದಾರೆ. ಮುಂದಿನ ದಿನಮಾನಗಳಲ್ಲಿ ನಾಗೂರ ಗ್ರಾಮದ ಕೀರ್ತಿ ದೇಶ್ಯಾದ್ಯಂತ ಪಸರಿಸುತ್ತದೆ ಎಂದು ನುಡಿದರು.

ಪ್ರಮುಖರಾದ ಸೋಮನಾಥ ಮುದ್ದಾ, ವಿಜಯಕುಮಾರ ಪಾಟೀಲ, ಶಿವರುದ್ರಯ್ಯಾ ಸ್ವಾಮಿ, ಸಿದ್ದಪ್ಪ ಮೂಲಗೆ ಮಾತನಾಡಿದರು.

ಗಣ್ಯರಾದ ಮೋಹನರೆಡ್ಡಿ, ಶಿವಕುಮಾರ ಘಾಟೆ, ಶಿವಶರಣಪ್ಪ ವಲ್ಲೆಪೂರೆ, ಸಂಜೀವಕುಮಾರ ಜುಮ್ಮಾ, ಅಭೀಷೇಕ ಸ್ವಾಮಿ, ನವಲಿಂಗ ಪಾಟೀಲ, ಸೋಮನಾಥ ಕಾಡೋದೆ, ಸಂಗಪ್ಪ ಕಾಡೋದೆ, ಬಸವರಾಜ ಪಾಟೀಲ, ಹಾವಗಿ ಶರಣರು, ಮಲ್ಲಿಕಾರ್ಜುನ ಗೊಗ್ಗಾ ಇದ್ದರು.

ರಚಿತ, ಶ್ರಾವ್ಯ ವಚನ ಪ್ರಾರ್ಥನೆ ನಡೆಸಿಕೊಟ್ಟರು.


ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯದ ವಿದ್ಯಾರ್ಥಿನಿಯರು ವಚನ ಪಠಣ ಹಾಗೂ ಮಹಾಕ್ರಾಂತಿ ನಾಟಕ ಪ್ರದರ್ಶಿಸಿ ಸಭಿಕರ ಮನ ಸೆಳೆದರು.

## ಕಾರಂಜಾ ಜಲಾಶಾಯಕ್ಕೆ ಕಲುಷಿತ ನೀರು- ತಡೆ ಹಿಡಿಯಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.2: ತಾಲ್ಲೂಕಿನ ಆನಂದವಾಡಿ ನೀಡೆಬನ ಹಾಗೂ ಎಕಲಾಸಪುರವಾಡಿ ಯಾಗಿ ಹಾದು ಹೋಗುವ ಕಾರಂಜಾ ಜಲಾಶಾಯಕ್ಕೆ ಎರಡು ಮೂರು ದಿವಸದಿಂದ ಕಲುಷಿತವಾದ ನೀರು ನದಿಗೆ ಹರಿ ಬಿಟ್ಟಿರುವದರಿಂದ ಜನ ಭಯಭಿತರಾಗಿದ್ದಾರೆ.

ಕಲುಷಿತ ನೀರಿನಿಂದ ನದಿಯಲ್ಲಿ ಇರುವ ಮಿನುಗಳು, ಜಾನುವಾರುಗಳು ಸಾವನ್ನಪ್ಪಿದಾವೆ. ಹಾಗೆ ಜನ ತಮ್ಮ ಹೋಲಕ್ಕೆ ನದಿಯ ನೀರು ಬಿಡುವದಕ್ಕೆ ಹೊಲದ ಬೆಳೆಗಳಾದ ಕಬ್ಬು, ತೊಗರೆ, ಕಡಲೆ, ಗೋಧಿ, ಜೋಳ ಸುಟ್ಟು ಹೋಗುತ್ತವೆ ಎಂಬ ಭಯದಿಂದ ರೈತರು ತಮ್ಮ ಹೊಲಗಳಿಗೆ ನದಿಯ ನೀರು ಬಿಡಲಿ ಹಿಂಜರುತ್ತಿದ್ದಾರೆ.



ಸಾಯಂಕಾಲ ಆದ ನಂತರ ಆ ನದಿಯ ನೀರು ಗ್ರಾಮದಲ್ಲಿ ಎಲ್ಲಾ ತುಂಬಾ ಗಬ್ಬು ವಾಸನೆ ಬರುತ್ತಾ ಇದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳಿಗೆ ಕರೆ ಮಾಡಿದರು ಕೂಡ ಅವರು ಕವಡೆ ಕಾಸಿನ ಕಿಮ್ಮತ್ತು ಕೊಡುತ್ತಿಲ್ಲಾ ಆದ್ದರಿಂದ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಕೂಡಲೆ ಗಮನ ಹರಿಸಿ ಆನಂದವಾಡಿ ನೀಡೆಬನ ಎಕಲಾಸಪೂರವಾಡಿ ಮಾರ್ಗವಾಗಿ ಹಾದು ಹೋಗುವ ಕಾರಂಜಾ ಜಲಾಶಯಕ್ಕೆ ಬಿಟ್ಟಿರುವ ಕಲುಷಿತ ನೀರು ಕೂಡಲೆ ತಡೆ ಹಿಡಿಯಬೇಕು.

ಕೂಡಲೆ ಕಾರಂಜಾ ಜಲಾಶಯದಿಂದ ಹೊಸ ನೀರು ಬೀಡಬೇಕು. ಕಲುಷಿತ ನೀರು ನದಿಯ ಮೂಲಕ ಹೊರ ಹೋಗುತ್ತದೆ. ಇದ್ದರಿಂದ ಜನರಿಗೆ ನೆಮ್ಮದಿ ಸಿಗುತ್ತದೆ. ಈ ಕಲುಷಿತ ನೀರು ನದಿಯಲ್ಲಿ ದಿನ ನದಿಯ ದಡದಲ್ಲಿ ಬರುವ ಗ್ರಾಮಗಳಲ್ಲಿನ ಜನ ಪ್ರಾಣಿ ,ಹಾಗೂ ಬೇಳೆಗಳಿಗೆ ಹಾನಿಯುಂಟು ಮಾಡುತ್ತದೆ. ಆದ್ದರಿಂದ ಕೂಡಲೆ ಕಾರಂಜಾ ನದಿಯ ದಡದಲ್ಲಿ ಬರುವ ಆನಂದವಾಡಿ, ನಿಡೆಬೇನ, ಎಕಲಾಸಪೂರವಾಡಿ, ಇಂಚುರ ಗ್ರಾಮಗಳಲ್ಲಿನ ಜನರಿಗೆ ತುಂಬಾ ತೊಂದರೆಯಾಗುತ್ತಿದೆ. ಆದ್ದರಿಂದ ಕೂಡಲೇ ಈ ಕಲುಷಿತ ನೀರು ನದಿಯಲ್ಲಿ ಹರಿಯುವುದನ್ನು ತಡೆ ಹಿಡಿಯಬೇಕು ಇಲ್ಲದಿದ್ದಲಿ ಹೋರಾಟ ಮಾಡಲಾಗುವುದು ಎಂದು ಯುವ ಕ್ರಾಂತಿ ಸಂಘಟನೆಯ ಜಿಲ್ಲಾಧ್ಯಕ್ಷರಾದ ಶ್ರೀ ಸಂಗಮೇಶ ಭೂರೆ ಅವರು ಎಚ್ಚರಿಸಿದ್ದಾರೆ.

## ಸಿದ್ದೇಶ್ವರ ಶ್ರೀ ಸರ್ವಶ್ರೇಷ್ಠ ಜ್ಞಾನ ದಾಸೋಹಿ: ಗುರುಬಸವ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ (ಮಲ್ಲಪ್ಪಾ ಟಿ ಹಾಸಗೊಂಡ)

ಭಾಲ್ಕಿ:ಜ.2: ಸರ್ವಶ್ರೇಷ್ಠ ಜ್ಞಾನ ದಾಸೋಹಿ ಆಗಿದ್ದ ಸಿದ್ದೇಶ್ವರ ಸ್ವಾಮೀಜಿ ಭಕ್ತಿ ಮತ್ತು ಶಾಂತಿಮಾರ್ಗದ ಭೋದಕರು ಆಗಿದ್ದರು ಎಂದು ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು. ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಸಿದ್ದೇಶ್ವರ ಸ್ವಾಮೀಜಿ ಅವರ 2ನೇ ಸ್ಮರಣೋತ್ಸವ ನಿಮಿತ್ತ ಹಮ್ಮಿಕೊಂಡಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಿದ್ದೇಶ್ವರ ಸ್ವಾಮೀಜಿ ಅವರು ತಮ್ಮ ಪ್ರವಚನದ ಮೂಲಕ ಲಕ್ಷಾಂತರ ಸದ್ಭಕ್ತರ ಮನಸ್ಸುಗಳನ್ನು ಅರಳಿಸಿ ಅವರ ಜೀವನದಲ್ಲಿ ಸುಖ, ನೆಮ್ಮದಿ ಬರುವಂತೆ ಮಾಡಿದ್ದರು.

ನಡೆ, ನುಡಿ ಒಂದಾಗಿಸಿಕೊಂಡಿರುವ ಪೂಜ್ಯರು ಎಲ್ಲರಿಗೂ ಮಾದರಿ ಆಗಿದ್ದರು. ಅವರು ಅತಿ ಹೆಚ್ಚು ದಿನ ಪ್ರವಚನ ಮಾಡಿರುವುದು ಭಾಲ್ಕಿಯ ಚನ್ನಬಸವಾಶ್ರಮದಲ್ಲಿ ಎಂದು ಹೇಳಲಿಕ್ಕೆ ಹೆಮ್ಮೆ ಎನಿಸುತ್ತದೆ ಎಂದು ತಿಳಿಸಿದರು.

ಬಸವಲಿಂಗ ಪಟ್ಟದ್ದೇವರ ಸೇವಾಕಾರ್ಯಗಳ ಬಗ್ಗೆ ಸಿದ್ದೇಶ್ವರ ಅಪ್ಪಾಜಿಗೆ ಅತ್ಯಂತ ಗೌರವಿತ್ತು. ಭಾಲ್ಕಿಯ ಶ್ರೀಗಳ ಸೇವಾಜೀವನ ನೋಡಿ ಕಲಿಯಬೇಕೆಂದು ಯುವ ಯತಿಗಳಿಗೆ ಹೇಳುತ್ತಿದ್ದರು.

ಅಲ್ಲಮಪ್ರಭುಗಳ ವಚನ-ನಿರ್ವಚನ ಪುಸ್ತಕ ಶರಣ ಸಾಹಿತ್ಯಕ್ಕೆ ಪೂಜ್ಯರು ನೀಡಿರುವ ಬಹುದೊಡ್ಡ ಕೊಡುಗೆಯಾಗಿದೆ ನುಡಿದರು.

ಪ್ರಮುಖರಾದ ವಿದ್ಯಾವತಿ ಸೋಮನಾಥ ಅಷ್ಟೂರೆ, ಶುಭಾಂಗಿ ಚನ್ನಬಸವಣ್ಣ ಬಳತೆ, ಅಕ್ಷತಾ ಯೊಗೇಶ, ಉಮಾದೇವಿ ಖೇಳಗೆ, ಶರಣಪ್ಪಾ ಬಿರಾದಾರ, ಶಿವಪುತ್ರ ದಾಬಶೆಟ್ಟಿ, ದೀಪಕ ಠಮಕೆ, ಬಾಬು ಬೆಲ್ದಾಳ, ಐಶ್ವರ್ಯಾ ರವೀಂದ್ರ ಸೇರಿದಂತೆ ಇತರರು ಇದ್ದರು.


ಕರ್ನಾಟಕ ಸರಕಾರ

ಜಿಲ್ಲಾ ಪಂಚಾಯತ ಯಾದಗಿರಿ

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ, ಯಾದಗಿರಿ**

ದೂರವಾಣಿ ಸಂಖ್ಯೆ:08473-251312 dhoyadgiri2@gmail.com

ಸಂ/ಜಿ.ಆ.ಕು.ಕ.ಅ/ಯಾದ/ 08/2023-24 ದಿನಾಂಕ: 01-01-2025.

**:: ಇ-ಟೆಂಡರ್ ಪ್ರಕಟಣೆ ::**

ವಿಷಯ :- ಈ ಕಾರ್ಯಾಲಯದ ಅಧೀನ ಆರೋಗ್ಯ ಸಂಸ್ಥೆಗಳಿಗೆ ಬೇಕಾಗುವ ವೈದ್ಯಕೀಯ ಸಲಕರಣೆಗಳನ್ನು ಖರಿದಿಸಲು E-Procurement ಅಲ್ಪಾವದಿ ಮರು ಟೆಂಡರ್ ಆಹ್ವಾನಿಸಲಾಗಿದೆ.

ಈ ಕಾರ್ಯಾಲಯದ ಅಧೀನ ಆರೋಗ್ಯ ಸಂಸ್ಥೆಗಳಿಗೆ ಬೇಕಾಗುವ ವೈದ್ಯಕೀಯ ಸಲಕರಣೆಗಳನ್ನು ಖರಿದಿಸಲು E-Procurement ಅಲ್ಪಾವದಿ ಮರು ಟೆಂಡರ್‌ಆಹ್ವಾನಿಸಲಾಗಿದೆ.

**:: E-Procurementನಲ್ಲಿ ವಿವಿಧ ಹಂತದ ಘಟನಾವಳಿಗಳನ್ನು ಜರುಗಿಸಲು ಸಿದ್ದಪಡಿಸಿದ ಕಾಲಬದ್ಧ ವೇಳಾಪಟ್ಟಿ ::**

1) ಟೆಂಡರ್ ಪ್ರಕಟಣೆ ಹೊರಡಿಸುವ ದಿನಾಂಕ: 01-01-2025 2) ಟೆಂಡರ್ ನಲ್ಲಿ ಕಾಯ್ದಿರಿಸಿದ ಮೊತ್ತ ಮತ್ತು ಇ.ಎಂ.ಡಿ ಮೊತ್ತ ಅಂದಾಜು ಮೊತ್ತ 24,78,450.00ರೂ.ಗಳು.ಇ.ಎಂ.ಡಿ. ಮೊತ್ತ 50,000/- ರೂಗಳು 3) ಆನ್‌ಲೈನ್ ಮೂಲಕ ಟೆಂಡರ್ ಬುಕ್‌ಲೆಟ್, ಆಸಕ್ತ ಟೆಂಡರ್‌ದಾರರಿಗೆ ಒದಗಿಸುವಂತೆ ಮಾಡುವದು 01-01-2025 4) ಟೆಂಡರ್ ಬುಕ್‌ಲೆಟ್ ಅಪ್‌ಲೋಡ್ ಮಾಡಲು ಪ್ರಾರಂಭ ದಿನಾಂಕ: 01-01-2025 5) ಟೆಂಡರ್ ಬುಕ್‌ಲೆಟ್ ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ ಮತ್ತು ವೇಳೆ:15-01-2025 ಸಾಯಂಕಾಲ 04:00 PM 6) ತಾಂತ್ರಿಕ ಲಕೋಟೆ ತೆರೆಯುವ ದಿನಾಂಕ ಮತ್ತು ವೇಳೆ: 17-01-2025 11:00 AM

ಸಹಿ/- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಯಾದಗಿರಿ.

ವಾ.ಸಾ.ಸಂ.ಇ/ಯಾದಗಿರಿ/388/ಕೆ.ಎಸ್.ಎಂ.ಸಿ.&ಎ/2024-25


**Printed, Published and Owned by : Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad - 585330. Editor: Ramesh Reddy, Office Ph. No: +91 9449732000.**